VOLUME: 16 | 19 JUNE 2026 | ಶುಕ್ರವಾರ | RS: 2 | PAGE: 06 ISSUE: 129 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ರೀಲ್ಸ್‌ನಲ್ಲಿ ಸದಾ ಮಿಂಚುವ ನಿವೇದಿತಾ ಗೌಡಡ್ಯಾನ್ಸರ್ ಕಿಶನ್ ಜೊತೆ ರೀಲ್ಸ್ ಮಾಡಿದ್ದಾರೆ. ಹೇ ನವಿಲೇ ಹಾಡಿಗೆ ಇಬ್ಬರೂ ಮಾದಕ ಹೆಜ್ಜೆ ಹಾಕಿದ್ದಾರೆ. ನವಿಲು ಗರಿ ಧರಿಸಿ ಸಖತ್ತಾಗಿ ಈ ಜೋಡಿ ಮಿಂಚಿದೆ. ಸರಳ, ಆಕರ್ಷಕ ಹೆಜ್ಜೆಯೊಂದಿಗೆ ರೀಲ್ಸ್ ಮಾಡಿರುವ ನಿವೇದಿತಾ ಗೌಡ ಹಾಗೂ ಕಿಶನ್ ಹಾಡಿನ ಥೀಮ್‌ನ್ನು ಉತ್ತಮವಾಗಿ ಬಳಸಿಕೊಂಡಿದ್ದಾರೆ. ನವಿಲುಗರಿ ಬಳಸಿಯೇ ನಿವೇದಿತಾ ಡ್ರೆಸ್ ಮಾಡಲಾಗಿದೆ.



BHARATHA SARATHI
KANNADA DAILY NEWS PAPER

CALL 9740160669

# ಭಾರತ ಸಾರಥಿ

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಕೇಂದ್ರ ಸಚಿವ ಕುಮಾರಸ್ವಾಮಿ ತಮ್ಮ ಪಕ್ಷದ ನಾಲ್ವರು ಶಾಸಕರು ಅಡ್ಡಮತದಾನ ಮಾಡಿರೋದಾಗಿ ಹೇಳ್ತಿದ್ದಾರೆ. ಆದ್ರೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ದಳ ಪಡೆಯ ಆರೇಳು ಶಾಸಕರು ಕ್ರಾಸ್ ವೋಟಿಂಗ್ ಮಾಡಿದ್ದಾರೆ ಅಂತಿದ್ದಾರೆ. ಹೀಗಾಗಿ ಮೈತ್ರಿ ನಾಯಕರ ನಡುವೆ ಅಂಕಿ ಸಂಖ್ಯೆಯ ಗೊಂದಲ ಇರುವುದು ಇಲ್ಲಿ ಗೆದ್ದು ಕಾಣುತ್ತಿದೆ. ಕಾಂಗ್ರೆಸ್ ಬೆಂಬಲಿಸಿದವರಿಗೆ ಮುಂದಿನ ಚುನಾವಣೆಗೆ ಟಿಕೆಟ್, ಬಿಜೆಪಿ-ಜೆಡಿಎಸ್ ಶಾಸಕರ ಅಭಿವೃದ್ಧಿಗೆ ಅನುದಾನದ ಭರವಸೆ ಕೊಟ್ಟಿರೋ ಮಾತು ರಾಜಕೀಯ ಪಡಸಾಲೆಯಲ್ಲಿ ಹರಿದಾಡ್ತಿದೆ.

# ರಾಜ್ಯ ನಾಯಕರ ವಿರುದ್ಧ ಹೈಕಮಾಂಡ್ ಗರಂ

ಬೆಂಗಳೂರು: ಕರ್ನಾಟಕ ವಿಧಾನಪರಿಷತ್‌ನ 7 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್‌ನ ಐವರು, ಬಿಜೆಪಿಯ ಇಬ್ಬರು ಅಭ್ಯರ್ಥಿಗಳು ಗೆಲುವಿನ ನಗೆ ಬೀರಿದ್ದಾರೆ. ಈ ಫಲಿತಾಂಶ ರಾಜ್ಯ ರಾಜಕಾರಣದ ನಿರೀಕ್ಷೆಯಂತೆಯೇ ಆಗಿದೆ. ಆದ್ರೆ ಅಚ್ಚರಿ ಎಂಬಂತೆ, ರಾಜ್ಯ ಸರ್ಕಾರದ ವಿರುದ್ಧ ಒಗ್ಗಟ್ಟು ಪ್ರದರ್ಶಿಸಬೇಕಿದ್ದ ಬಿಜೆಪಿ, ಜೆಡಿಎಸ್ ಶಾಸಕರು ಪಕ್ಷಕ್ಕೆ ಕೈಕೊಟ್ಟಿದ್ದು, 11 ಶಾಸಕರು ಕಾಂಗ್ರೆಸ್ ಅಭ್ಯರ್ಥಿಗಳ ಪರ ಮತ ಹಾಕಿದ್ದಾರೆ. ಇದು, ರಾಜ್ಯ ಕಾಂಗ್ರೆಸ್‌ನಲ್ಲಿ ಆಂತರಿಕ ಕಲಹ ಇದೆ ಅಂತಾ ಸದಾ ದಾಳ ಉರುಳುತ್ತಿದ್ದ ದೋಸ್ತಿಗಳಿಗೆ ಮುಖಭಂಗವಾಗುವಂತೆ ಮಾಡಿದೆ. ಅಲ್ಲದೇ ಇದೀಗ ದೋಸ್ತಿಗಳ ನಡುವೆ ಅಡ್ಡಮತದಾನದ ಸಂಖ್ಯೆಯ ಗೊಂದಲ ಸೃಷ್ಟಿಯಾಗಿದೆ. ಇನ್ನೊಂದೆಡೆ ಅಡ್ಡಮತದಾನವನ್ನು ಗಂಭಿರವಾಗಿ ಪರಿಗಣಿಸಿರುವ ಬಿಜೆಪಿ ಹೈಕಮಾಂಡ್ ರಾಜ್ಯ ನಾಯಕರಿಗೆ ಬುಲಾವ್ ನೀಡಿದೆ.

11 ಎನ್‌ಡಿಎ ಶಾಸಕರು ಅಡ್ಡಮತ ದಾನವನ್ನು ಬಿಜೆಪಿ ಹೈಕಮಾಂಡ್ ಗಂಭೀರವಾಗಿ ಪರಿಗಣಿಸಿದ್ದು, ರಾಜ್ಯ ನಾಯಕರಿಗೆ ದೆಹಲಿಗೆ ಬರುವಂತೆ ಬುಲಾವ್ ನೀಡಿದೆ. ಅಡ್ಡಮತದಾನದಿಂದ ಅಸಮಾಧಾನಗೊಂಡಿರುವ ಹೈಕಮಾಂಡ್ ಈ ಬಗ್ಗೆ ಚರ್ಚಿಸಲು ರಾಜ್ಯಾಧ್ಯಕ್ಷ ವಿಜಯೇಂದ್ರ ವಿಪಕ್ಷ ನಾಯಕ ಆರ್ ಅಶೋಕ್ ಹಾಗೂ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್ ದಾಸ್ ಅವರಿಗೆ ದೆಹಲಿಗೆ ಬರುವಂತೆ ಬುಲಾವ್ ಕೊಟ್ಟಿದೆ.

ಕೇಂದ್ರ ಸಚಿವ ಕುಮಾರಸ್ವಾಮಿ ತಮ್ಮ ಪಕ್ಷದ ನಾಲ್ವರು ಶಾಸಕರು ಅಡ್ಡಮತದಾನ ಮಾಡಿರೋದಾಗಿ ಹೇಳ್ತಿದ್ದಾರೆ. ಆದ್ರೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ದಳ ಪಡೆಯ ಆರೇಳು ಶಾಸಕರು ಕ್ರಾಸ್ ವೋಟಿಂಗ್ ಮಾಡಿದ್ದಾರೆ ಅಂತಿದ್ದಾರೆ. ಹೀಗಾಗಿ ಮೈತ್ರಿ ನಾಯಕರ ನಡುವೆ ಅಂಕಿ ಸಂಖ್ಯೆಯ ಗೊಂದಲ ಇರುವುದು ಇಲ್ಲಿ ಗೆದ್ದು ಕಾಣುತ್ತಿದೆ.

ಕಾಂಗ್ರೆಸ್ ಬೆಂಬಲಿಸಿದವರಿಗೆ ಮುಂದಿನ ಚುನಾವಣೆಗೆ ಟಿಕೆಟ್, ಬಿಜೆಪಿ–ಜೆಡಿಎಸ್ ಶಾಸಕರ ಅಭಿವೃದ್ಧಿಗೆ ಅನುದಾನದ ಭರವಸೆ ಕೊಟ್ಟಿರೋ ಮಾತು ರಾಜಕೀಯ ಪಡಸಾಲೆಯಲ್ಲಿ ಹರಿದಾಡ್ತಿದೆ.

ಕೇಸರಿ–ದಳ ಶಾಸಕರಿಗೆ ಸಕಲ ರೀತಿಯಲ್ಲಿ ಸಹಾಯ ಹಸ್ತ ಭರವಸೆ ಕಾರಣಕ್ಕೆ ಕ್ರಾಸ್ ವೋಟಿಂಗ್ ಆಗಿರೋದಾಗಿ ತಿಳಿದುಬಂದಿದೆ.

ಇನ್ನು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿಯವರು ಸಂಖ್ಯಾಬಲ ಇದ್ದದಿದ್ರೂ ಜೆಡಿಎಸ್ ಅಭ್ಯರ್ಥಿಯನ್ನ ಕಣಕ್ಕಿಳಿಸಿದ್ದರು. ಹೀಗೆ ತಮ್ಮದೇ ಪಕ್ಷದ ಶಾಸಕರ ನಿಷ್ಠೆಯನ್ನ ಸತ್ವಪರೀಕ್ಷೆಗೆ ಒಳಪಡಿಸಿದ್ದರು. ಆದ್ರೆ ಒಂದಿಬ್ಬರು



ಶಾಸಕರು ಅಡ್ಡಮತದಾನ ಮಾಡೋ ಬಗ್ಗೆ ಹೆಚ್‌ಡಿಕೆಗೆ ನಿರೀಕ್ಷೆ ಇತ್ತಂತೆ. ಆದ್ರೆ ಮೂಲಗಳ ಮಾಹಿತಿ ಪ್ರಕಾರ ನಾಲ್ಕೈದು ಶಾಸಕರು ಕಾಂಗ್ರೆಸ್ ಅಭ್ಯರ್ಥಿಗಳಿಗೆ ಅಡ್ಡಮತದಾನ ಮಾಡಿದ್ದಾರೆ. ಈ ಬೆಳವಣಿಗೆ ಹೆಚ್‌ಡಿಕೆಗೆ ಬೇಸರ ತರಿಸಿದೆ. ಹೀಗಾಗಿ ಕುಮಾರಸ್ವಾಮಿ ಅಡ್ಡಮತದಾನವನ್ನ ನಂಬಿಕೆ ದ್ರೋಹ ಎಂದು ವಿಶ್ಲೇಷಣೆ ಮಾಡಿದ್ದಾರೆ.

ಪರಿಷತ್ ಪ್ರತಿಷ್ಠೆಯ ಕದನದಲ್ಲಿ ಕಾಂಗ್ರೆಸ್ ಗೆದ್ದು ಬೀಗಿದೆ. ರಾಜ್ಯ ಕಾಂಗ್ರೆಸ್‌ನೊಳಗೆ ಆತಂರಿಕ ಕಲಹ ಅಂತಿದ್ದ ವಿಪಕ್ಷಗಳಲ್ಲೇ ದೊಡ್ಡ ಬಿರುಕು ಇರೋದು ಬಟಾಬಯಲಾಗಿದೆ. ಮೈತ್ರಿಯೊಳಗಿನ ಅಸಮಾಧಾನ, ಗೊಂದಲ ಹಾಗೂ ಪಕ್ಷದ ಮೇಲಿನ ಬೇಸರದ ಬಗ್ಗೆ ಸದ್ಯ ರಾಜಕೀಯ ವಿಶ್ಲೇಷಣೆ ನಡೀತಿದೆ.

ಒಂದಿಬ್ಬರು ಶಾಸಕರು ಅಡ್ಡಮತದಾನ ಮಾಡಬಹುದು ಎಂದು ಕುಮಾರಸ್ವಾಮಿ ಅವರು ಮೊದಲೇ ನಿರೀಕ್ಷೆ ಮಾಡಿದ್ದರು. ಆದ್ರೆ, ನಿರೀಕ್ಷೆಗಿಂತ ಹೆಚ್ಚಿನ ಶಾಸಕರು ಅಡ್ಡಮತದಾನ ಮಾಡಿರುವುದು ಕುಮಾರಸ್ವಾಮಿಯ ಆಕ್ರೋಶ, ಬೇಸರಕ್ಕೆ ಕಾರಣವಾಗಿದೆ. ಹೀಗಾಗಿ ಕುಮಾರಸ್ವಾಮಿ ಅವರು ಎಐಖ ಶಾಸಕಾಂಗ ಸಭೆ ಕರೆದಿದ್ದಾರೆ. ಇಂದು (ಜೂನ್ 19) ಬೆಂಗಳೂರಿನ ಜೆ.ಪಿ.ನಗರದಲ್ಲಿರುವ ಎಚ್.ಡಿ.ಕುಮಾರಸ್ವಾಮಿ ನಿವಾಸದಲ್ಲಿ ಶಾಸಕಾಂಗ ಸಭೆ ನಡೆಯಲಿದೆ. ಈ ಮೂಲಕ ಅಡ್ಡ ಮತದಾನ ಮಾಡಿದವರ ಪತ್ತೆ ಕೆಲಸ ನಡೆದಿದೆ. ಅಲ್ಲದೇ ಅಡ್ಡ ಮತದಾನ ಮಾಡಿದವರ ವಿರುದ್ಧ ಶಿಸ್ತು ಕ್ರಮದ ಬಗ್ಗೆ ಇಂದಿನ ಸಭೆಯಲ್ಲಿ ಚರ್ಚೆ ನಡೆಯಲಿದ್ದು, ಕೆಲ ಶಾಸಕರ ತಲೆದಂಡವಾಗುವ ಸಾಧ್ಯತೆಗಳಿವೆ.

ಅಡ್ಡಮತದಾನ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಬಿಜೆಪಿಯ ಕೆಲ ಶಾಸಕರು, ತಮ್ಮ ನಾಯಕರುಗಳನ್ನ ಭೇಟಿ ಮಾಡುತ್ತಿದ್ದಾರೆ. ಬೈರತಿ ಬಸವರಾಜ್, ಚಂದ್ರು ಲಮಾಣಿ ಹಾಗೂ ಕೃಷ್ಣಾ ನಾಯ್ಕ್ ವಿರುದ್ಧ ಅಡ್ಡಮತದಾನ ಆರೋಪ ಕೇಳಿ ಬಂದಿದೆ.

ಹೀಗಾಗಿ ಈ ಎಲ್ಲಾ ಶಾಸಕರು ರಾಜ್ಯಾಧ್ಯಕ್ಷ, ವಿಪಕ್ಷ ನಾಯಕರನ್ನು ಭೇಟಿ ಮಾಡಿ ಸ್ಪಷ್ಟನೆ ನೀಡಿದ್ದಾರೆ.

ಈ ಬಗ್ಗೆ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಪ್ರತಿಕ್ರಿಯಿಸಿದ್ದು, ನಾವು ನಿಗದಿ ಮಾಡಿದ್ದ ನಾಲ್ಕು ಮತಗಳು ಜೆಡಿಎಸ್ ಗೆ ಹೋಗಿವೆ. ದುರ್ಯೋಧನ ಐಹೊಳೆ, ಚಂದ್ರು ಲಮಾಣಿ, ಕೃಷ್ಣಾ ನಾಯ್ಕ್ ಮತ್ತು ಯತ್ನಾಳ್ ಹೆಸರು ಮಾಧ್ಯಮದಲ್ಲಿ ಕೆಲವು ಬರುತ್ತಿರುವ ಕಾರಣ ಕೃಷ್ಣಾ ನಾಯ್ಕ್ ಮತ್ತು ಚಂದ್ರು ಲಮಾಣಿ ಬೇಸರಗೊಂಡಿದ್ದಾರೆ. ನಮ್ಮ ವರದಿ ಬರುವವರೆಗೂ ಯಾರ ಮೇಲೂ ಅನುಮಾನ ವ್ಯಕ್ತಪಡಿಸುವುದಿಲ್ಲ. ಯಾರ ಮೇಲೂ ಅನುಮಾನ ಪಡುವುದು ಬೇಡ. ವರದಿ ಬಂದ ಮೇಲೆ ನಾವೇ ಅಡ್ಡ ಮತದಾನ ಮಾಡಿದವರ ವಿರುದ್ಧ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಸ್ಪಷ್ಟಪಡಿಸಿದ್ದಾರೆ.

ಒಟ್ಟಿನಲ್ಲಿ ಪರಿಷತ್ ಚುನಾವಣೆಯಲ್ಲಿ ನಡೆದ ಅಡ್ಡಮತದಾನ ದೋಸ್ತಿ ಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್‌ನಲ್ಲಿ ಮಹತ್ವ ರಾಜಕೀಯ ಬೆಳವಣಿಗೆಗಳು ನಡೆಯುತ್ತಿದ್ದು, ಅಂತಿಮವಾಗಿ ಅಡ್ಡಮತದಾನ ಮಾಡಿದವರನ್ನು ಪತ್ತೆ ಮಾಡಿ ಯಾವ ಕ್ರಮಕೈಗೊಳ್ಳುತ್ತವೆ ಎಂದು ಕಾದುನೋಡಬೇಕಿದೆ.

# ಗ್ಯಾರಂಟಿಗೆ ಮತ್ತೆ ಅರ್ಜಿ ಹಾಕುವಂತಿಲ್ಲ: ಸಿಎಂ ಡಿಕೆಶಿ

ಬೆಂಗಳೂರು: ರಾಜ್ಯ ಸರ್ಕಾರ ಗ್ಯಾರಂಟಿ ಫಲಾನುಭವಿಗಳಿಗೆ ಗುಡ್ ನ್ಯೂಸ್ ಕೊಟ್ಟಿದೆ. ಗ್ಯಾರಂಟಿ ಯೋಜನೆಗಳಿಗೆ ಮರು ಅರ್ಜಿ ಸಲ್ಲಿಸುವಂತಿಲ್ಲ ಎಂಬ ಮಹತ್ವದ ನಿರ್ಧಾರವನ್ನು ಸರ್ಕಾರ ಕೈಗೊಂಡಿದೆ.

ಗ್ಯಾರಂಟಿ ಪರಿಷ್ಕರಣೆ ಪೂರ್ವಭಾವಿಯಾಗಿ ಗ್ಯಾರಂಟಿ ಕಮಿಟಿ ಹಾಗೂ ಅಧಿಕಾರಿಗಳ ಜೊತೆ ಸಿಎಂ ಶುಕ್ರವಾರ ಸಭೆ ನಡೆಸಿದರು. ಗ್ಯಾರಂಟಿ ಯೋಜನೆಗೆ ಮರು ಅರ್ಜಿ ಸಲ್ಲಿಸುವಂತಿಲ್ಲ. ಹೊಸದಾಗಿ ಅರ್ಜಿ ಬದಲಾಗಿ ಮರುಪರಿಶೀಲನೆ ಮಾಡಲು ಸಭೆಯಲ್ಲಿ ಸರ್ಕಾರ ತೀರ್ಮಾನಿಸಿದೆ.

ಈಗಿರುವ ಫಲಾನುಭವಿಗಳ ಮರು ಪರಿಶೀಲನೆ ನಡೆಸಲು ತೀರ್ಮಾನಿಸಲಾಗಿದೆ. ಮರು ಪರಿಶೀಲನೆ ಯಾರು ಮಾಡಬೇಕು, ಹೇಗೆ ಮಾಡಬೇಕು ಎಂಬುದನ್ನು ಮೂರು ದಿನದೊಳಗೆ ಅಂತಿಮಪಡಿಸಿ ತಿಳಿಸಲು ಸಿಎಂ ಸೂಚನೆ ನೀಡಿದ್ದಾರೆ.

ಒಬ್ಬೇ ಒಬ್ಬ ಅರ್ಹ ಫಲಾನುಭವಿಗಳಿಗೆ ತೊಂದರೆ ಆಗಬಾರದು. ಅನರ್ಹ ಫಲಾನುಭವಿಗಳ ದುರುಪಯೋಗಕ್ಕೆ ಮಾತ್ರ ಬ್ರೇಕ್ ಹಾಕಬೇಕು ಎಂದು ಅಧಿಕಾರಿಗಳಿಗೆ ಸಿಎಂ ಡಿ.ಕೆ.ಶಿವಕುಮಾರ್ ಸೂಚಿಸಿದರು.

ಹಲವು ಫಲಾನುಭವಿಗಳು ಬ್ಯಾಂಕ್ ಸಾಲ ಪಡೆದಿರುತ್ತಾರೆ. ಸಾಲದ ಖಾತೆಗೆ ಗೃಹಲಕ್ಷ್ಮಿ ಹಣ ಹೋದ ತಕ್ಷಣ ಆ ಹಣ ಸಾಲದ ಮೊತ್ತಕ್ಕೆ ಜಮೆ ಆಗಿಬಿಡುತ್ತದೆ. ಆದ್ದರಿಂದ ಅಂತಹ ಫಲಾನುಭವಿಗಳು ಖಾತೆ ಬದಲಾಯಿಸಿರುತ್ತಾರೆ. ಇಂಥಾ ಫಲಾನುಭವಿಗಳಿಗೆ ತೊಂದರೆ ಆಗಬಾರದು ಎಂದು ತಿಳಿಸಿದರು.

ಗೃಹಜ್ಯೋತಿ ಗ್ಯಾರಂಟಿ ಯೋಜನೆ ಜಾರಿ ಆಗುವಾಗ ಹೆಚ್ಚಿನ ದುರುಪಯೋಗ ಆಗದ ಹಾಗೆ ಎಚ್ಚರಿಕೆ ವಹಿಸಿದ್ದರು. ಇದೇ ಎಚ್ಚರಿಕೆ ಇತರೆ ಯೋಜನೆಗಳಲ್ಲೂ ಅನುಸರಿಸಿದ್ದರೆ ದುರುಪಯೋಗದ ಪ್ರಮಾಣ ಕಡಿಮೆ ಆಗುತ್ತಿತ್ತು. ಮೃತಪಟ್ಟಿರುವ ಫಲಾನುಭವಿಗಳಿಗೂ ಗೃಹಲಕ್ಷ್ಮಿ ಹಣ ಹೋಗುತ್ತಿರುವುದು ಪತ್ತೆಯಾಗಿದೆ. ಈ ರೀತಿ ದುರುಪಯೋಗ ಆಗಬಾರದು. ಗೃಹಲಕ್ಷ್ಮಿ ಹಣ ಫಲಾನುಭವಿಗಳ ಖಾತೆಗೆ ಜಮೆಯಾದ ತಕ್ಷಣ ಅವರ ಮೊಬೈಲಿಗೆ ವಾಯ್ಸ್ ಮೆಸೇಜ್ ಮೂಲಕ ಖಚಿತಪಡಿಸಬೇಕು ಎಂದು ಹೇಳಿದರು.

# ಬಿಡದಿ ಟೌನ್‌ಶಿಪ್: ಮತ್ತಷ್ಟು ರೈತರಿಗೆ ಮೋಸ..?

ಬೆಂಗಳೂರು: ಟೌನ್ ಶಿಪ್ ನೆಪದಲ್ಲಿ ಬಿಡದಿ ಮತ್ತು ಹಾರೋಹಳ್ಳಿ ಹೋಬಳಿಯ ಕೃಷಿ ಭೂಮಿಯನ್ನು ವಶಪಡಿಸಿಕೊಳ್ಳುವುದನ್ನು ಕೈ ಬಿಡಬೇಕೆಂದು ಒತ್ತಾಯಿಸಿ ಜೆಡಿಎಸ್ ಪಕ್ಷವು ರಾಜ್ಯ ಮುಖ್ಯ ಕಾರ್ಯದರ್ಶಿ ಶಾಲಿನಿ ರಗ್ನೇಶ್ ಅವರಿಗೆ ಮನವಿ ಸಲ್ಲಿಸಿತು.

ಪಕ್ಷದ ಗ್ರೇಟರ್ ಬೆಂಗಳೂರು ಅಧ್ಯಕ್ಷ ರಮೇಶ್ ಗೌಡ ಅವರ ನೇತೃತ್ವದಲ್ಲಿ ಮುಖ್ಯ ಕಾರ್ಯದರ್ಶಿ ಅವರನ್ನು ಭೇಟಿಯಾದ ಪಕ್ಷದ ನಿಯೋಗವು, ಬಿಡದಿ ಭಾಗದಲ್ಲಿ ನೀರಾವರಿ ಮತ್ತು ಕೃಷಿಯೋಗ್ಯ ಫಲವತ್ತಾದ ಭೂಮಿ ಇದ್ದು ಅದನ್ನು ರಿಯಲ್ ಎಸ್ಟೇಟ್ ಉದ್ದೇಶದ ಟೌನ್ಶಿಪ್ ಯೋಜನೆಗೆ ಕಸಿದುಕೊಳ್ಳುವುದು ಅಕ್ಷಮ್ಯ ಎಂದು ಮುಖ್ಯ ಕಾರ್ಯದರ್ಶಿಗೆ ದೂರಿತು.

ಈಗಾಗಲೇ ಮೊದಲ ಹಂತದ ಭೂಸ್ವಾದಿನದ ನೋಟಿಫಿಕೇಶನ್ ಹೊರಟಿಸಿರುವ ರಾಜ್ಯ ಸರ್ಕಾರವು ಸಂಪೂರ್ಣವಾಗಿ ರೈತ ವಿರೋಧಿ ನಿಲುವು ತಳೆದಿದ್ದು, ಮುಂದಿನ ತಿಂಗಳು ಬೃಹತ್ ಪ್ರಮಾಣದಲ್ಲಿ ಭೂಸ್ವಾಧೀನ ವಿಸ್ತರಿಸಲು ಹೊರಟಿರುವ ಸರ್ಕಾರದ ನಿಲುವು ಹಾಗೂ ಭೂಸ್ವಾಧೀನ ಯೋಜನೆಯನ್ನು ಕೂಡಲೇ ಕೈ ಬಿಡುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ಮನವಿ ಪತ್ರವನ್ನು ಮುಖ್ಯ ಕಾರ್ಯದರ್ಶಿಗಳಿಗೆ ಸಲ್ಲಿಸಿದ್ದೇವೆ ಎಂದು ಹೆಚ್.ಎಂ. ರಮೇಶ್ ಗೌಡ ಅವರು ಮಾಧ್ಯಮಗಳಿಗೆ ತಿಳಿಸಿದರು.

ಸರ್ಕಾರ ಕಿತ್ತುಕೊಳ್ಳುತ್ತಿದೆ. ಇದರಿಂದ ಸುಮಾರು 750 ಕುಟುಂಬಗಳು ಬೀದಿಪಾಲಾಗುತ್ತಿವೆ. ಈ ಪೈಕಿ 614 ಅಂದರೆ 81% ರೈತರು ಸಣ್ಣ ಮತ್ತು ಅತೀಸಣ್ಣ ಹಿಡುವಳಿದಾರರು ಆಗಿದ್ದಾರೆ. ಒಪ್ಪತ್ತಿನ ಊಟಕ್ಕಾಗಿ ಕಷ್ಟಪಡುತ್ತಿರುವ ಶ್ರಮಜೀವಿಗಳು ಅವರಾಗಿದ್ದಾರೆ. ಅರ್ಧ ಎಕರೆ, ಕಾಲು ಎಕರೆ ಭೂಮಿ ಹೊಂದಿರುವ ಅವರು ತಮ್ಮ ಬದುಕನ್ನು ರೂಪಿಸಿಕೊಂಡಿದ್ದಾರೆ. ಅಂತಹ ರೈತರನ್ನು ಒಕ್ಕಲಿಸುವುದು ಅಮಾನವೀಯ ಎಂದು ರಮೇಶಗೌಡರು ಕಿಡಿಕಾರಿದರು.

ಇದಲ್ಲದೆ ಮುಂದಿನ ತಿಂಗಳು ಸುಮಾರು 7481ರಿಂದ 9,600 ಎಕರೆಯಷ್ಟು ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಸಂಚು ರೂಪಿಸಿದೆ. ರೈತರು ಭೂಮಿ ಕೊಡಲು ಇಷ್ಟಪಡುತ್ತಿಲ್ಲ. ಹೀಗಾಗಿ ಸರ್ಕಾರವೇ ಕೋರ್ಟ್ ನಲ್ಲಿ ಪರಿಹಾರ ಹಣವನ್ನು ಜಮೆ ಮಾಡಿ ಭೂಮಿಯನ್ನು ಕಸಿದುಕೊಳ್ಳಲು ಹುನ್ನಾರ ನಡೆಸಿದೆ. ಇದರಿಂದ ಸಾವಿರಾರು ರೈತರು ಭೂಮಿಯನ್ನು ಕಳೆದುಕೊಳ್ಳಲಿದ್ದಾರೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಸರ್ಕಾರ ಭೂಮಿಯನ್ನು ಕಸಿದುಕೊಳ್ಳುತ್ತಿರುವ ಭಾಗವು ಹೈನುಗಾರಿಕೆಯ ಸಮೃದ್ಧ ಜಾಗವಾಗಿದ್ದು, ಮಾಸಿಕ ಸುಮಾರು 6 ಲಕ್ಷಕ್ಕೂ ಹೆಚ್ಚು ಲೀಟರ್ ಹಾಲನ್ನು ಬೆಂಗಳೂರು ಡೇರಿಗೆ ಪೂರೈಕೆ ಮಾಡುತ್ತಿದೆ. ಭೂಮಿ ರಿಯಲ್ ಎಸ್ಟೇಟ್ ಕುಳಗಳ ಪಾಲಾದರೆ ಅಷ್ಟೂ ಹಾಲಿನ ಉತ್ಪಾದನೆ ನಿಂತು ಹೋಗಲಿದೆ ಎಂದು ರಮೇಶಗೌಡರು ಕಳವಳ ವ್ಯಕ್ತಪಡಿಸಿದರು.

ನಿಯೋಗದಲ್ಲಿ ಸಂದರ್ಭದಲ್ಲಿ ಪಕ್ಷದ ಬೆಂಗಳೂರು ಪಶ್ಚಿಮ ಜಿಲ್ಲಾಧ್ಯಕ್ಷ ಟಿ.ತಿಮ್ಮೇಗೌಡ, ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಹೆಚ್.ಸಿ.ಕೃಷ್ಣ, ಬೆಂಗಳೂರು ಪೂರ್ವ ಜಿಲ್ಲಾಧ್ಯಕ್ಷ ನಟರಾಜ್ ಗಂಗಾಧರ್ ಹಾಗೂ ಗ್ರೇಟರ್ ಬೆಂಗಳೂರು ಮಹಾಪ್ರಧಾನ ಕಾರ್ಯದರ್ಶಿ ಎಸ್.ರಮೇಶ ಮುಂತಾದವರು ಇದ್ದರು.



ಬೆಂಗಳೂರಿನ ನಾಗರಭಾವಿಯಲ್ಲಿಂದು ಶ್ರೀಮದ್ ಜಗದ್ಗುರು ಶಂಕರಾಚಾರ್ಯ ಶ್ರೀ ಸೋಂದಾ ಸ್ವರ್ಣವಲ್ಲೀ ಮಹಾಸಂಸ್ಥಾನ ಮಠದ ಸ್ವರ್ಣರಶ್ಮೀ ಕೌಶಲ್ಯಾಭಿವೃದ್ಧಿ ಮತ್ತು ತರಬೇತಿ ಸಂಸ್ಥೆಯ ಕಟ್ಟಡದ ಶಿಲಾನ್ಯಾಸ ಸಮಾರಂಭದಲ್ಲಿ ಕೇಂದ್ರ ಸಚಿವ ವಿ.ಸೋಮಣ್ಣ ಪಾಲ್ಗೊಂಡು, ಪರಮಪೂಜ್ಯರಾದ ಶ್ರೀ ಶ್ರೀಮದ್ ಗಂಗಾಧರೇಂದ್ರ ಸರಸ್ವತಿ ಮಹಾಸ್ವಾಮೀಜಿಗಳವರ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ, ಶಾಸಕರಾದ ಶ್ರೀ ಎನ್. ಮುನಿರತ್ನ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಮ್ಮ ಪತ್ನಿಯೊಂದಿಗೆ ವಿಐಪಿ ಬ್ರೇಕ್ ದರ್ಶನದ ಮೂಲಕ ಆಂಧ್ರದಲ್ಲಿನ ತಿರುಮಲದ ಶ್ರೀವೆಂಕಟೇಶ್ವರ ಸ್ವಾಮಿಯ ದರ್ಶನ ಪಡೆದುಕೊಂಡರು. ಟಿಟಿಡಿ ಅಧಿಕಾರಿಗಳು ಮುಖ್ಯಮಂತ್ರಿಗಳನ್ನು ಸ್ವಾಗತಿಸಿ ಭೇಟಿಗೆ ವ್ಯವಸ್ಥೆ ಮಾಡಿದರು. ನಂತರ ಸಿಎಂ ದೇವಾಲಯವನ್ನು ಪ್ರವೇಶಿಸಿ, ದೇವರಿಗೆ ಪ್ರಾರ್ಥನೆ ಸಲ್ಲಿಸಿ, ತಮ್ಮ ಹರಕೆಗಳನ್ನು ಪೂರೈಸಿದರು.

# ಕದನ ವಿರಾಮ: ಇಂದಿನಿಂದ ಜಾರಿ

ನವದೆಹಲಿ: ಕಳೆದ ಹಲವು ತಿಂಗಳುಗಳಿಂದ ಇಸ್ರೇಲ್ ಸೇನೆ ಮತ್ತು ಲೆಬನಾನ್ ಮೂಲದ ಹೆಜ್ಬೊಲ್ಲಾ ಸಂಘಟನೆಯ ನಡುವೆ ಭಾರಿ ಪ್ರಮಾಣದ ಕ್ಷಿಪಣಿ ದಾಳಿಗಳು ಹಾಗೂ ವೈಮಾನಿಕ ದಾಳಿಗಳು ನಡೆಯುತ್ತಿದ್ದವು. ಈ ಯುದ್ಧವನ್ನು ಕೊನೆಗಾಣಿಸಲು ಅಮೆರಿಕ ಮತ್ತು ಇತರ ಅಂತಾರಾಷ್ಟ್ರೀಯ ಮಧ್ಯಸ್ಥಿಕೆದಾರರು ನಿರಂತರ ರಾಜತಾಂತ್ರಿಕ ಮಾತುಕತೆಗಳನ್ನು ನಡೆಸುತ್ತಿದ್ದರು. ಇದೀಗ ಕೊನೆಗೂ ಉಭಯ ದೇಶಗಳು ಶಾಂತಿಗೆ ಸಮ್ಮತಿಸಿವೆ. ಈ ಒಪ್ಪಂದದ ಅನ್ವಯ ಶುಕ್ರವಾರ ಮುಂಜಾನೆಯಿಂದಲೇ ಎರಡೂ ದೇಶದವರು ದಾಳಿಗಳನ್ನು ಸಂಪೂರ್ಣವಾಗಿ ನಿಲ್ಲಿಸಬೇಕಾಗುತ್ತದೆ.

ದಕ್ಷಿಣ ಲೆಬನಾನ್‌ನ ಗಡಿ ಪ್ರದೇಶಗಳಿಂದ ಹೆಜ್ಬೊಲ್ಲಾ ತನ್ನ ಶಸ್ತ್ರಾಸ್ತ್ರ ಮತ್ತು ಹೋರಾಟಗಾರರನ್ನು ಹಿಂತೆಗೆದುಕೊಳ್ಳಬೇಕು ಹಾಗೂ ಇಸ್ರೇಲ್ ಸೇನೆಯೂ ಸಹ ತನ್ನ ಸೈನಿಕರನ್ನು ಗಡಿಯಿಂದ ಹಿಂದೆ ಕರೆಸಿಕೊಳ್ಳಬೇಕು ಎಂಬ ನಿಯಮಗಳನ್ನು ವಿಧಿಸಲಾಗಿದೆ ಎನ್ನಲಾಗಿದೆ.

ಕದನ ವಿರಾಮದ ನಿಯಮಗಳು ಸರಿಯಾಗಿ ಪಾಲನೆಯಾಗುತ್ತಿವೆಯೇ ಎಂಬುದನ್ನು ಮೇಲ್ವಿಚಾರಣೆ ಮಾಡಲು ವಿಶ್ವಸಂಸ್ಥೆಯ ಶಾಂತಿಪಾಲನಾ ಪಡೆ ಮತ್ತು ಲೆಬನಾನ್ ರಾಷ್ಟ್ರೀಯ ಸೇನೆಗೆ ಹೆಚ್ಚಿನ ಜವಾಬ್ದಾರಿ ನೀಡಲಾಗುತ್ತದೆ.

ಇಂದು ಮುಂಜಾನೆ ಇಸ್ರೇಲಿ ಪಡೆಗಳು ಮತ್ತು ಹೆಜ್ಬೊಲ್ಲಾ ನಡುವೆ ಮತ್ತೆ ಹೊಸದಾಗಿ ಪರಸ್ಪರ ದಾಳಿಗಳು ನಡೆದ ಹೊರತಾಗಿಯೂ ಈ ಒಪ್ಪಂದ ಏರ್ಪಟ್ಟಿದ್ದು, ಇದು ಈ ಕದನ ವಿರಾಮದ ಸೂಕ್ಷ್ಮತೆಯನ್ನು ಎತ್ತಿ ತೋರಿಸುತ್ತದೆ. ಲೆಬನಾನ್‌ನಲ್ಲಿ ಮುಂದುವರಿದಿರುವ ಘರ್ಷಣೆಗಳು ಪ್ರಾದೇಶಿಕವಾಗಿ ಪ್ರಸ್ತುತ ನಡೆಯುತ್ತಿರುವ ಇತರ ವಿಶಾಲವಾದ ಮಾತುಕತೆಗಳಿಗೆ ಧಕ್ಕೆ ತರಬಹುದು ಎಂಬ ಆತಂಕಗಳು ಹೆಚ್ಚಾದ ಹಿನ್ನೆಲೆಯಲ್ಲಿ, ಅಮೆರಿಕ, ಕತಾರ್ ಮತ್ತು ಇರಾನಿನ ಮಧ್ಯಸ್ಥಿಕೆದಾರರು ಕಳೆದ ಕೆಲವು ದಿನಗಳಿಂದ ತೀವ್ರವಾದ ಮಾತುಕತೆಗಳಲ್ಲಿ ತೊಡಗಿಸಿಕೊಂಡಿದ್ದರು.

# ಪೊಲೀಸರಿಂದಲೇ ರಾಬರಿ...! ಪ್ರಕರಣ ದಾಖಲು

ಬೆಂಗಳೂರು: ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ರಕ್ಷಕರೇ ಭಕ್ಷಕರಾದ ಆಘಾತಕಾರಿ ಘಟನೆಯೊಂದು ನಡೆದಿದೆ. ಸಿಐಡಿ ವಿಭಾಗದ ಇನ್ಸ್‌ಪೆಕ್ಟರ್ ಒಬ್ಬರು ಸ್ವತಃ ತಾವೇ ಗ್ಯಾಂಗ್ ಕಟ್ಟಿಕೊಂಡು, ಮಡಿವಾಳದ ಖಾಸಗಿ ಹೋಟೆಲ್‌ನಲ್ಲಿ ತಂಗಿದ್ದ ಕೇರಳ ಮೂಲದ ವ್ಯಕ್ತಿಗಳನ್ನು ಬೆದರಿಸಿ ಬರೋಬ್ಬರಿ 20 ಲಕ್ಷ ರೂಪಾಯಿ ದರೋಡೆ ಮಾಡಿದ್ದಾರೆ. ಸಿಐಡಿ ಇನ್ಸ್‌ಪೆಕ್ಟರ್ ಮಹೇಶ್ ಕನಕಗಿರಿ ಈ ಇಡೀ ದರೋಡೆಯ ಮಾಸ್ಟರ್ ಮೈಂಡ್ ಆಗಿದ್ದು, ಸದ್ಯ ಪೊಲೀಸರ ಕಾರ್ಯಾಚರಣೆ ತೀವ್ರಗೊಳ್ಳುತ್ತಿದ್ದಂತೆಯೇ ಎಸ್ಕೇಪ್ ಆಗಿದ್ದಾರೆ.

ಟ್ರೇಡಿಂಗ್ (ವ್ಯಾಪಾರ) ಉದ್ದೇಶಗಳಿಗಾಗಿ ಹಣ ಹಿಡಿದುಕೊಂಡು ಕೇರಳದ ಉದ್ಯಮಿಗಳು ಮಡಿವಾಳದ ಖಾಸಗಿ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಿದ್ದರು. ಈ ಬಗ್ಗೆ ನಿಖರ ಮಾಹಿತಿ ಪಡೆದಿದ್ದ ಇನ್ಸ್‌ಪೆಕ್ಟರ್ ಮಹೇಶ್ ಕನಕಗಿರಿ, ಹ್ಯಾರಿಸ್, ಕುಪೇಂದ್ರ, ಶಪಿ ಮತ್ತು ಶಾನಿ ಎಂಬ ನಾಲ್ವರೊಂದಿಗೆ ಸೇರಿ ದರೋಡೆಗೆ ಪ್ಲ್ಯಾನ್ ಮಾಡಿದ್ದರು. ಯೋಜನೆಯಂತೆ ಹೋಟೆಲ್ ಮುಂಭಾಗ ಅಧಿಕೃತ ಸಿಐಡಿ ಪೊಲೀಸ್ ಜೀಪ್ ನಿಲ್ಲಿಸಿ ಇನ್ಸ್‌ಪೆಕ್ಟರ್ ಒಳಗೇ ಕುಳಿತಿದ್ದರು. ಅವರ ಗ್ಯಾಂಗ್‌ನ ಇಬ್ಬರು ಹೋಟೆಲ್ ಕೋಣೆಗೆ ನುಗ್ಗಿ, ತಾವು ಪೊಲೀಸರೆಂದು ಇನ್ಸ್‌ಪೆಕ್ಟರ್ ಅವರ ಅಧಿಕೃತ ಗುರುತಿನ



ಚೀಟಿ ತೋರಿಸಿ, 'ಅಕ್ರಮವಾಗಿ ಟ್ರೇಡಿಂಗ್ ಮಾಡಲು ಹಣ ತಂದಿದ್ದೀರಿ' ಎಂದು ಉದ್ಯಮಿಗಳನ್ನು ತೀವ್ರವಾಗಿ ಬೆದರಿಸಿದ್ದಾರೆ. ಬಳಿಕ ಅವರಿಂದ 20 ಲಕ್ಷ ರೂಪಾಯಿ ನಗದನ್ನು ಕಸಿದುಕೊಂಡು, ಹೊರಗೆ ನಿಂತಿದ್ದ ಪೊಲೀಸ್ ಜೀಪ್‌ನಲ್ಲೇ ಇಡೀ ಗ್ಯಾಂಗ್ ಪರಾರಿಯಾಗಿದೆ.

ಆರಂಭದಲ್ಲಿ ಹೆದರಿದ್ದ ಕೇರಳದ ವ್ಯಕ್ತಿಗಳಿಗೆ ನಂತರದ ಬೆಳವಣಿಗೆಗಳಿಂದ ದರೋಡೆಯ ಬಗ್ಗೆ ತೀವ್ರ ಅನುಮಾನ ಮೂಡಿದೆ. ತಕ್ಷಣವೇ ಅವರು ಮಡಿವಾಳ ಪೊಲೀಸ್ ಠಾಣೆಗೆ ತೆರಳಿ ದೂರು ದಾಖಲಿಸಿದ್ದಾರೆ. ಪ್ರಕರಣದ ಗಾಂಭೀರ್ಯತೆ ಅರಿತು ತಕ್ಷಣವೇ ತನಿಖೆಗೆ ಇಳಿದ ಮಡಿವಾಳ ಪೊಲೀಸರು, ರಾತ್ರೋರಾತ್ರಿ ಕಾರ್ಯಾಚರಣೆ ನಡೆಸಿ ದರೋಡೆ ಗ್ಯಾಂಗ್‌ನಲ್ಲಿದ್ದ ಕುಪೇಂದ್ರ ಎಂಬಾತನನ್ನು ಹೆಡೆಮುರಿ ಕಟ್ಟಿದ್ದಾರೆ. ಬಂಧಿತ ಆರೋಪಿಯ ವಿಚಾರಣೆ ನಡೆಸಿದಾಗ ಇಡೀ ದರೋಡೆ ಪ್ರಕರಣದ ಅಸಲಿ ಕಿಂಗ್‌ಪಿನ್ ಸಿಐಡಿ ಇನ್ಸ್‌ಪೆಕ್ಟರ್ ಮಹೇಶ್ ಕನಕಗಿರಿ ಎಂಬ ಆಘಾತಕಾರಿ ಸತ್ಯ ಬಾಯ್ಬಿಟ್ಟಿದ್ದಾನೆ.

ಕುಪೇಂದ್ರ ಅರೆಸ್ಟ್ ಆಗುತ್ತಿದ್ದಂತೆಯೇ ಇನ್ಸ್‌ಪೆಕ್ಟರ್ ಮಹೇಶ್ ಕನಕಗಿರಿ ಹಾಗೂ ಉಳಿದ ಮೂವರು ಆರೋಪಿಗಳು ನಾಪತ್ತೆಯಾಗಿದ್ದಾರೆ. ಸದ್ಯ ಪೊಲೀಸರು ಆರೋಪಿ ಕುಪೇಂದ್ರ ಮತ್ತು ದರೋಡೆಗೆ ಬಳಸಲಾಗಿದ್ದ ಸಿಐಡಿ ಜೀಪನ್ನು ಜಪ್ತಿ ಮಾಡಿದ್ದು, ತಲೆಮರೆಸಿಕೊಂಡಿರುವ ಖಾಕಿ ಅಧಿಕಾರಿ ಸೇರಿದಂತೆ ನಾಲ್ವರಿಗಾಗಿ ಬಲೆ ಬೀಸಿದ್ದಾರೆ.

ಭಾರತ ಸಾರಥಿ
20/06/2026
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ‘ಸಂಪಾಜೆ ನೃತ್ಯೋತ್ಸವ-2026’ ಆಯೋಜನೆ

ಬೆಂಗಳೂರು: ಜೂನ್ 21ರಂದು ‘ಸಂಪಾಜೆ ನೃತ್ಯೋತ್ಸವ–2026’ ಆಯೋಜನೆ ನಗರದ ಸಾಂಸ್ಕೃತಿಕ ಹಾಗೂ ಕಲಾ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಸಂಪಾಜೆ ರಂಗ ಸಂಗಮ ಬೆಂಗಳೂರು ವತಿಯಿಂದ “ಸಂಪಾಜೆ ನೃತ್ಯೋತ್ಸವ–2026” ಕಾರ್ಯಕ್ರಮವನ್ನು ನಟ ನಿರ್ಮಾಪಕ ಹಾಗೂ ಹಿರಿಯ ಹೋರಾಟಗಾರ ಉದ್ಘಾಟಿಸಲಿದ್ದು ವಿಶೇಷ ಆಹ್ವಾನಿತರಾಗಿ ಪದ್ಮನಾಭ ಜತ್ತಿಲ್ಲ ಹಿರಿಯ ಕಲಾವಿದ ಶಂಕರ್ ಭಟ್, ಟಿವಿ ನೈನ್ ವರದಿಗಾರ ಕಿರಣ್ ಹನಿಯಡ್ಕ, ಪುರುಷೋತ್ತಮ್, ಡಾ.ಗಣಪತಿ ಹೆಗಡೆ, ಹಿರಿಯ ಪತ್ರಕರ್ತ ರಮೇಶ್ ಸುರ್ವೆ, ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದರೆ.

ವೇದಿಕೆಯಲ್ಲಿ ಆದರ್ಶ ದಂಪತಿಗಳಾದ ಶ್ರೀಮತಿ ಲೀಲಾವತಿ, ಟಿಎಸ್ ನಾಗರಾಜ್,



ಮತ್ತು ಶ್ರೀಮತಿ ಸರೋಜಾ, ಶ್ರೀ ಪರಮೇಶ್ ರವರನ್ನು ಗೌರವಿಸಲಾಗುವುದು.

ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ನಡೆಯಲಿರುವ ಈ ನೃತ್ಯೋತ್ಸವವು ಜೂನ್ 21ರಂದು (ಭಾನುವಾರ) ಮಧ್ಯಾಹ್ನ 2.30ರಿಂದ ರಾತ್ರಿ 8.30ರವರೆಗೆ ನಗರದ ಜೆ.ಪಿ. ರಸ್ತೆಯಲ್ಲಿರುವ ನಯನಾ ರಂಗಮಂದಿರದಲ್ಲಿ ನಡೆಯಲಿದೆ.

ಕಾರ್ಯಕ್ರಮದಲ್ಲಿ ವಿವಿಧ ನೃತ್ಯ ಪ್ರಕಾರಗಳ ಪ್ರದರ್ಶನ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಕಲಾವಿದರ ಪ್ರತಿಭಾ ಅನಾವರಣ ನಡೆಯಲಿದ್ದು, ನಗರದ ಕಲಾಭಿಮಾನಿಗಳು, ಯುವ ಕಲಾವಿದರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಂಘಟಕರು ಮನವಿ ಮಾಡಿದ್ದಾರೆ.

## ‘ಎಂಡ್ ಆಫ್ ಸ್ಯಾಡ್‌ನೆಸ್ ಸೇಲ್’ಗೆ ಆದರದ ಆಹ್ವಾನ

ಮಂಗಳೂರು

ಈ ಸೀಸನ್‌ನಲ್ಲಿ ಸಣ್ಣಪುಟ್ಟ ಸಂತೋಷದ ಕ್ಷಣಗಳನ್ನು ಸಂಭ್ರಮಿಸಲು ಫಿಜಾ ಬೈ ನೆಕ್ಸಸ್ ಮಾಲ್ ವಿಶಿಷ್ಟವಾದ ‘ಎಂಡ್ ಆಫ್ ಸ್ಯಾಡ್‌ನೆಸ್ ಸೇಲ್’ ಅನ್ನು ಪ್ರಾರಂಭಿಸಿದ್ದು, ಇದರ ಭಾಗವಾಗಲು ಮಂಗಳೂರಿನ ಜನತೆಯನ್ನು ಪ್ರೀತಿಯಿಂದ ಆಹ್ವಾನಿಸುತ್ತಿದೆ. ಇದು ಕೇವಲ ಒಂದು ಸಾಮಾನ್ಯ ಸೇಲ್ ಮಾತ್ರವಲ್ಲ; ಜನರು ಮಾಲ್‌ಗಳಿಗೆ ಬರುವುದು ಕೇವಲ ಶಾಪಿಂಗ್ ಮಾಡಲು ಮಾತ್ರವಲ್ಲ ಎಂಬ ಸರಳ ಸತ್ಯದಿಂದ ಪ್ರೇರಿತಗೊಂಡು ಈ ಅಭಿಯಾನವನ್ನು ರೂಪಿಸಲಾಗಿದೆ. ಗ್ರಾಹಕರು ತಮ್ಮ ಜೀವನದ ಮೈಲಿಗಲ್ಲುಗಳನ್ನು ಸಂಭ್ರಮಿಸಲು, ಸ್ನೇಹಿತರನ್ನು ಭೇಟಿಯಾಗಲು, ಕುಟುಂಬದೊಂದಿಗೆ ಗುಣಮಟ್ಟದ ಸಮಯ ಕಳೆಯಲು, ನೆನಪುಗಳನ್ನು ಸೃಷ್ಟಿಸಲು, ಹೊಸ ಅನುಭವಗಳನ್ನು ಪಡೆಯಲು ಮತ್ತು ಮುಖ್ಯವಾಗಿ ತಮ್ಮ ಬೇಸರವನ್ನು ಮರೆತು ಮನಸ್ಸಿಗೆ ನೆಮ್ಮದಿ ಕಂಡುಕೊಳ್ಳಲು ಮಾಲ್‌ಗೆ ಬರುತ್ತಾರೆ.

ಕೆಲಸದ ಸ್ಥಳದಲ್ಲಿ ಕಠಿಣ ದಿನ, ರದ್ದಾದ ಪ್ಲಾನ್‌ಗಳು, ನಿರಾಶಾದಾಯಕ ಫಲಿತಾಂಶ, ಕೈತಪ್ಪಿದ ಅವಕಾಶ ಅಥವಾ ಯಾವುದೇ ಕೆಲಸಗಳು ಅಂದುಕೊಂಡಂತೆ ನಡೆಯದ ದಿನಗಳನ್ನು ನಾವೆಲ್ಲರೂ ನಮ್ಮ ಜೀವನದಲ್ಲಿ ಎದುರಿಸಿರುತ್ತೇವೆ. ಜೀವನದಲ್ಲಿ ಬೇಸರಗೊಳ್ಳಲು ನಮಗೆ ಹಲವು ಕಾರಣಗಳಿರಬಹುದು, ಆದರೆ ಫಿಜಾ ಬೈ ನೆಕ್ಸಸ್ ಮಾಲ್‌ನಲ್ಲಿ ಅದರಿಂದ ಹೊರಬಂದು ಮತ್ತೆ ಉಲ್ಲಾಸದಿಂದ ಪುಟಿದೇಳಲು ಅಸಂಖ್ಯಾತ ಮಾರ್ಗಗಳಿವೆ. ಸ್ನೇಹಿತರೊಂದಿಗೆ ಭರ್ಜರಿ ಊಟ ಸವಿಯುವುದು, ನೆಚ್ಚಿನ ಸಿನಿಮಾ ನೋಡುವುದು, ಕುಟುಂಬದೊಂದಿಗೆ ಅಮೂಲ್ಯ ಸಮಯ ಕಳೆಯುವುದು, ಹೊಸದನ್ನು ಅನ್ವೇಷಿಸುವುದು ಅಥವಾ ನಿಮಗಾಗಿ ನೀವೇ ವಿಶೇಷವಾದ ಉಡುಗೊರೆಯನ್ನು ಖರೀದಿಸುವ ಮೂಲಕ ಇಲ್ಲಿ ಸಂತೋಷವನ್ನು ಕಂಡುಕೊಳ್ಳಬಹುದು.

## ‘ತೂಕರಹಿತ ಐಷಾರಾಮ’ ಪರಿಕಲ್ಪನೆಯೊಂದಿಗೆ ಗ್ರಾಹಕರಿಗೆ ವಿಶಿಷ್ಟ ಅನುಭವ




ವಿಶ್ವವಾರಿಧಿ | ಬೆಂಗಳೂರು

ಪ್ರಯೋಗಾಲಯದಲ್ಲಿ ರೂಪಿಸಲಾದ ವಜ್ರಾಭರಣಗಳ ಬ್ರ್ಯಾಂಡ್ ಆಗಿರುವ ಔರ್ಯ ವಜ್ರಾಭರಣ ಸಂಸ್ಥೆಯು ಬೆಂಗಳೂರಿನ ಕೋರಮಂಗಲದಲ್ಲಿ ತನ್ನ ನೂತನ ಅನುಭವ ಮಳಿಗೆಯನ್ನು ಆರಂಭಿಸಿದೆ.

ಉದ್ಘಾಟನಾ ಸಮಾರಂಭದಲ್ಲಿ ಖ್ಯಾತ ಕ್ರಿಕೆಟ್ ಆಟಗಾರ ಹಾಗೂ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ಸುಮಾರು 2,000 ಚದರ ಅಡಿ ವಿಸ್ತೀರ್ಣದಲ್ಲಿ ನಿರ್ಮಾಣವಾಗಿರುವ ಈ ಮಳಿಗೆಯನ್ನು ಯುವ ಮತ್ತು ವಿನ್ಯಾಸ ಪ್ರಜ್ಞೆಯುಳ್ಳ ಗ್ರಾಹಕರನ್ನು ಗಮನದಲ್ಲಿಟ್ಟುಕೊಂಡು ರೂಪಿಸಲಾಗಿದೆ. ಸಂಗ್ರಾಹಕರ ಕ್ಲಬ್ ಹೌಸ್ ಮಾದರಿಯಲ್ಲಿ ವಿನ್ಯಾಸಗೊಳಿಸಿರುವ ಮಳಿಗೆಯಲ್ಲಿ ಗ್ರಾಹಕರಿಗೆ ವಿಶಿಷ್ಟ ಖರೀದಿ ಅನುಭವ ಒದಗಿಸಲು ಹಲವು ಆಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.

ತ್ರಿಮಿತೀಯ ವಜ್ರಾಭರಣ ವಿನ್ಯಾಸ ಕೇಂದ್ರವು ಮಳಿಗೆಯ ಪ್ರಮುಖ ಆಕರ್ಷಣೆಯಾಗಿದ್ದು, ಗ್ರಾಹಕರು ತಮ್ಮದೇ ಆದ ಆಭರಣ ವಿನ್ಯಾಸ ರೂಪಿಸುವ ಅವಕಾಶವನ್ನು ಹೊಂದಿದ್ದಾರೆ. ಅಲ್ಲದೆ, ವಾಸ್ತವಿಕ ದೃಶ್ಯ ತಂತ್ರಜ್ಞಾನದ ಮೂಲಕ ಆಭರಣಗಳನ್ನು ಧರಿಸಿದ ಅನುಭವ ಪಡೆಯುವ ವ್ಯವಸ್ಥೆ ಹಾಗೂ ಖಾಸಗಿ ವೀಕ್ಷಣಾ ಕೊಠಡಿಗಳನ್ನೂ ನಿರ್ಮಿಸಲಾಗಿದೆ.

## ಆರೋಗ್ಯಕರ ಆಹಾರದಿಂದಲೇ ಸಿಗಲಿದೆ ದೀರ್ಘಕಾಲಿಕ ಹೊಳಪು

ಬೆಂಗಳೂರು

ಸೌಂದರ್ಯವರ್ಧಕ ಉತ್ಪನ್ನಗಳು ತಾತ್ಕಾಲಿಕ ಹೊಳಪು ನೀಡಬಹುದಾದರೂ, ಚರ್ಮದ ನಿಜವಾದ ಆರೋಗ್ಯ ಮತ್ತು ಕಾಂತಿ ದೇಹದ ಒಳಗಿನ ಪೌಷ್ಟಿಕ ಸ್ಥಿತಿಯನ್ನು ಅವಲಂಬಿಸಿರುತ್ತದೆ ಎಂದು ಪೌಷ್ಟಿಕ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಮ್ಯಾಕ್ಸ್ ಹೆಲ್ತ್‌ಕೇರ್‌ನ ಆಹಾರ ಮತ್ತು ಪೌಷ್ಟಿಕ ವಿಭಾಗದ ಪ್ರಾದೇಶಿಕ ಮುಖ್ಯಸ್ಥೆ ರಿತಿಕಾ ಸಮಾದಿದಾರ್ ಅವರ ಪ್ರಕಾರ, ಚರ್ಮವು ದೇಹದ ಆರೋಗ್ಯದ ಪ್ರತಿಬಿಂಬವಾಗಿದ್ದು, ಅಗತ್ಯ ಪೋಷಕಾಂಶಗಳ ಕೊರತೆಯು ಚರ್ಮದ ಹೊಳಪು ಕಡಿಮೆಯಾಗುವುದು, ಒಣಗುವುದು ಹಾಗೂ ವಯಸ್ಸಿನ ಲಕ್ಷಣಗಳು ಬೇಗ ಕಾಣಿಸಿಕೊಳ್ಳಲು ಕಾರಣವಾಗಬಹುದು. ಅವರು ಚರ್ಮದ ಆರೋಗ್ಯ ಮತ್ತು ಸ್ವಾಭಾವಿಕ ಕಾಂತಿಯನ್ನು ಕಾಪಾಡಲು ಅಗತ್ಯವಾದ ಆರು ಪ್ರಮುಖ ಪೋಷಕಾಂಶಗಳ ಮಹತ್ವವನ್ನು ವಿವರಿಸಿದ್ದಾರೆ.



ವಿಟಮಿನ್ ಇ ಪ್ರಬಲ ಉತ್ಕರ್ಷಣ ನಿರೋಧಕವಾಗಿದ್ದು, ಮಾಲಿನ್ಯ ಹಾಗೂ ಸೂರ್ಯನ ಅತಿನೇರಳೆ ಕಿರಣಗಳಿಂದ ಉಂಟಾಗುವ ಹಾನಿಯಿಂದ ಚರ್ಮದ ಕೋಶಗಳನ್ನು ರಕ್ಷಿಸುತ್ತದೆ. ಇದು ಚರ್ಮದಲ್ಲಿ ತೇವಾಂಶವನ್ನು ಉಳಿಸಿಕೊಳ್ಳಲು ನೆರವಾಗಿ, ಚರ್ಮವನ್ನು ಮೃದು ಹಾಗೂ ದೃಢವಾಗಿರಲು ಸಹಾಯ ಮಾಡುತ್ತದೆ.

ಕೇವಲ ಹೊರಗಿನಿಂದ ಬಳಸುವ ಸೌಂದರ್ಯವರ್ಧಕ ಉತ್ಪನ್ನಗಳಿಗಿಂತ ಸಮತೋಲನಯುತ ಆಹಾರ, ಸಾಕಷ್ಟು ನೀರು, ಹಣ್ಣುಗಳು, ತರಕಾರಿಗಳು ಹಾಗೂ ಪೌಷ್ಟಿಕಾಂಶಯುಕ್ತ ಆಹಾರ ಸೇವನೆಯೇ ಚರ್ಮದ ಆರೋಗ್ಯವನ್ನು ದೀರ್ಘಕಾಲ ಕಾಪಾಡಲು ನೆರವಾಗುತ್ತದೆ ಎಂದು ತಜ್ಞರು ತಿಳಿಸಿದ್ದಾರೆ. ಚರ್ಮದ ಸ್ವಾಭಾವಿಕ ಹೊಳಪು ಯಾವುದೇ ಮಾಯಾಜಾಲದ ಫಲವಲ್ಲ; ಅದು ಆರೋಗ್ಯಕರ ಜೀವನಶೈಲಿ ಮತ್ತು ಸರಿಯಾದ ಪೌಷ್ಟಿಕ ಆಹಾರದ ಪ್ರತಿಫಲವಾಗಿದೆ ಎಂದು ಅವರು ಹೇಳಿದ್ದಾರೆ.

## ದೆಹಲಿ ಎನ್‌ಸಿಆರ್‌ನಲ್ಲಿ ಡಿ.ಎಸ್.ಗ್ರೂಪ್‌ನಿಂದ 400 ಕೋಟಿ ಹೂಡಿಕೆ

ನವದೆಹಲಿ: ಪ್ರಮುಖ ವೇಗವಾಗಿ ಬಳಕೆಯಾಗುವ ಗ್ರಾಹಕ ವಸ್ತುಗಳು ಮತ್ತು ವಿವಿಧ ಉದ್ಯಮ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಧರಂಪಾಲ್ ಸತ್ಯಪಾಲ್ (ಡಿ.ಎಸ್.) ಗ್ರೂಪ್, ತನ್ನ ಆತಿಥ್ಯ ಕ್ಷೇತ್ರದ ವಿಸ್ತರಣೆಯ ಭಾಗವಾಗಿ ಮ್ಯಾರಿಯಟ್ ಇಂಟರ್ನ್ಯಾಷನಲ್‌ನ ‘ಡಬ್ಲ್ಯು’ ಹೋಟೆಲ್ಸ್ ಬ್ರಾಂಡ್ ಸಹಯೋಗದಲ್ಲಿ ಹೊಸ ಐಷಾರಾಮಿ ಹೋಟೆಲ್ ಯೋಜನೆಯನ್ನು ಘೋಷಿಸಿದೆ.

ಇಂದಿರಾ ಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪ ನಿರ್ಮಾಣವಾಗಲಿರುವ ಈ ಹೋಟೆಲ್ ಸುಮಾರು 200 ಕೊಠಡಿಗಳನ್ನು ಒಳಗೊಂಡಿರಲಿದ್ದು, 400 ಕೋಟಿ ಹೂಡಿಕೆಯಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ. 2027ರ ದ್ವಿತೀಯಾರ್ಧದಲ್ಲಿ ಹೋಟೆಲ್ ಕಾರ್ಯಾರಂಭ ಮಾಡುವ ಗುರಿಯನ್ನು ಸಂಸ್ಥೆ ಹೊಂದಿದೆ.

ದೆಹಲಿ ರಾಷ್ಟ್ರೀಯ ರಾಜಧಾನಿ ಪ್ರದೇಶದ ಪ್ರಮುಖ ಆತಿಥ್ಯ ವಲಯಗಳಲ್ಲಿ ಒಂದಾದ ಏರೋಸಿಟಿ ಸಮೀಪ ಈ ಹೋಟೆಲ್ ನಿರ್ಮಾಣವಾಗಲಿದ್ದು, ವಾಣಿಜ್ಯ ಹಾಗೂ ವಿರಾಮ ಉದ್ದೇಶಗಳಿಗಾಗಿ ಬರುವ ಪ್ರವಾಸಿಗರ ಅಗತ್ಯತೆಗಳನ್ನು ಪೂರೈಸುವಂತೆ ವಿನ್ಯಾಸಗೊಳಿಸಲಾಗಿದೆ.

ಈ ಯೋಜನೆಯು ದೆಹಲಿ ರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿ ‘ಡಬ್ಲ್ಯು’ ಹೋಟೆಲ್ಸ್ ಬ್ರಾಂಡ್‌ನ ಮೊದಲ ಪ್ರವೇಶವಾಗಿದ್ದು, ಭಾರತದಲ್ಲಿ ಗೋವಾದ ನಂತರ ಎರಡನೇ ಹೋಟೆಲ್ ಆಗಿರಲಿದೆ. ಸಾಂಪ್ರದಾಯಿಕ ಐಷಾರಾಮಿ ಹೋಟೆಲ್‌ಗಳ ಪ್ರಾಬಲ್ಯವಿರುವ ಮಾರುಕಟ್ಟೆಯಲ್ಲಿ ಜೀವನಶೈಲಿ ಆಧಾರಿತ ಹೊಸ ಅನುಭವವನ್ನು ಒದಗಿಸುವ ಗುರಿಯನ್ನು ಈ ಯೋಜನೆ ಹೊಂದಿದೆ.

## ‘ದಿ ಸೌಕ್ ಮಾರ್ಕೆಟ್’ ಉದ್ಘಾಟನೆ

ಬೆಂಗಳೂರು

ಕರ್ನಾಟಕ ಚಿತ್ರಕಲಾ ಪರಿಷತ್‌ನಲ್ಲಿ ಶುಕ್ರವಾರ ಆಯೋಜಿಸಲಾದ ‘ದಿ ಸೌಕ್ ಮಾರ್ಕೆಟ್’ ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಖ್ಯಾತ ರೂಪದರ್ಶಿ, ನಟಿ ಹಾಗೂ ಸಾಮಾಜಿಕ ಜಾಲತಾಣ ಪ್ರಭಾವಿ ಪ್ರಿಯಾಂಕಾ ಅರೋರಾ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಉದ್ಯಮಿಗಳು, ಪ್ರದರ್ಶಕರು, ಕಲಾವಿದರು, ಕರಕುಶಲ ತಜ್ಞರು, ಫ್ಯಾಷನ್ ಆಸಕ್ತರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಿದ್ದರು.



‘ದಿ ಸೌಕ್ ಮಾರ್ಕೆಟ್’ನಲ್ಲಿ ಫ್ಯಾಷನ್ ಉಡುಪುಗಳು, ಆಭರಣಗಳು, ಕರಕುಶಲ ವಸ್ತುಗಳು, ಗೃಹ ಅಲಂಕಾರಿಕ ಉತ್ಪನ್ನಗಳು, ಜೀವನಶೈಲಿ ವಸ್ತುಗಳು ಸೇರಿದಂತೆ ವಿವಿಧ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ. ಗ್ರಾಹಕರಿಗೆ ಒಂದೇ ವೇದಿಕೆಯಲ್ಲಿ ವೈವಿಧ್ಯಮಯ ಉತ್ಪನ್ನಗಳನ್ನು ವೀಕ್ಷಿಸಿ ಖರೀದಿಸುವ ಅವಕಾಶ ಒದಗಿಸಲಾಗಿದೆ.


ಈ ಸಂದರ್ಭದಲ್ಲಿ ಮಾತನಾಡಿದ ಪ್ರಿಯಾಂಕಾ ಅರೋರಾ, ಸ್ಥಳೀಯ ಕಲಾವಿದರು, ಸಣ್ಣ ಉದ್ಯಮಿಗಳು ಹಾಗೂ ಉದಯೋನ್ಮುಖ ಉದ್ಯಮಿಗಳಿಗೆ ಪ್ರೋತ್ಸಾಹ ನೀಡುವ ಇಂತಹ ಕಾರ್ಯಕ್ರಮಗಳು ಅಗತ್ಯವಾಗಿವೆ ಎಂದು ಹೇಳಿದರು.

ಸ್ಥಳೀಯ ಬ್ರ್ಯಾಂಡ್‌ಗಳು ಮತ್ತು ಸೃಜನಶೀಲ ಪ್ರತಿಭೆಗಳಿಗೆ ಬೆಂಬಲ ನೀಡುವ ಮೂಲಕ ಸ್ವದೇಶಿ ಉತ್ಪನ್ನಗಳ ಬೆಳವಣಿಗೆಗೆ ಸಹಕರಿಸಬೇಕು ಎಂದು ಅವರು ಸಾರ್ವಜನಿಕರಿಗೆ ಕರೆ ನೀಡಿದರು.

ಆಯೋಜಕರು ಮಾತನಾಡಿ, ಗ್ರಾಹಕರಿಗೆ ವಿಭಿನ್ನ ಖರೀದಿ ಅನುಭವ ಒದಗಿಸುವುದರ ಜೊತೆಗೆ ಪ್ರದರ್ಶಕರು ಮತ್ತು ಕರಕುಶಲ ತಜ್ಞರಿಗೆ ವ್ಯಾಪಾರ ಅವಕಾಶಗಳನ್ನು ಸೃಷ್ಟಿಸುವ ಉದ್ದೇಶದಿಂದ ‘ದಿ ಸೌಕ್ ಮಾರ್ಕೆಟ್’ ಆಯೋಜಿಸಲಾಗಿದೆ ಎಂದು ತಿಳಿಸಿದರು. ಜೂನ್ 19ರಿಂದ 28ರವರೆಗೆ ನಡೆಯಲಿರುವ ಈ ಪ್ರದರ್ಶನವು ಸಾರ್ವಜನಿಕರಿಗೆ ಮುಕ್ತವಾಗಿದ್ದು, ವಿವಿಧ ಕ್ಷೇತ್ರಗಳ ನವೋದ್ಯಮಿಗಳು ಮತ್ತು ಕಲಾವಿದರ ಉತ್ಪನ್ನಗಳನ್ನು ಪರಿಚಯಿಸುವ ವೇದಿಕೆಯಾಗಲಿದೆ.

## 5.7 ಲಕ್ಷದವರೆಗೆ ಇಂಟರ್ನ್‌ಶಿಪ್ ಸ್ಟೈಪೆಂಡ್

ಬೆಂಗಳೂರು: ಪೋಲಾರಿಸ್ ಸ್ಕೂಲ್ ಆಫ್ ಟೆಕ್ನಾಲಜಿಯ 31 ವಿದ್ಯಾರ್ಥಿಗಳು ವಿಶ್ವದ ಪ್ರತಿಷ್ಠಿತ ಮುಕ್ತ ಮೂಲ ತಂತ್ರಾಂಶ ಕಾರ್ಯಕ್ರಮಗಳಾದ ಗೂಗಲ್ ಸಮರ್ ಆಫ್ ಕೋಡ್ (ಜಿಎಸ್‌ಒಸಿ) 2026 ಮತ್ತು ಲಿನಕ್ಸ್ ಫೌಂಡೇಶನ್‌ನ ಎಲ್‌ಎಫ್‌ಎಕ್ಸ್ ಮಾರ್ಗದರ್ಶನ ಕಾರ್ಯಕ್ರಮಗಳಿಗೆ ಆಯ್ಕೆಯಾಗುವ ಮೂಲಕ ಗಮನಾರ್ಹ ಸಾಧನೆ ಮಾಡಿದ್ದಾರೆ.




ಆಯ್ಕೆಯಾದ ವಿದ್ಯಾರ್ಥಿಗಳಲ್ಲಿ ಮಧ್ಯಪ್ರದೇಶದ ಬಾಲಾಘಾಟ್, ಅಸ್ಸಾಂನ ಜೋರ್ಹಾಟ್, ಒಡಿಶಾದ ಪುರಿ, ಪಶ್ಚಿಮ ಬಂಗಾಳದ ರಾಣಾಘಾಟ್, ಉತ್ತರ ಪ್ರದೇಶದ ಸದಾಬಾದ್ ಹಾಗೂ ಕರ್ನಾಟಕದ ಮಂಡ್ಯ ಸೇರಿದಂತೆ ದೇಶದ ವಿವಿಧ ಸಣ್ಣ ಪಟ್ಟಣಗಳ ವಿದ್ಯಾರ್ಥಿಗಳು ಸೇರಿದ್ದಾರೆ. ಇವರಲ್ಲಿ ಹಲವರು ರೈತರು, ಸಣ್ಣ ವ್ಯಾಪಾರಿಗಳು ಹಾಗೂ ಸರ್ಕಾರಿ ನೌಕರರ ಕುಟುಂಬಗಳಿಂದ ಬಂದಿರುವ ಮೊದಲ ತಲೆಮಾರಿನ ತಂತ್ರಜ್ಞಾನ ವೃತ್ತಿಪರರಾಗಿದ್ದಾರೆ.

ಪೋಲಾರಿಸ್‌ನ 18 ವಿದ್ಯಾರ್ಥಿಗಳು ಗೂಗಲ್ ಸಮರ್ ಆಫ್ ಕೋಡ್ 2026ಕ್ಕೆ ಆಯ್ಕೆಯಾಗಿದ್ದಾರೆ. ವಿಶ್ವದ ಅತ್ಯಂತ ಸ್ಪರ್ಧಾತ್ಮಕ ವಿದ್ಯಾರ್ಥಿ ಕೋಡಿಂಗ್ ಕಾರ್ಯಕ್ರಮಗಳಲ್ಲಿ ಒಂದಾದ ಇದರಲ್ಲಿ ಈ ವರ್ಷ ಜಾಗತಿಕ ಮಟ್ಟದಲ್ಲಿ ಕೇವಲ 4.9 ಶೇಕಡಾ ಅರ್ಜಿದಾರರಿಗೆ ಮಾತ್ರ ಅವಕಾಶ ದೊರೆತಿದೆ.

ಇದೇ ವೇಳೆ, 13 ವಿದ್ಯಾರ್ಥಿಗಳು ಲಿನಕ್ಸ್ ಫೌಂಡೇಶನ್‌ನ ಎಲ್‌ಎಫ್‌ಎಕ್ಸ್ ಮಾರ್ಗದರ್ಶನ ಕಾರ್ಯಕ್ರಮಕ್ಕೆ ಆಯ್ಕೆಯಾಗಿದ್ದಾರೆ.

ವಿಶೇಷವೆಂದರೆ, ಆಯ್ಕೆಯಾದ 13 ಮಂದಿಯಲ್ಲಿ 12 ವಿದ್ಯಾರ್ಥಿಗಳು ಪ್ರಸ್ತುತ ತಮ್ಮ ಪದವಿ ಶಿಕ್ಷಣದ ಮೊದಲ ವರ್ಷದಲ್ಲೇ ಇದ್ದಾರೆ.

ಮಧ್ಯಪ್ರದೇಶದ ಬಾಲಾಘಾಟ್ ಮೂಲದ ಹಾಗೂ ಜಿಎಸ್‌ಒಸಿಗೆ ಆಯ್ಕೆಯಾದ ಹರ್ಷ ಸೋಮನ್ಕರ್ ಮಾತನಾಡಿ, ತಮ್ಮ ಕುಟುಂಬದಲ್ಲಿ ತಂತ್ರಜ್ಞಾನ ಕ್ಷೇತ್ರದಲ್ಲಿ ಕೆಲಸ ಮಾಡುವವರು ಯಾರೂ ಇಲ್ಲದ ಕಾರಣ ಇಂತಹ ಅವಕಾಶಗಳ ಬಗ್ಗೆ ಮೊದಲಿನಿಂದಲೂ ಅರಿವು ಇರಲಿಲ್ಲ ಎಂದು ಹೇಳಿದರು.

“ಜಾಗತಿಕ ಎಂಜಿನಿಯರಿಂಗ್ ಸಮುದಾಯಗಳ ಯೋಜನೆಗಳಿಗೆ ನಾನು ಕೊಡುಗೆ ನೀಡುತ್ತೇನೆ ಅಥವಾ ವಿದ್ಯಾರ್ಥಿಯಾಗಿಯೇ ಇಷ್ಟೊಂದು ದೊಡ್ಡ ಗೌರವ ಮತ್ತು ಅವಕಾಶ ಪಡೆಯುತ್ತೇನೆ ಎಂದು ಎಂದಿಗೂ ಊಹಿಸಿರಲಿಲ್ಲ. ಈ ಆಯ್ಕೆ ನನ್ನ ಬದುಕಿನ ಮಹತ್ವದ ತಿರುವಾಗಿದೆ. ವ್ಯಕ್ತಿಯ ಹಿನ್ನೆಲೆಗಿಂತ ಅವನ ಸಾಮರ್ಥ್ಯ ಮತ್ತು ಪರಿಶ್ರಮವೇ ಮುಖ್ಯ ಎಂಬುದನ್ನು ಇದು ಸಾಬೀತುಪಡಿಸಿದೆ,” ಎಂದು ಅವರು ಹೇಳಿದರು. ಈ ಎರಡೂ ಕಾರ್ಯಕ್ರಮಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳು ಸುಮಾರು 3,000 ಅಮೆರಿಕನ್ ಡಾಲರ್‌ಗಳಷ್ಟು (ಸುಮಾರು ರೂ.2.85 ಲಕ್ಷ) ಸ್ಟೈಪೆಂಡ್ ಪಡೆಯಲಿದ್ದಾರೆ.

## ಕಾಂಗ್ರೆಸ್ ಗ್ಯಾರಂಟಿಗಳಿಗೆ ದೊರೆತ ಜನಬೆಂಬಲ

ಬೆಂಗಳೂರು

ಕರ್ನಾಟಕ ವಿಧಾನ ಪರಿಷತ್ ಚುನಾವಣೆಯ ಫಲಿತಾಂಶವು ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಹಾಗೂ ಜನಕಲ್ಯಾಣ ರಾಜಕಾರಣಕ್ಕೆ ದೊರೆತ ಸ್ಪಷ್ಟ ಬೆಂಬಲವಾಗಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ವಿಧಾನ ಪರಿಷತ್ ಚುನಾವಣೆಯ ಫಲಿತಾಂಶ ಐತಿಹಾಸಿಕವಾಗಿದ್ದು, ಕಾಂಗ್ರೆಸ್ ನಾಯಕರು ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಪ್ರತಿಪಾದಿಸಿರುವ ಜನಕಲ್ಯಾಣ ಮತ್ತು ನ್ಯಾಯ ರಾಜಕಾರಣಕ್ಕೆ ಜಯ ದೊರೆತಿರುವುದನ್ನು ಇದು ಸಾಬೀತುಪಡಿಸಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವು 135 ಶಾಸಕರನ್ನು ಹೊಂದಿದ್ದು, ಇತರ ಬೆಂಬಲಿತ ಸದಸ್ಯರೊಂದಿಗೆ ಒಟ್ಟು 138 ಶಾಸಕರ ಬಲವಿದ್ದರೂ, ಕಾಂಗ್ರೆಸ್ ಅಭ್ಯರ್ಥಿಗಳಿಗೆ 151 ಪ್ರಥಮ ಪ್ರಾಶಸ್ತ್ಯದ ಮತಗಳು ಲಭಿಸಿವೆ. ಇದು ವಿವಿಧ ಪಕ್ಷಗಳ ಜನಪ್ರತಿನಿಧಿಗಳು ಕೂಡ ಕಾಂಗ್ರೆಸ್ ಸರ್ಕಾರದ ಜನಪರ ಯೋಜನೆಗಳನ್ನು ಬೆಂಬಲಿಸಿರುವುದಕ್ಕೆ ಸಾಕ್ಷಿಯಾಗಿದೆ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ.

ರಾಜ್ಯದ ರಾಜಕೀಯ ಇಂದು ಎರಡು ವಿಭಿನ್ನ ಧ್ರುವಗಳ ಸುತ್ತ ಕೇಂದ್ರೀಕೃತವಾಗಿದೆ. ಒಂದೆಡೆ ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಿದ್ದು, ಇವುಗಳ ಮೂಲಕ ಪ್ರತಿವರ್ಷ 56 ಸಾವಿರ ಕೋಟಿಗೂ ಅಧಿಕ ಮೊತ್ತವನ್ನು ನೇರವಾಗಿ ಜನರ ಖಾತೆಗಳಿಗೆ ವರ್ಗಾಯಿಸಲಾಗಿದೆ.




ಚುನಾವಣೆಯಲ್ಲಿ ಗುರುವಾರ ಸಚಿವ ಕೆ.ಎಚ್.ಮುನಿಯಪ್ಪ ಅವರು ಮತದಾನ ಮಾಡಿದರು.

## ಅಡ್ಡಮತದಾನ: ಶಿಸ್ತುಕ್ರಮ ನಿಶ್ಚಿತ

ಬೆಂಗಳೂರು

ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿಯ ಮೂವರು ಶಾಸಕರಿಂದ ಅಡ್ಡಮತದಾನ ಆಗಿದೆ. ಅವರ ವಿರುದ್ಧ ಶಿಸ್ತುಕ್ರಮ ನಿಶ್ಚಿತ ಎಂದು ವಿಪಕ್ಷ ನಾಯಕ ಆರ್.ಅಶೋಕ್ ತಿಳಿಸಿದರು.

ಮೇಲ್ಮನೆ ಚುನಾವಚಣೆ ಫಲಿತಾಂಶ ಪ್ರಕಟವಾದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಯಿಂದ ಲಿಂಗರಾಜು ಪಾಟೀಲ್, ರಘು ಕೌಟಿಲ್ಯ ಗೆದ್ದಿದ್ದಾರೆ.

ನಮ್ಮ ಮೂರು ವೋಟುಗಳು ಕ್ರಾಸ್ ಆಗಿದೆ ಅಂತ ಮಾಹಿತಿ ಬಂದಿದೆ. ಯಾರು ಕ್ರಾಸ್ ವೋಟು ಹಾಕಿದ್ದಾರೆ ಅಂತ ಗೊತ್ತಾಗುತ್ತೆ. ಅವರ ವಿರುದ್ಧ ಪಕ್ಷದಿಂದ ಶಿಸ್ತು ಕ್ರಮ ನಿಶ್ಚಿತ. ನಮ್ಮ ಒಂದು ಮತ ಅಸಿಂಧು ಆಗಿದೆ. ನಾಲ್ಕು ವೋಟು ಜೆಡಿಎಸ್‌ಗೆ ಕೊಟ್ಟಿದ್ದೀವಿ ಎಂದು ಹೇಳಿದರು.



ನಮ್ಮಿಂದ ಮೂರು ಮತ ಕ್ರಾಸ್ ಆಗಿರೋದು ನಮಗೆ ಖಚಿತ ಆಗಿದೆ. ಅವರ ವಿರುದ್ಧ ಶಿಸ್ತು ಕ್ರಮ ಆಗುತ್ತೆ. ಯಾರು ಕ್ರಾಸ್ ವೋಟು ಹಾಕಿದ್ದಾರೆ ಅಂತ ಚರ್ಚೆ ಮಾಡ್ತೇವೆ. ಪಕ್ಷದ ವೇದಿಕೆಯಲ್ಲಿ ಚರ್ಚೆ ಮಾಡ್ತೇವೆ. ಆಗ ಯಾರು ಅಡ್ಡಮತದಾನ ಮಾಡಿದ್ದಾರೆ ಅಂತ ಗೊತ್ತಾಗುತ್ತದೆ.

ಈ ಫಲಿತಾಂಶಕ್ಕೂ ನಮ್ಮಲ್ಲಿ ಸ್ಥಾನಗಳ ಬದಲಾವಣೆ ಆಗುವುದಕ್ಕೂ ಸಂಬಂಧ ಇಲ್ಲ. ಜೆಡಿಎಸ್‌ಗೆ ನಾಲ್ಕು ವೋಟ್ ಹಾಕಲು ನಾವು ಹೇಳಿದ್ವಿ. ಅವರಿಗೆ ಹಾಕಿದ್ದಾರೆ ಅಂತಾ ಅಂದುಕೊಂಡಿದ್ದೀವಿ ಎಂದರು.

ಬಿ.ವೈ.ವಿಜಯೇಂದ್ರ ಮಾತನಾಡಿ, ಚುನಾವಣೆಯಲ್ಲಿ ಗೆದ್ದ ಲಿಂಗರಾಜು ಪಾಟೀಲ್, ರಘು ಕೌಟಿಲ್ಯ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

## ನಾಲ್ಕರಿಂದ ಆರು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಲು ಗುರಿ

ಬೆಂಗಳೂರು

ಗ್ರೇಟರ್ ಬೆಂಗಳೂರು ಆಡಳಿತ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿನ ಹದಗೆಟ್ಟಿರುವ ವಾರ್ಡ್ ರಸ್ತೆಗಳನ್ನು ಅಭಿವೃದ್ಧಿಪಡಿಸಲು ರೂ.2,000 ಕೋಟಿ ವಿಶೇಷ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಘನ ತ್ಯಾಜ್ಯ ನಿರ್ವಹಣೆ ಕುರಿತು ನಡೆದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನರ ಪ್ರಮುಖ ನಿರೀಕ್ಷೆಯಾಗಿರುವ ರಸ್ತೆ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡಿದ್ದು, ವಾರ್ಡ್ ಮಟ್ಟದ ರಸ್ತೆಗಳನ್ನು ಸುಧಾರಿಸಲು ವಿಶೇಷ ಯೋಜನೆ ರೂಪಿಸಲಾಗಿದೆ ಎಂದು ಹೇಳಿದರು. ಪ್ರಮಾಣಿತ ಕಾರ್ಯವಿಧಾನದ ಅನ್ವಯ ವಿವಿಧ ಇಲಾಖೆಗಳು ಹಾಗೂ ಅಂಗಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸಿ ರಸ್ತೆ ಕಾಮಗಾರಿ ಕೈಗೊಳ್ಳಲಾಗುವುದು. ಪೂರ್ವಾನುಮತಿ ಇಲ್ಲದೆ ರಸ್ತೆಗಳನ್ನು ಅಗೆಯುವುದನ್ನು ತಡೆಯಲು ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು ಎಂದರು.

ರಸ್ತೆ ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಕಾಮಗಾರಿ ನಡೆಯುವ ಸಂದರ್ಭದಲ್ಲಿ ತಾವು ಸ್ವತಃ ಸ್ಥಳ ಪರಿಶೀಲನೆ ನಡೆಸುವುದಾಗಿ ಕೃಷ್ಣ ಬೈರೇಗೌಡ ತಿಳಿಸಿದರು.

## ಹಬ್ಬಿ ಟೈಗರ್ಸ್ ತಂಡದ ನಾಯಕನಾಗಿ ಅನೀಶ್ವರ್ ಗೌತಮ್ ನೇಮಕ

ಬೆಂಗಳೂರು: ಮಹಾರಾಜ ಟ್ರೋಫಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಟ್ವೆಂಟಿ–20 ಟೂರ್ನಿಯ ಐದನೇ ಆವೃತ್ತಿಗೆ ಹಬ್ಬಿ ಟೈಗರ್ಸ್ ತಂಡದ ನಾಯಕನಾಗಿ ಅನೀಶ್ವರ್ ಗೌತಮ್ ಅವರನ್ನು ಗುರುವಾರ ಅಧಿಕೃತವಾಗಿ ಘೋಷಿಸಲಾಯಿತು.

ಹೊಸ ಸೀಸನ್‌ಗೆ ಸಜ್ಜಾಗುತ್ತಿರುವ ಹಬ್ಬಿ ಟೈಗರ್ಸ್ ತಂಡದ ಅಧಿಕೃತ ಜೆರ್ಸಿಯನ್ನು ಇದೇ ಸಂದರ್ಭದಲ್ಲಿ ಅನಾವರಣಗೊಳಿಸಲಾಗಿದ್ದು, ತಂಡದ ಅಧಿಕೃತ ಗೀತೆಯನ್ನೂ ಬಿಡುಗಡೆ ಮಾಡಲಾಯಿತು.




ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ಉಪಾಧ್ಯಕ್ಷ ಸುಜಿತ್ ಸೋಮಸುಂದರ್, ಮಹಾರಾಜ ಟ್ರೋಫಿ ಆಡಳಿತ ಮಂಡಳಿಯ ಅಧ್ಯಕ್ಷ ಎಂ.ಎಸ್. ಕೇಶವ, ಸಂಸ್ಥೆಯ ಖಜಾಂಚಿ ಬಿ.ಎನ್. ಮಧುಕರ್, ಹಬ್ಬಿ ಟೈಗರ್ಸ್ ತಂಡದ ಮಾಲೀಕರಾದ ಶಿವೇಕ್ ಜಿಂದಾಲ್ ಹಾಗೂ ಸುಶೀಲ್ ಕುಮಾರ್ ಜಿಂದಾಲ್, ಆಟಗಾರರು, ತರಬೇತಿ ಸಿಬ್ಬಂದಿ ಮತ್ತು ಆಡಳಿತ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು. ನಾಯಕತ್ವದ ಜವಾಬ್ದಾರಿ ಸ್ವೀಕರಿಸಿದ ಬಳಿಕ ಮಾತನಾಡಿದ ಅನೀಶ್ವರ್ ಗೌತಮ್, ತಂಡದ ನಾಯಕನಾಗಿ ಆಯ್ಕೆಯಾಗಿರುವುದು ತಮ್ಮ ಪಾಲಿಗೆ ಹೆಮ್ಮೆಯ ಕ್ಷಣ ಎಂದು ಹೇಳಿದರು.

“ನಾಯಕತ್ವದ ಕುರಿತು ಮೊದಲ ಬಾರಿ ಮಾತುಕತೆ ನಡೆದಾಗ ಸ್ವಲ್ಪ ಆತಂಕವಿತ್ತು. ಆದರೆ ಮುಖ್ಯ ತರಬೇತುದಾರ ವಿನಯ್ ಕುಮಾರ್ ಹಾಗೂ ತರಬೇತಿ ತಂಡ ನನ್ನಲ್ಲಿ ಆತ್ಮವಿಶ್ವಾಸ ತುಂಬಿದರು. ತಂಡದ ಎಲ್ಲ ಆಟಗಾರರಿಂದಲೂ ಉತ್ತಮ ಬೆಂಬಲ ದೊರೆತಿದೆ.

ಹಬ್ಬಿ ಟೈಗರ್ಸ್ ತಂಡವನ್ನು ಮುನ್ನಡೆಸುವುದು ನನಗೆ ಗೌರವದ ಸಂಗತಿ. ಪ್ರತಿ ಆಟಗಾರರ ಹರಾಜಿನಲ್ಲೂ ಈ ತಂಡವೇ ನನ್ನನ್ನು ಆಯ್ಕೆ ಮಾಡಲಿ ಎಂಬ ಆಸೆ ಇತ್ತು.

## ಯೋಗ ದಿನಾಚರಣೆ

ರಾಮನಗರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಆಯುಷ್ ಫೆಡರೇಷನ್ ಆಫ್ ಇಂಡಿಯಾ (ರಿ) ಹಾಗೂ ವಿವಿಧ ಯೋಗ ನಿರತ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜೂ. 21ರ ಭಾನುವಾರ ಬೆಳಿಗ್ಗೆ 6 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಯು.ಟಿ. ಖಾದರ್ ಅವರು ಘನ ಉಪಸ್ಥಿತಿ ವಹಿಸುವರು. ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅವರು ಅಧ್ಯಕ್ಷತೆ ವಹಿಸುವರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ್, ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ, ವಿಧಾನ ಪರಿಷತ್ ಶಾಸಕರಾದ ಪುಟ್ಟಣ್ಣ, ಎಸ್. ರವಿ, ಸುಧಾಮ್ ದಾಸ್, ರಾಮೋಜಿಗೌಡ, ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಚ್.ಎಂ ರೇವಣ್ಣ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ. ರಾಜು, ಬಿ.ಎಂ.ಐ.ಸಿ.ಪಿ.ಎ ಪ್ರಾಧಿಕಾರದ ಅಧ್ಯಕ್ಷರಾದ ರಘುನಂದನ್ ರಾಮಣ್ಣ, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಅಧ್ಯಕ್ಷರಾದ ಎಸ್. ಗಂಗಾಧರ್, ರಾಮನಗರ ನಗರಸಭೆ ಅಧ್ಯಕ್ಷರಾದ ಕೆ. ಶೇಷಾದ್ರಿ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ನಟರಾಜು ಗಾಣಕಲ್ ಹಾಗೂ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಚೇತನ್ ಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.



ಸಿಎಂ ಡಿ.ಕೆ.ಶಿವಕುಮಾರ್ ಅವರು ಡಿಸಿಎಂ ಡಾ.ಜಿ.ಪರಮೇಶ್ವರ ಅವರ ಸದಾಶಿವನಗರ ನಿವಾಸಕ್ಕೆ ಗುರುವಾರ ಭೇಟಿ ನೀಡಿ ಆರೋಗ್ಯಕ್ಷೇಮ ವಿಚಾರಿಸಿದರು. ಸಚಿವ ಪ್ರಿಯಾಂಕ್ ಖರ್ಗೆ ಜತೆಗಿದ್ದರು. ಪರಮೇಶ್ವರ ಅವರು ಸೋಂಕು ಜ್ವರ ಪೀಡಿತರಾಗಿದ್ದು, ವಾರದಿಂದ ಮನೆಯಲ್ಲೇ ಚಿಕಿತ್ಸೆ, ವಿಶ್ರಾಂತಿ ಪಡೆಯುತ್ತಿದ್ದಾರೆ.

# ಭೂ ಸ್ವಾಧೀನ ಕೈಬಿಡುವಂತೆ ಒತ್ತಾಯಿಸಿ ಪ್ರಾಂತ ರೈತ ಸಂಘದಿಂದ ಪ್ರತಿಭಟನೆ

ಕೋಲಾರ

ವಿಧವೆಯರಿಗೆ ಮಾಸಾಶನ ಮತ್ತು ವೃದ್ಧಾಪ್ಯ ಪಿಂಚಣಿಯನ್ನು ಪ್ರತಿ ತಿಂಗಳು ನಿಗದಿತ ಸಮಯಕ್ಕೆ ಬಿಡುಗಡೆ ಮಾಡುವಂತೆ ಹಾಗೂ ರಾಜ್ಯದಲ್ಲಿ ಕೈಗಾರಿಕೆಗಾಗಿ ರೈತರ ಜಮೀನುಗಳನ್ನು ಬಲವಂತವಾಗಿ ಭೂ ಸ್ವಾದೀನ ಪಡಿಸಿಕೊಂಡ ಭೂ ಸಂತ್ರಸ್ಥ ಕುಟುಂಬಗಳಿಗೆ ಅದ ಮೋಸವನ್ನು ಸರಿಪಡಿಸುವಂತೆ ಒತ್ತಾಯಿಸಿ ಗುರುವಾರ ಕರ್ನಾಟಕ ಪ್ರಾಂತ ರೈತ ಸಂಘ(ಕೆ.ಪಿ.ಆರ್.ಎಸ್) ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ನಗರದ ತಹಶಿಲ್ದಾರ್ ಕಛೇರಿ ಮುಂದೆ ಪ್ರತಿಭಟನೆ ನಡೆಸಿದರು.

ಪ್ರಾಂತ ರೈತ ಸಂಘದ ಜಿಲ್ಲಾ ಅಧ್ಯಕ್ಷ ಎನ್.ಎನ್ ಶ್ರೀರಾಮ್ ಮಾತನಾಡಿ ರಾಜ್ಯದ ಅರ್ಹ ಕಡುಬಡವರಿಗೆ ನೀಡುತ್ತಿರುವ ಮಾಸಾಶನ ಮತ್ತು ವೃದ್ಧಾಪ್ಯ ಪಿಂಚಣಿಯು ಕಳೆದ ಮೂರು ತಿಂಗಳುಗಳಿಂದ ಬಿಡುಗಡೆಯಾಗಿಲ್ಲ ಅವರ ಆರೋಗ್ಯಕ್ಕಾಗಿ ಔಷಧಿಗಳು, ದಿನನಿತ್ಯದ ವೆಚ್ಚಗಳಿಗಾಗಿ ಹಣ ಇಲ್ಲದೇ ಕಡು ಬಡವರು ಹಲವು ಸಂಕಷ್ಟದಲ್ಲಿ ಜೀವನ ನಡೆಸುವಂತಾಗಿದೆ ಪ್ರತಿ ತಿಂಗಳು ನಿಗದಿತ ದಿನದಂತೆ ತಪ್ಪದೇ ಹಣವನ್ನು ಬಿಡುಗಡೆ ಮಾಡಬೇಕು ಎಂದು





ಸರ್ಕಾರವನ್ನು ಆಗ್ರಹಿಸಿದರು

ಮಾಸಾಶನ ಪಿಂಚಣಿ 800, ವೃದ್ಧಾಪ್ಯ ಪಿಂಚಣಿ ಕೆಲವರಿಗೆ 1000, ಮತ್ತೆ ಕೆಲವರಿಗೆ 1200 ರೂ. ಬರುತ್ತಿದ್ದು, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು ರಾಜ್ಯಗಳಲ್ಲಿ ಎಲ್ಲ ನಿರ್ಗತಿಕ ಪಿಂಚಣಿಯನ್ನು 3000 ರೂ.ಗಳಿಗೆ ಹೆಚ್ಚಿಸಲಾಗಿದೆ. ನಮ್ಮ ರಾಜ್ಯದಲ್ಲಿಯೂ ಇದೇ ರೀತಿ ಎಲ್ಲಾ ನಿರ್ಗತಿಕರ ಪಿಂಚಣಿಯನ್ನು 3000 ರೂ.ಗಳಿಗೆ ಹೆಚ್ಚಿಸಬೇಕು ಪ್ರತಿ ತಿಂಗಳು ನಿಗದಿತ ದಿನ ಬರುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು

ಸಿಐಟಿಯು ಜಿಲ್ಲಾ ಅಧ್ಯಕ್ಷ ಪಿ.ಶ್ರೀನಿವಾಸ್ ಮಾತನಾಡಿ ಬಳ್ಳಾರಿ ಜಿಲ್ಲೆಯ ಕುಡಿತೆನಿ ಪ್ರದೇಶದ 7 ಗ್ರಾಮಗಳ ಸುಮಾರು 5,000 ರೈತ ಕುಟುಂಬಗಳ 12,887 ಎಕರೆ ಜಮೀನುಗಳನ್ನು ಕೈಗಾರಿಕೆಗಳಿಗಾಗಿ, ಕಂಪನಿ ಮಾಲೀಕರೊಂದಿಗೆ ಶಾಮೀಲಾಗಿ, ಭೂ ಬೆಲೆ ನಿಗದಿಯಲ್ಲಿ ಅನುಸರಿಸಬೇಕಾದ ಮಾನದಂಡಗಳನ್ನು ಧಿಕ್ಕರಿಸಿ, ಮೋಸದ ಭೂ ಬೆಲೆ ನಿಗದಿಸಿ, ಬಲವಂತವಾಗಿ ಸ್ವಾಧೀನ ಪಡಿಸಿಕೊಂಡಿದ್ದಾರೆ ಅದೇ ಮಾದರಿಯಲ್ಲಿ ಬೆಂಗಳೂರಿಗೆ ಹತ್ತಿರದಲ್ಲಿರುವ ಬಿಡದಿಯಲ್ಲಿ ಟೌನ್ ಶಿಫ್ ಹೆಸರಿನಲ್ಲಿ ರೈತರ ಭೂಮಿಯನ್ನು ವಶಪಡಿಸಿಕೊಳ್ಳಲು ಹೊರಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು,

ಮೋಸದ ಭೂ ಬೆಲೆಯೊಂದಿಗೆ, ಬಲವಂತವಾಗಿ ಭೂ ಸ್ವಾಧೀನ ಮಾಡಿಕೊಂಡು ಸುಮಾರು 16 ವರ್ಷಗಳಾದರೂ ಯಾವುದೇ ಕೈಗಾರಿಕೆಗಳು ಸ್ಥಾಪಿಸದೆ ಭೂ ಸಂತ್ರಸ್ಥ ಕುಟುಂಬಗಳಿಗೆ ಉದ್ಯೋಗ ನೀಡದೆ, ಪ್ರತಿ ಕುಟುಂಬಕ್ಕೆ ಲಕ್ಷಾಂತರ ರೂಗಳ ಉದ್ಯೋಗ ನಷ್ಟ ಉಂಟು ಮಾಡಿದ್ದಾರೆ ರೈತರು ಮತ್ತು ಸರ್ಕಾರದ ಬೊಕ್ಕಸಕ್ಕೆ ಉಂಟು ಮಾಡಲಾದ ಈ ಪ್ರಕರಣಗಳ ತನಿಖೆಗಾಗಿ ಮತ್ತು ರೈತರಿಗೆ ಮಾಡಲಾದ ಮೋಸ ಮತ್ತು ಅನ್ಯಾಯವನ್ನು ಸರಿ ಪಡಿಸುವಂತೆ ಹಾಗೂ ತಕ್ಷಣವೇ ಅಲ್ಲಿನ ಭೂ ಸಂತ್ರಸ್ಥರ ಜೊತೆ ಚರ್ಚಿಸಿ ನ್ಯಾಯ ಒದಗಿಸಲು ಸರ್ಕಾರವನ್ನು ಒತ್ತಾಯಿಸಿದರು

ಪ್ರತಿಭಟನೆಯ ನೇತೃತ್ವವನ್ನು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಾತಕೋಟ ನವೀನ್ ಕುಮಾರ್, ಉಪಾಧ್ಯಕ್ಷರಾದ ಗಂಗಮ್ಮ, ವೆಂಕಟಮ್ಮ, ಸಹ ಕಾರ್ಯದರ್ಶಿ ವಿ.ನಾರಾಯಣರೆಡ್ಡಿ, ಡಿ.ರಂಗನಾಥ್, ಸಿಐಟಿಯು ಜಿಲ್ಲಾ ಖಜಾಂಚಿ ಹೆಚ್.ಬಿ ಕೃಷ್ಣಪ್ಪ, ಕಾರ್ಯದರ್ಶಿ ಎಂ.ಭೀಮರಾಜ್, ಮುಖಂಡರಾದ ಆಶಾ. ಚಿನ್ನಮ್ಮ, ಕೇಶವರಾವ್, ಮುನಿರತ್ನಮ್ಮ ಮುಂತಾದವರು ಇದ್ದರು.

## ತುಮಕೂರು ತಾಲ್ಲೂಕಿನ ತೋಟಗಾರಿಕಾ ಬೆಳೆಗಳಿಗೆ ವಿಮಾ ಸೌಲಭ್ಯ

ತುಮಕೂರು

ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ 2026–27ನೇ ಸಾಲಿಗೆ ಅಧಿಸೂಚನೆ ಹೊರಡಿಸಿರುವ ಬೆಳೆಗಳನ್ನು ವಿಮಾ ಸೌಲಭ್ಯಕ್ಕೊಳಪಡಿಸಬೇಕೆಂದು ತುಮಕೂರು ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ರೈತರಲ್ಲಿ ಮನವಿ ಮಾಡಿದ್ದಾರೆ.

ವಿಮಾ ಸೌಲಭ್ಯವು ಸಾಲ ಪಡೆದಿರುವ/ಪಡೆಯುವ ರೈತರಿಗೆ ಕಡ್ಡಾಯ ಹಾಗೂ ಬೆಳೆಸಾಲ ಪಡೆಯದ ರೈತರಿಗೆ ಐಚ್ಛಿಕವಾಗಿರುತ್ತದೆ.

ತುಮಕೂರು ತಾಲ್ಲೂಕಿನಲ್ಲಿ ಅಡಿಕೆ ಹಾಗೂ ಮಾವು ಬೆಳೆಯನ್ನು ವಿಮಾ ಸೌಲಭ್ಯಕ್ಕೆ ಒಳಪಡಿಸಲಾಗಿದ್ದು, ಅಡಿಕೆ ಬೆಳೆಯನ್ನು ನೋಂದಾಯಿಸಿಕೊಳ್ಳಲು ಜೂನ್ 30 ಹಾಗೂ ಮಾವು ಬೆಳೆಯನ್ನು ನೋಂದಾಯಿಸಲು ಜುಲೈ 31 ಕಡೆಯ ದಿನವಾಗಿದೆ. ವಿಮಾ ಯೋಜನೆಗೊಳಪಟ್ಟ ಅಡಿಕೆ ಬೆಳೆಗೆ ಪ್ರತಿ ಹೆಕ್ಟೇರ್‌ಗೆ ವಿಮಾ ಮೊತ್ತ 1,28,000 ರೂ. ಹಾಗೂ ಶೇ.5ರಂತೆ ರೈತರು ಪಾವತಿಸಬೇಕಾದ ವಿಮಾ ಕಂತಿನ ದರ 6400 ರೂ.ಗಳಾಗಿರುತ್ತದೆ ಹಾಗೂ ಮಾವು ಬೆಳೆಗೆ ಪ್ರತಿ ಹೆಕ್ಟೇರ್‌ಗೆ ವಿಮಾ ಮೊತ್ತ 80,000 ರೂ. ಹಾಗೂ ಶೇ.5ರಂತೆ ರೈತರು ಪಾವತಿಸಬೇಕಾದ ವಿಮಾ ಕಂತಿನ ದರ 4000 ರೂ.ಗಳಾಗಿರುತ್ತದೆ.

ತಮ್ಮ ಬೆಳೆಗಳಿಗೆ ವಿಮೆ ಮಾಡಿಸುವ ರೈತರು ಕೂಡಲೇ ನಿಗಧಿತ ಅರ್ಜಿಯೊಂದಿಗೆ ಪ್ರಸಕ್ತ ಸಾಲಿನಲ್ಲಿ ಭೂಮಿ ಹೊಂದಿರುವ ದಾಖಲೆಗಳಾದ ಪಹಣಿ, ಬ್ಯಾಂಕ್ ಖಾತೆ ಪುಸ್ತಕ, ಆಧಾರ್ ನಕಲು ಪ್ರತಿ ಹಾಗೂ ಸ್ವಯಂ ಘೋಷಿತ ಬೆಳೆ ವಿವರಗಳೊಂದಿಗೆ ಆಯಾ ತಾಲ್ಲೂಕಿನ ಯಾವುದಾದರು ರಾಷ್ಟ್ರೀಯ ಅಧಿಕೃತ ಬ್ಯಾಂಕು/ಗ್ರಾಮ ಒನ್/ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೋಂದಣಿ ಮಾಡಿಸಬಹುದಾಗಿದೆ.

ಬೆಳೆವಿಮೆ ಯೋಜನೆಯಡಿ 2026ರ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ನಿರ್ಧಿಷ್ಟ ಪ್ರಕೃತಿ ವಿಕೋಪಗಳಾದ ಮಳೆ ಮತ್ತು ಮೇಘ ಸ್ಫೋಟ ಸಂದರ್ಭದಲ್ಲಿ ಟರ್ಮ್ ಶೀಟ್‌ನಲ್ಲಿ ನಮೂದಿಸಿರುವ ರಿಸ್ಕ್ ಅವಧಿಯೊಳಗೆ ಬೆಳೆ ನಷ್ಟ ಸಂಭವಿಸಿದರೆ ವಿಮೆ ಮಾಡಿಸಿರುವ ರೈತರು ಸಂಬಂಧಪಟ್ಟ ಹಣಕಾಸು ಸಂಸ್ಥೆ ಅಥವಾ ಅನುಷ್ಠಾನಗೊಳಿಸುವ ವಿಮಾ ಸಂಸ್ಥೆಗಳ ಕಚೇರಿಗೆ 72 ಗಂಟೆಯೊಳಗೆ ತಿಳಿಸಬೇಕು. ಯಾವುದೇ ಸಂದರ್ಭದಲ್ಲಿ ವಿಮೆ ಮಾಡಿಸಿದ ಬೆಳೆಯ ವಿವರಗಳನ್ನು ಹಾನಿಯ ವ್ಯಾಪ್ತಿ ಹಾಗೂ ಹಾನಿಗೆ ಕಾರಣಗಳನ್ನು ನಿಗಧಿತ ಸಮಯದೊಳಗೆ ತಿಳಿಸಬೇಕು.

ಬ್ಯಾಂಕಿನಲ್ಲಿ ಸಾಲ ಮಂಜೂರಾದ ಎಲ್ಲಾ ರೈತರು ಈ ಯೋಜನೆಯಡಿ ಒಳಪಡಿಸಲಾಗುವುದು. ಸಾಲ ಪಡೆದ ರೈತರು ಯೋಜನೆಯಲ್ಲಿ ನೋಂದಾಯಿಸಿಕೊಳ್ಳಲು ಇಚ್ಛಿಸದೇ ಇದ್ದಲ್ಲಿ ಸಂಬಂಧಿಸಿದ ಬ್ಯಾಂಕ್ ಶಾಖೆಯ ವ್ಯವಸ್ಥಾಪಕರಿಗೆ ಬೆಳೆ ನೋಂದಣಿಯ ಅಂತಿಮ ದಿನಾಂಕಕ್ಕಿಂತ 7 ದಿನಗಳ ಮುಂಚಿತವಾಗಿ ಲಿಖಿತ ಮುಚ್ಚಳಿಕೆ ಪತ್ರವನ್ನು ನೀಡಿದಲ್ಲಿ ಅಂತಹ ರೈತರನ್ನು ಬೆಳೆ ವಿಮೆ ಯೋಜನೆಯಿಂದ ಕೈಬಿಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ರೈತರು ಹೋಬಳಿವಾರು ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿ ಕೋರ–8970870918, ಹೆಬ್ಬೂರು–9591655665, ಬೆಳ್ಳಾವಿ ಹಾಗೂ ಗೂಳೂರು–8880625527, ಊರ್ಡಿಗೆರೆ ಹಾಗೂ ಕಸಬಾ–8197516149ನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಸರ್ಕಾರದಿಂದ ನಿವೃತ್ತ ನೌಕರರ ಬೇಡಿಕೆಗಳಿಗೆ ಸ್ಪಂದನೆ ನಿರೀಕ್ಷೆ

ಚಿಂತಾಮಣಿ

ರಾಜ್ಯದಲ್ಲಿ ಹೊಸ ಸರ್ಕಾರ ಅಧಿಕಾರಕ್ಕೆ ಬಂದಿರುವ ಹಿನ್ನೆಲೆಯಲ್ಲಿ ನಿವೃತ್ತ ಸರ್ಕಾರಿ ನೌಕರರ ವಿವಿಧ ಬೇಡಿಕೆಗಳಿಗೆ ಸೂಕ್ತ ಸ್ಪಂದನೆ ದೊರೆಯುವ ನಿರೀಕ್ಷೆ ಹೆಚ್ಚಿದೆ ಎಂದು ತಾಲೂಕು ನಿವೃತ್ತ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ನಾರಾಯಣಸ್ವಾಮಿ ಅಭಿಪ್ರಾಯಪಟ್ಟರು.

ನಗರದ ಸಂಘದ ಕಾರ್ಯಾಲಯದಲ್ಲಿ ನಡೆದ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಿವೃತ್ತ ಸರ್ಕಾರಿ ನೌಕರರು ಹಲವು ವರ್ಷಗಳಿಂದ ತಮ್ಮ ನ್ಯಾಯಸಮ್ಮತ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುತ್ತಿದ್ದು, ಅವುಗಳ ಶೀಘ್ರ ಪರಿಹಾರಕ್ಕಾಗಿ ನಿರಂತರ ಪ್ರಯತ್ನಗಳು ನಡೆಯುತ್ತಿವೆ ಎಂದು ತಿಳಿಸಿದರು.

ನಿವೃತ್ತ ನೌಕರರು ಆರೋಗ್ಯ ಸೇರಿದಂತೆ ವಿವಿಧ ರೀತಿಯ ಸವಾಲುಗಳನ್ನು ಎದುರಿಸುತ್ತಿರುವುದರಿಂದ, ಅವರಿಗೆ ಅಗತ್ಯ ಸೌಲಭ್ಯಗಳು ಮತ್ತು ಕಲ್ಯಾಣ ಯೋಜನೆಗಳನ್ನು



ಒದಗಿಸುವುದು ಸರ್ಕಾರದ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಅವರು ಹೇಳಿದರು.

ರಾಜ್ಯಮಟ್ಟದ ನಿವೃತ್ತ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಸಂಬಂಧಿತ ಇಲಾಖೆಗಳೊಂದಿಗೆ ಹಲವು ಬಾರಿ ಚರ್ಚೆ ನಡೆಸಿ ಮನವಿಗಳನ್ನು ಸಲ್ಲಿಸಿರುವುದನ್ನು ಉಲ್ಲೇಖಿಸಿದ ಅವರು, ಹೊಸ ಸರ್ಕಾರ ನಿವೃತ್ತರ ಸಮಸ್ಯೆಗಳ ಕುರಿತು ವಿಶೇಷ ಗಮನ ಹರಿಸಿ ಸಕಾರಾತ್ಮಕ ಕ್ರಮಗಳನ್ನು ಕೈಗೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲಾ ಸಂಘದ ಉಪಾಧ್ಯಕ್ಷ ಎನ್.ಗೋಪಾಲರೆಡ್ಡಿ ಅವರು ನಿವೃತ್ತ ನೌಕರರ ಸ್ಥಿತಿ–ಗತಿಗಳ ಕುರಿತು ಮಾಹಿತಿ ನೀಡಿದರು ಹಾಗೂ ಅವರ ಕಲ್ಯಾಣಕ್ಕಾಗಿ ಸರ್ಕಾರದಿಂದ ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಮಾತನಾಡಿದರು.

ಸಭೆಯ ಅಂಗವಾಗಿ ಪ್ರತಿಭಾವಂತ ವಿದ್ಯಾರ್ಥಿಗಳು, ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸೇವೆ ಸಲ್ಲಿಸಿರುವ ಗಣ್ಯರು ಹಾಗೂ ದಾನಿಗಳನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಗಾನಾಮೃತ ಕಲಾತಂಡದವರಿಂದ ಮನರಂಜನಾತ್ಮಕ ಗಾಯನ ಕಾರ್ಯಕ್ರಮ ನಡೆಯಿತು.

ಸಂಘದ ಪದಾಧಿಕಾರಿಗಳು, ಸದಸ್ಯರು ಹಾಗೂ ಗಣ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ

# 3.475 ಕೆ.ಜಿ. ಗಾಂಜಾ ವಶ; ಒಡಿಶಾ ಮೂಲದ ಯುವಕ ಬಂಧನ

ಕೋಲಾರ

ಅಕ್ರಮವಾಗಿ ಗಾಂಜಾ ಸಾಗಣೆ ಹಾಗೂ ಮಾರಾಟಕ್ಕೆ ಯತ್ನಿಸುತ್ತಿದ್ದ ಒಡಿಶಾ ಮೂಲದ ಯುವಕನನ್ನು ಮುಳಬಾಗಿಲು ಗ್ರಾಮಾಂತರ ಪೊಲೀಸರು ಬಂಧಿಸಿ, ಸುಮಾರು 1.50 ಲಕ್ಷ ಮೌಲ್ಯದ 3.475 ಕೆ.ಜಿ. ಗಾಂಜಾವನ್ನು ವಶಪಡಿಸಿಕೊಂಡಿದ್ದಾರೆ. ಬಂಧಿತ ಆರೋಪಿಯನ್ನು ಒಡಿಶಾ ರಾಜ್ಯದ ದೇಬರ್ಗ ಜಿಲ್ಲೆಯ ಚಪ್ಲಿಪಲ್ಲಿ ಗ್ರಾಮದ ಸಿಬಶಂಕರ್ ನಾಯಕ್ @ ಡಾಕ್ಟರ್ ನಾಯಕ್ (21) ಎಂದು ಗುರುತಿಸಲಾಗಿದೆ. ಜೂನ್ 16ರಂದು ಮಧ್ಯಾಹ್ನ ಮುಳಬಾಗಿಲು ಗ್ರಾಮಾಂತರ ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕ ಕೆ.ಜಿ. ಸತೀಶ ಅವರು ಗಸ್ತು ಕರ್ತವ್ಯದಲ್ಲಿದ್ದ ವೇಳೆ ಅಲ್ಲಾಲಸಂದ್ರ ಗ್ರಾಮದ ರಾಷ್ಟ್ರೀಯ ಹೆದ್ದಾರಿ75ರ ಇಟ್ಟಿಗೆ ಕಾರ್ಖಾನೆ ಸಮೀಪ ಯುವಕನೊಬ್ಬ ಗಾಂಜಾ ಮಾರಾಟಕ್ಕೆ ಬಂದಿರುವ ಬಗ್ಗೆ ಖಚಿತ ಮಾಹಿತಿ ಲಭಿಸಿತ್ತು.



## ಕಾಂಗ್ರೆಸ್‌ಗೆ ಪಕ್ಷಾತೀತ ಬೆಂಬಲ

ಕೋಲಾರ

ಗೆಲುವು ಸಾಧಿಸಿದ ಪಕ್ಷದ ಬಿ.ಕೆ.ಹರಿಪ್ರಸಾದ್, ಮಳವಳ್ಳಿ ಶಿವಣ್ಣ, ಪಿ.ವಿ.ಮೋಹನ್, ವಿನಯ್ ಕಾರ್ತಿಕ್, ತಿಪ್ಪಣ್ಣಪ್ಪ ಕಮಕನೂರು ಅವರನ್ನು ವಿಧಾನಸೌಧದಲ್ಲಿ ಸಿಎಂ ಡಿ.ಕೆ.ಶಿವಕುಮಾರ್ ಅವರು ಅಭಿನಂದಿಸಿದ ನಂತರ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಇದ್ದರು.

"ನಾವು ಯಾವ ಹೆಜ್ಜೆಯನ್ನಿಟ್ಟು ಮುಂದುವರೆಯುತ್ತಿದ್ದೆವೆ ಯೋ ಅದಕ್ಕೆ ನಾವೂ ಜೊತೆಗಿದ್ದೇವೆ ಎಂದು ಪಕ್ಷಾತೀತವಾಗಿ ಬೆಂಬಲ ನೀಡಿದ್ದಾರೆ. ನಮ್ಮ ಪಕ್ಷದ ಶಾಸಕರೂ ಒಗ್ಗಟ್ಟಾಗಿ ಬೆಂಬಲಿಸಿದ್ದಾರೆ. ನಮಗೆ ಹೆಚ್ಚಿನ ಮತ ನೀಡಿದ ಬೇರೆ, ಬೇರೆ ಪಕ್ಷದ ವಿಶ್ವಾಸವನ್ನು ನಾವು ಉಳಿಸಿಕೊಳ್ಳುತ್ತೇವೆ. ನಿಮ್ಮ ಭಾವನೆಯನ್ನು ಅರಿತುಕೊಂಡು ನಿಮ್ಮ ಸೇವೆಯಲ್ಲಿ ಮುಂದುವರೆಯುತ್ತೇವೆ. ನೀವು ನಮಗೆ ನೀಡಿದ ವಿಶ್ವಾಸ ಜನರಿಗೆ ನೀಡಿದ ಶಕ್ತಿ" ಎಂದು ಬಣ್ಣಿಸಿದರು.

"ನಮ್ಮ ಪಕ್ಷದ ಶಾಸಕರ ಒಂದು ಮತವೂ ತಿರಸ್ಕೃತವಾಗಬಾರದು ಎಂದು ತರಬೇತಿ ನೀಡಲಾಗಿತ್ತು. ಇದಕ್ಕೆ ಸಹಕರಿಸಿದ ಎಲ್ಲಾ ಪದಾಧಿಕಾರಿಗಳಿಗೆ ನಾನು ವಿಶೇಷವಾಗಿ ಧನ್ಯವಾದ ಹೇಳುತ್ತೇನೆ. ಇದಕ್ಕೆ ದುಡಿದಂತಹ ಪಕ್ಷದ ಎಲ್ಲಾ ಶಾಸಕರು, ನಾಯಕರು, ಎಐಸಿಸಿ ಪ್ರಧಾನ ಕಾರ್ಯದರ್ಶಿಯವರಾದ ರಣದೀಪ್ ಸುರ್ಜೇವಾಲಾ ಅವರು ಹಾಗೂ ಇತರೇ ಕಾರ್ಯದರ್ಶಿಗಳನ್ನು ನಾನು ಅಭಿನಂಧಿಸುತ್ತೇನೆ" ಎಂದರು. "ಮಾಧ್ಯಮಗಳು ಸಹ ಸರ್ಕಾರಕ್ಕೆ ಬೆಂಬಲವಾಗಿ ಸಲಹೆ ನೀಡಿದ್ದೀರಿ. ನಿಮಗೂ ಧನ್ಯವಾದಗಳು" ಎಂದರು.

ಅಡ್ಡ ಮತದಾನಕ್ಕಾಗಿ ಕುದುರೆ ವ್ಯಾಪಾರ ನಡೆದಿದೆಯೇ ಎಂದು ಕೇಳಿದಾಗ, "ಇದರ ಬಗ್ಗೆ ನನಗೆ ಗೊತ್ತಿಲ್ಲ. ಮತ ಯಾರು ಹಾಕಿದ್ದಾರೆ ಎಂಬುದೂ ನನಗೆ ಗೊತ್ತಿಲ್ಲ. ಇಲ್ಲಿ ನಡೆದಿರುವುದು ಗುಪ್ತ ಮತದಾನ. ಯಾರು ಮತ ಹಾಕಿದ್ದಾರೆ ಎಂದು ಯಾರಿಗೆ ಗೊತ್ತು. ಆತ್ಮವಿಶ್ವಾಸದ ಮತ ಹಾಕಿದ್ದಾರೆ. ನಾನು ಯಾರ ಬಳಿಯೂ ಮಾತನಾಡಲು ಹೋಗಿಲ್ಲ, ಮತ ಕೇಳಲೂ ಹೋಗಿಲ್ಲ. ನಮ್ಮಪಕ್ಷದಿಂದ ಐದು ಅಭ್ಯರ್ಥಿಗಳು ನಿಂತಿದ್ದರು. ನಮ್ಮ ಶಾಸಕರ ಸಂಖ್ಯಾಬಲ ಎಷ್ಟಿತ್ತು ಎಂಬುದು ಮಾಧ್ಯಮಗಳಿಗೆ ತಿಳಿದಿತ್ತು. ಐದು ಜನ ಗೆಲ್ಲುತ್ತಾರೆ ಎನ್ನುವ ವಿಶ್ವಾಸವಿತ್ತು. ಅವರು ಗೆದ್ದಿದ್ದಾರೆ" ಎಂದರು.

"ದಳ, ಬಿಜೆಪಿ ಸೇರಿದಂತೆ ಯಾವ ಪಕ್ಷದ ಆಂತರಿಕ ವಿಚಾರ ಏನಿದೆಯೋ ಎಂಬುದು ನನಗೆ ಏನೂ ಗೊತ್ತಿಲ್ಲ" ಎಂದರು.

ನೀವು ಸಹಕಾರ ಕೋರಿದ್ದೀರಿ ಎಂದು ಎಸ್.ಟಿ. ಸೋಮಶೇಖರ್ ಹೇಳಿದ್ದಾರೆ ಎಂದಾಗ, "ಅವರನ್ನು ಉಚ್ಚಾಟನೆ ಮಾಡಿ ಕಳಿಸಿದ್ದಾರಲ್ಲವೇ? ನಮ್ಮ ಹತ್ತಿರ ಇರಬೇಡಿ ಎಂದು ಕಳಿಸಿದ್ದರು. ಹೀಗೆ ಕಳಿಸಿದವರನ್ನು ದಾರಿಯಲ್ಲಿಯೇ ಬಿಡಲು ಆಗುತ್ತದೆಯೇ? ನಾವು ದಾರಿ ಇಲ್ಲದವರಿಗೆ ದಾರಿ ತೋರಿಸುವ ಕೆಲಸ ಮಾಡಿದ್ದೇವೆ" ಆತ್ಮವಿಶ್ವಾಸದ ಮತ ಹಾಕಿದ್ದಾರೆ. ನಾನು ಯಾರ ಬಳಿಯೂ ಮಾತನಾಡಲು ಹೋಗಿಲ್ಲ, ಮತ ಕೇಳಲೂ ಹೋಗಿಲ್ಲ. ನಮ್ಮಪಕ್ಷದಿಂದ ಐದು ಅಭ್ಯರ್ಥಿಗಳು ನಿಂತಿದ್ದರು. ನಮ್ಮ ಶಾಸಕರ ಸಂಖ್ಯಾಬಲ ಎಷ್ಟಿತ್ತು ಎಂಬುದು ಮಾಧ್ಯಮಗಳಿಗೆ ತಿಳಿದಿತ್ತು. ಐದು ಜನ ಗೆಲ್ಲುತ್ತಾರೆ ಎನ್ನುವ ವಿಶ್ವಾಸವಿತ್ತು. ಅವರು ಗೆದ್ದಿದ್ದಾರೆ" ಎಂದರು.

# ‘ಬಕೆಟ್ ನೀರನ್ನೂ ಬಳಸಲ್ಲ ’

ಕೋಲಾರ

ತಮಿಳುನಾಡು ಅನಗತ್ಯ ಕ್ಯಾತೆ ತೆಗೆಯುತ್ತಿಲ್ಲವೇ ಎಂದು ಕೇಳಿದಾಗ, “ಅವರು ರಾಜಕೀಯ ಉಳಿವಿಗಾಗಿ ಧ್ವನಿ ಎತ್ತುತ್ತಿದ್ದಾರೆ. ಸುಪ್ರೀಂ ಕೋರ್ಟ್ ತ್ರಿಸದಸ್ಯ ಪೀಠ ತೀರ್ಪು ಬಂದ ಬಳಿಕ ಮತ್ತೇನಿದೆ? ಕರ್ನಾಟಕ 177 ಟಿಎಂಸಿ ನೀರು ಬಿಡಬೇಕು ಎಂದು ನೀಡಿದ ನಿರ್ದೇಶನವನ್ನು ನಾವು ಒಪ್ಪಿಕೊಳ್ಳಲಿಲ್ಲವೇ?” ಎಂದು ತಿಳಿಸಿದರು.

ರಾಜ್ಯದ ಬಿಜೆಪಿ ಸಂಸದರು ಇದರ ಬಗ್ಗೆ ಹೋರಾಟ ಮಾಡಬೇಕಲ್ಲವೇ ಎಂದಾಗ, “ಅವರು ಹೋರಾಟ ಮಾಡುತ್ತಾರೆ. ನಮ್ಮ ರಾಜ್ಯದಿಂದ ಆಯ್ಕೆಯಾಗಿರುವ ಕಾಂಗ್ರೆಸ್, ಬಿಜೆಪಿ, ದಳ ಎಲ್ಲಾ ಸಂಸದರು ಒಗ್ಗಟ್ಟಾಗಿ ನಮ್ಮ ರಾಜ್ಯದ ಹಿತ ಕಾಪಾಡುತ್ತಾರೆ ಎಂಬ ವಿಶ್ವಾಸ ನಮಗಿದೆ” ಎಂದು ತಿಳಿಸಿದರು.

ತಮಿಳುನಾಡಿನಲ್ಲಿ ನಿಮ್ಮ ಮೈತ್ರಿ ಇದೆ ಎಂದು ಕೇಳಿದಾಗ, “ನಾವು ಅವರಿಗೆ ಏನು ಮನವಿ ಮಾಡಬೇಕೋ ಮನವಿ ಮಾಡುತ್ತೇವೆ. ಇಲ್ಲಿ ರಾಜಕಾರಣ ಏನಿಲ್ಲ. ಎರಡು ರಾಜ್ಯಗಳ ಜನರ ಹಿತ ಕಾಪಾಡಿಕೊಂಡು ಹೋಗೋಣ” ಎಂದರು.

ಪರಿಷತ್ ಚುನಾವಣೆಯಲ್ಲಿ ಬಹಳಷ್ಟು ತಂತ್ರಗಾರಿಕೆ ಮಾಡಲಾಗಿದೆ ಎಂದು ಕೇಳಿದಾಗ, “ನಾವು ಯಾವುದೇ ತಂತ್ರಗಾರಿಕೆ ಮಾಡಿಲ್ಲ. ಅದರ ಅವಶ್ಯಕತೆ ಇಲ್ಲ. ಎಲ್ಲರೂ ಪ್ರಜ್ಞಾವಂತರು, ಬುದ್ಧಿವಂತರಿದ್ದು, ಜನರ ಪ್ರತಿನಿಧಿಗಳಾಗಿದ್ದಾರೆ. ಅವರು ತಮ್ಮ ಸ್ವಇಚ್ಛೆ ಮೇಲೆ ಯಾರಿಗೆ ಮತ ಹಾಕಬೇಕೋ ಹಾಕಿದ್ದಾರೆ. ನಾನು ನಮ್ಮ ಶಾಸಕರ ಜೊತೆ ಎರಡು ದಿನ ಕಾಲ ಕಳೆದಿದ್ದೇನೆ ಹೊರತು, ಬೇರೆ ಯಾವ ತಂತ್ರಗಾರಿಕೆ ಮಾಡಿಲ್ಲ” ಎಂದು ತಿಳಿಸಿದರು.

ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್‌ನಿಂದ ಕಾಂಗ್ರೆಸ್ ಅಭ್ಯರ್ಥಿಗೆ ಅಡ್ಡಮತದಾನ ನಡೆದಿದೆ ಎಂಬ ವಿಚಾರವಾಗಿ ಕೇಳಿದಾಗ, “ನಾವು ಯಾವುದೇ ಅಡ್ಡಮತದಾನದಲ್ಲಿ ಭಾಗಿಯಾಗಿಲ್ಲ, ಅದರ ಬಗ್ಗೆ ಮಾಹಿತಿಯೂ ಇಲ್ಲ. ಇದು ರಹಸ್ಯ ಮತವಾಗಿದ್ದು, ಫಲಿತಾಂಶ ಬರುವವರೆಗೂ ಕಾಯೋಣ. ಅಡ್ಡಮತದಾನ ಯಾವ ಕಾರಣಕ್ಕೆ ಆಗುತ್ತದೆ? ನಮ್ಮ ಶಾಸಕರ ಮತವನ್ನು ನಮ್ಮ ಅಭ್ಯರ್ಥಿಗೆ ಹಾಕುವಂತೆ ಕೇಳಿಕೊಂಡಿದ್ದೇವೆ. ಅಭ್ಯರ್ಥಿಗಳು ಏನೇನು ಮಾಡಿಕೊಂಡಿದ್ದಾರೋ ಗೊತ್ತಿಲ್ಲ” ಎಂದರು. ರೆಸಾರ್ಟ್ ಸೇರಿದ್ದರ ಬಗ್ಗೆ ಕೇಳಿದಾಗ, “ಪರಿಷತ್ ಚುನಾವಣೆಯಲ್ಲಿ ಹೇಗೆ ಮತದಾನ ಮಾಡಬೇಕು ಎಂದು ಮಾರ್ಗದರ್ಶನ ಹಾಗೂ ತರಬೇತಿ ನೀಡಿದ್ದೇವೆ. ಇಲ್ಲಿ ಆದ್ಯತೆ ಮತ ಚಲಾವಣೆಯಲ್ಲಿ ಗುರುತು ಮಾಡುವಾಗ ಅನೇಕ ವ್ಯತ್ಯಾಸಗಳಾಗುತ್ತವೆ. ನಮ್ಮಲ್ಲಿ 60–70 ಶಾಸಕರು ಹೊಸಬರಾಗಿದ್ದು, ಅವರಿಗೆ ಆದ್ಯತೆ ಮತದ ಬಗ್ಗೆ ಅರಿವು ಮೂಡಿಸಿದ್ದೇವೆ. ಶಿಕ್ಷಕರು ಹಾಗೂ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಸುಮಾರು 7–8 ಸಾವಿರ ಮತಗಳು ತಿರಸ್ಕೃತಗೊಳ್ಳುತ್ತವೆ” ಎಂದು ತಿಳಿಸಿದರು. ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ಇದ್ದೇವೆ ಎಂದು ತಿಳಿಸಿದ್ದಾರೆ ಎಂದು ಕೇಳಿದಾಗ, “ಇದು ಗೌಪ್ಯ ಮತದಾನವಾಗಿರುವುದರಿಂದ ಅವರು ಯಾರಿಗೆ ಮತ ಹಾಕಿದ್ದಾರೆ ಎಂದು ನಮಗೆ ಗೊತ್ತಿಲ್ಲ. ನಾನು ದುರ್ಬಿನು ಹಾಕಿ ನೋಡಲು ಸಾಧ್ಯವಿಲ್ಲ” ಎಂದು ತಿಳಿಸಿದರು.

ದೆಹಲಿಗೆ ಹೋಗುತ್ತಿದ್ದೀರಾ ಎಂದು ಕೇಳಿದಾಗ, “ತಿರುಪತಿ ತಿಮ್ಮಪ್ಪನ ದರ್ಶನಕ್ಕೆ ಹೋಗುತ್ತಿದ್ದೇನೆ” ಎಂದು ತಿಳಿಸಿದರು.

# ಲೋಕ ಅದಾಲತ್: ರಾಜಿ ಸಂಧಾನದ ಮೂಲಕ ವ್ಯಾಜ್ಯಗಳ ಇತ್ಯರ್ಥಕ್ಕೆ ಅವಕಾಶ

ಕೋಲಾರ

ಜಿಲ್ಲೆಯಾದ್ಯಂತ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕೋಲಾರ, ಜಂಟಿಯಾಗಿ ಜುಲೈ 11 ರಂದು ರಾಷ್ಟ್ರೀಯ ಲೋಕ ಅದಾಲತ್ ಅನ್ನು ಆಯೋಜಿಸಿದೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀಮತಿ ಜಯಶ್ರೀ ಅವರು ತಿಳಿಸಿದ್ದಾರೆ.

ಕೋಲಾರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಸಿ ಮಾತನಾಡಿದ ಅವರು, ಕೋಲಾರ ಜಿಲ್ಲೆಯಲ್ಲಿ ಈಗಾಗಲೇ ಸಾವಿರಾರು ಪ್ರಕರಣಗಳನ್ನು ಅದಾಲತ್ ಮೂಲಕ ಯಶಸ್ವಿಯಾಗಿ ಇತ್ಯರ್ಥಪಡಿಸಲಾಗಿದೆ.

ಈ ಬಾರಿಯ ವಿಶೇಷ ಅದಾಲತ್‌ಗಾಗಿ ಚೆಕ್ ಬೌನ್ಸ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಕೋಲಾರದಲ್ಲಿ 3,104, ಮಾಲೂರಿನಲ್ಲಿ 1,003, ಬಂಗಾರಪೇಟೆಯಲ್ಲಿ 994, ಮುಳಬಾಗಿಲಿನಲ್ಲಿ 905, ಕೆಜಿಎಫ್‌ನಲ್ಲಿ 780 ಹಾಗೂ ಶ್ರೀನಿವಾಸಪುರದಲ್ಲಿ 656 ಪ್ರಕರಣಗಳನ್ನು ಗುರುತಿಸಲಾಗಿದ್ದು, ನೋಟಿಸ್





ಜಾರಿ ಮಾಡಲಾಗಿದೆ ಎಂದು ತಿಳಿಸಿದರು. ಇದಲ್ಲದೆ ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಈ ಜಿಲ್ಲೆಯ 43 ಪ್ರಕರಣಗಳನ್ನು ಕೂಡ ಆಗಸ್ಟ್ ತಿಂಗಳಿನಲ್ಲಿ ನಡೆಯಲಿರುವ ಸುಪ್ರೀಂ ಕೋರ್ಟ್ ಅದಾಲತ್‌ನಲ್ಲಿ ಇತ್ಯರ್ಥಪಡಿಸಲು ಗುರುತಿಸಲಾಗಿದೆ. ಈ ದಿನಾಂಕದವರೆಗೆ ಸಂಖ್ಯೆಗಳು ಹೆಚ್ಚಾಗಬಹುದು ಎಂದು ಅವರು ತಿಳಿಸಿದರು.

ಅಂತಹ ಗುರುತಿಸಲಾದ ಪ್ರಕರಣಗಳ ಕಕ್ಷಿದಾರರು ಮತ್ತು ದಾವೆ ಹೂಡುವವರನ್ನು ಪ್ರತಿನಿಧಿಸುವ ವಕೀಲರು, ಪ್ರಕರಣವನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ಲೋಕ ಅದಾಲತ್‌ನಲ್ಲಿ ಭಾಗವಹಿಸಿ ಇತ್ಯರ್ಥ ಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದರು.

ರಾಷ್ಟ್ರೀಯ ಲೋಕ ಅದಾಲತ್ ಜೊತೆಗೆ, ಜುಲೈ 18 ರಂದು ಚೆಕ್ ಬೌನ್ಸ್ ಪ್ರಕರಣಗಳನ್ನು ಮಾತ್ರ ಇತ್ಯರ್ಥಪಡಿಸಲು ವಿಶೇಷ ಲೋಕ ಅದಾಲತ್, ಡ್ರೈವ್ 2.0 ಅನ್ನು ಸಹ ನಡೆಸಲಾಗುವುದು ಮತ್ತು ಜುಲೈ 15 ರಂದು ಮಧ್ಯಸ್ಥಿಕೆ ಕೇಂದ್ರದ ಮುಂದೆ ಉಲ್ಲೇಖಿಸಲಾದ ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗುವುದು ಎಂದು ಅವರು ಹೇಳಿದರು.

ಭಾರತದ ಸರ್ವೋಚ್ಚ ನ್ಯಾಯಾಲಯದಲ್ಲಿ ಕೋಲಾರ ಜಿಲ್ಲೆಗೆ ಸಂಬಂಧಿಸಿದಂತೆ ಬಾಕಿ ಇರುವ 43 ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ನಮಗೆ ನಿರ್ದೇಶನ ನೀಡಲಾಗಿದೆ. ಅಂತಹ ಪ್ರಕರಣಗಳನ್ನು ಜುಲೈ 21, 22 ಮತ್ತು 23 ರಂದು ವಿಶೇಷ ವಿಚಾರಣೆಗಳಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಭು ಬಡಿಗೇರ್ ಅವರು ಮಾತನಾಡಿ ಲೋಕ ಅದಾಲತ್‌ನಲ್ಲಿ ಕೇವಲ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು ಮಾತ್ರವಲ್ಲದೆ, ಕಂದಾಯ ಇಲಾಖೆ, ವಿದ್ಯುತ್ ಶಕ್ತಿ ಇಲಾಖೆ ಹಾಗೂ ಇತರ ಇಲಾಖೆಗಳಿಗೆ ಸಂಬಂಧಿಸಿದ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಕೂಡ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಸಿವಿಲ್ ಮತ್ತು ವಿಭಾಗ ಕೋರಿಕೆ: ಕೌಟುಂಬಿಕ ಆಸ್ತಿ ಹಂಚಿಕೆ ಹಾಗೂ ಸಿವಿಲ್ ವ್ಯಾಜ್ಯಗಳು. ಕೌಟುಂಬಿಕ ಪ್ರಕರಣಗಳು: ಗಂಡ–ಹೆಂಡತಿ ನಡುವಿನ ಭಿನ್ನಾಭಿಪ್ರಾಯ, ಜೀವನಾಂಶ ಹಾಗೂ ವಿಚ್ಛೇದನ ಪ್ರಕರಣಗಳು. ಅಪಘಾತ ಪರಿಹಾರ: ವಾಹನ ಅಪಘಾತದ ವಿಮಾ ಪರಿಹಾರ ಪ್ರಕರಣಗಳು. ಚೆಕ್ ಬೌನ್ಸ್ ಪ್ರಕರಣಗಳು: ಹಣಕಾಸು ವ್ಯವಹಾರದ ಚೆಕ್ ಅಮಾನ್ಯ ಪ್ರಕರಣಗಳು ಸೇರಿದಂತೆ ಮತ್ತಿತರ ಪ್ರಕರಣಗಳನ್ನು ಇಥ್ಯರ್ಥ ಪಡಿಸಿಕೊಳ್ಳಬಹುದಾಗಿದೆ ಎಂದರು.

ನ್ಯಾಯಾಧೀಶರು, ವಕೀಲರು ಹಾಗೂ ಪಕ್ಷಗಾರರು ಜೊತೆಯಾಗಿ ಈ ಅದಾಲತ್ ಅನ್ನು ಯಶಸ್ವಿಗೊಳಿಸಬೇಕಿದೆ. ಸಾರ್ವಜನಿಕರು ಹಾಗೂ ಕಕ್ಷಿದಾರರು ಯಾವುದೇ ರೀತಿಯ ಭಯವಿಲ್ಲದೆ, ತಮಗೆ ನೀಡಲಾದ ನೋಟಿಸ್ ಆಧಾರದ ಮೇಲೆ ನ್ಯಾಯಾಲಯಕ್ಕೆ ಬಂದು ಈ ಉಚಿತ ರಾಜಿ ಸಂಧಾನ ಪ್ರಕ್ರಿಯೆಯ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಪತ್ರಿಕಾಗೋಷ್ಠಿಯಲ್ಲಿ ಹಿರಿಯ ವಕೀಲರು ಸಾರ್ವಜನಿಕರಲ್ಲಿ ವಿನಂತಿಸಿಕೊಂಡರು.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಡಿಎಲ್‌ಎಸ್‌ಎ ಸದಸ್ಯ ಕಾರ್ಯದರ್ಶಿ ಪ್ರಭು ಬಡಿಗೇರ್, ವಕೀಲರ ಸಂಘದ ಅಧ್ಯಕ್ಷರು ಎಲ್. ಶ್ರೀನಿವಾಸ್ ಸೇರಿದಂತೆ ಮತ್ತಿತರರು

ಭಾರತ ಸಾರಥಿ
20/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## 90,995 ಫಲಾನುಭವಿಗಳ ಪಿಂಚಣಿ ತಾತ್ಕಾಲಿಕ ಸ್ಥಗಿತ

ಕೋಲಾರ

ಸರ್ಕಾರದ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳು ತಮ್ಮ ಸೌಲಭ್ಯವನ್ನು ನಿರಂತರವಾಗಿ ಪಡೆಯಲು ತಕ್ಷಣವೇ ಆದಾಯ ಪ್ರಮಾಣಪತ್ರವನ್ನು ಸಲ್ಲಿಸಬೇಕು ಎಂದು ಕೋಲಾರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ಕಾರದ ನಿರ್ದೇಶನದಂತೆ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ವಾರ್ಷಿಕ ಆದಾಯದ ಮಿತಿಯನ್ನು ರೂ.32,000/-ಕ್ಕೆ ನಿಗದಿಪಡಿಸಲಾಗಿದೆ. ಈ ಆದಾಯ ಮಿತಿಯ ಪರಿಶೀಲನೆಗಾಗಿ ಅರ್ಹ ಫಲಾನುಭವಿಗಳು ಆದಾಯ ಪ್ರಮಾಣಪತ್ರವನ್ನು ಸಂಬಂಧಪಟ್ಟ ತಾಲೂಕು ಕಚೇರಿಗೆ ಸಲ್ಲಿಸುವುದು ಕಡ್ಡಾಯವಾಗಿದೆ. ಈ ಕುರಿತು ಈಗಾಗಲೇ ಎಲ್ಲಾ ತಾಲೂಕು ಕಚೇರಿಗಳ ಮುಖಾಂತರ ಫಲಾನುಭವಿಗಳಿಗೆ ಅಗತ್ಯ ಮಾಹಿತಿಯನ್ನು ನೀಡಲಾಗಿದೆ.

ಸರ್ಕಾರದ ಪ್ರಮುಖ ಸಾಮಾಜಿಕ ಭದ್ರತಾ ಯೋಜನೆಗಳಾದ ಈ ಕೆಳಗಿನ ಪಿಂಚಣಿ ಸೌಲಭ್ಯ ಪಡೆಯುವವರಿಗೆ ಇದು ಅನ್ವಯಿಸುತ್ತದೆ: ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಪಿಂಚಣಿ ಯೋಜನೆ. ವಿಧವಾ ಪಿಂಚಣಿ ಯೋಜನೆ. ಅಂಗವಿಕಲ ಪಿಂಚಣಿ ಯೋಜನೆ. ಸಂಧ್ಯಾಸುರಕ್ಷಾ ಪಿಂಚಣಿ ಯೋಜನೆ. ಮೈತ್ರಿ ಪಿಂಚಣಿ ಯೋಜನೆ. ಮನಸ್ವಿನಿ ಪಿಂಚಣಿ ಯೋಜನೆಗಳಡಿಯಲ್ಲಿ ಸೌಲಭ್ಯ ಪಡೆಯುತ್ತಿರುವವರ ಪೈಕಿ ಸಂಶಯಾಸ್ಪದವೆಂದು ಗುರುತಿಸಲಾಗಿರುವ ಒಟ್ಟು 90,995 ಫಲಾನುಭವಿಗಳ ಪಿಂಚಣಿಯನ್ನು ಪ್ರಸ್ತುತ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ

"ತಾತ್ಕಾಲಿಕವಾಗಿ ಪಿಂಚಣಿ ಸ್ಥಗಿತಗೊಂಡಿರುವ ಫಲಾನುಭವಿಗಳು ತಮ್ಮ ಆದಾಯ ಪ್ರಮಾಣಪತ್ರವನ್ನು ತಕ್ಷಣವೇ ಸಂಬಂಧಪಟ್ಟ ತಾಲೂಕು ಕಚೇರಿಗೆ ಸಲ್ಲಿಸಬೇಕು. ದಾಖಲೆಗಳ ಪರಿಶೀಲನೆಯ ನಂತರ ಅರ್ಹರೆಂದು ಕಂಡುಬರುವ ಫಲಾನುಭವಿಗಳ ಪಿಂಚಣಿ ಪ್ರಕರಣಗಳನ್ನು ಮಾತ್ರ ನಿಯಮಾನುಸಾರ ಮುಂದುವರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರು ಶೀಘ್ರವಾಗಿ ದಾಖಲೆ ಸಲ್ಲಿಸಿ ಸಹಕರಿಸಬೇಕು."

ಅರ್ಹ ಫಲಾನುಭವಿಗಳು ಯಾವುದೇ ವಿಳಂಬವಿಲ್ಲದೆ ತಮ್ಮ ಆದಾಯ ಪ್ರಮಾಣಪತ್ರವನ್ನು ಸಲ್ಲಿಸಿ, ಪಿಂಚಣಿ ಸೌಲಭ್ಯವನ್ನು ನಿರಂತರವಾಗಿ ಪಡೆದುಕೊಳ್ಳಲು ಕೋರಲಾಗಿದೆ.

## ತರಬೇತಿಗಾಗಿ ಅರ್ಜಿ ಆಹ್ವಾನ

ಕೋಲಾರ

ಕೋಲಾರ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿಗೆ ಹಿಂದುಳಿದ ವರ್ಗಗಳ (ಪ್ರವರ್ಗ-1,2ಎ,3ಎ,3ಬಿ) ಸಮುದಾಯಕ್ಕೆ ಸೇರಿದ ಕಾನೂನು ಪದವೀದರರಿಂದ ಆಡಳಿತ ಯೋಜನೆಯಡಿ 4 ವರ್ಷಗಳ ಅವಧಿಯ ಕಾನೂನು ತರಬೇತಿಗೆ ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಿದ್ದು, ಈ ಅಭ್ಯರ್ಥಿಗಳು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು, (ಪ್ರತಿ ಮಾಹೆ ತರಬೇತಿ ಭತ್ಯೆ ರೂ.4000) ಪದವಿ ಮತ್ತು ಕಾನೂನು ಪದವಿಗಳ ಅಂಕಪಟ್ಟಿಗಳ ದೃಢೀಕೃತ ಪ್ರತಿಗಳು ಹಾಗೂ ಬಾರ್ ಅಸೋಸಿಯೇಷನ್‌ನಲ್ಲಿ ನೊಂದಣಿಯಾಗಿರುವ ಪ್ರಮಾಣ ಪತ್ರ ಹಾಗೂ ಇತರೆ ದಾಖಲೆಗಳನ್ನು) ಅಭ್ಯರ್ಥಿಯು ಅರ್ಜಿ ನಮೂನೆಯೊಂದಿಗೆ ಕೋಲಾರ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಜುಲೈ 15 ರೊಳಗೆ ಇ.ಟಿ.ಸಿ.ಎಂ ಆಸ್ಪತ್ರೆ ಮುಂಭಾಗದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ಸಲ್ಲಿಸಬೇಕು.

ಆದಾಯ ಮಿತಿ: ಪ್ರವರ್ಗ-1ಕ್ಕೆ ರೂ. 3.50 ಲಕ್ಷಗಳು/ಪ್ರವರ್ಗ 2ಎ, 3ಎ,3ಬಿ ಅಭ್ಯರ್ಥಿಗಳಿಗೆ ರೂ . 2.50 ಲಕ್ಷಗಳು. ವಯಸ್ಸು: ಅಭ್ಯರ್ಥಿಯ ವಯಸ್ಸು ಅರ್ಜಿ ಸ್ವೀಕರಿಸುವ ಕೊನೆಯ ದಿನಾಂಕಕ್ಕೆ ಪ್ರವರ್ಗ-1ಕ್ಕೆ 40 ವರ್ಷ ಹಾಗೂ ಪ್ರವರ್ಗ-2ಎ, ಪ್ರವರ್ಗ-3ಎ, ಪ್ರವರ್ಗ-3ಬಿ , 38 ವರ್ಷಗಳೊಳಗೆ ಇರಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08152-222336 ಯನ್ನು ಸಂಪರ್ಕಿಸಬಹುದೆಂದು ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತರಿಂದ ಅರ್ಜಿ ಆಹ್ವಾನ

ತುಮಕೂರು

ತೋಟಗಾರಿಕೆ ಇಲಾಖೆ ವತಿಯಿಂದ 2026-27ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ ಮತ್ತು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ತೋಟಗಾರಿಕೆ ರೈತರಿಗೆ ನೆರವು ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಹೊಸ ಪ್ರದೇಶ ವಿಸ್ತರಣೆ ಮಾಡಲು ಹಣ್ಣಿನ ಬೆಳೆಗಳಾದ ಬಾಳೆ, ಪಪ್ಪಾಯ, ಅಪ್ರಧಾನ ಹಣ್ಣಿನ ಬೆಳೆಗಳಾದ ಬೆಣ್ಣೆಹಣ್ಣು ಹಾಗೂ ಹಲಸು, ಕೋಕೋ, ಇತರೆ ಸಾಂಬರು ಬೆಳೆ ಮತ್ತು ಹೈಬ್ರಿಡ್ ತರಕಾರಿ ಬೆಳೆಗಳ ವಿಸ್ತರಣೆ ಕಾರ್ಯಕ್ರಮ, ವೈಯಕ್ತಿಕ ನೀರು ಸಂಗ್ರಹಣಾ ಘಟಕಗಳ ನಿರ್ಮಾಣ, ಸಂರಕ್ಷಿತ ಬೇಸಾಯ ಕಾರ್ಯಕ್ರಮದಡಿ ಪ್ಲಾಸ್ಟಿಕ್ ಹೊದಿಕೆ, ಸಮಗ್ರ ಕೀಟ, ರೋಗ ಮತ್ತು ಪೋಷಕಾಂಶಗಳ ನಿರ್ವಹಣೆ, ಸ್ಟ್ಯಾಟಿಕ್ ಮೊಬೈಲ್ ವೆಂಡಿಂಗ್ ಕಾರ್ಟ್ ಖರೀದಿಸಲು ನೆರವು ನೀಡಲಾಗುವುದು. ಹಳೇ ಮಾವು ತೋಟಗಳ ಪುನಃಶ್ಚೇತನ, ಜೇನು ಸಾಕಾಣಿಕೆ, ಮಿನಿಟ್ರಾಕ್ಟರ್ ಸಹಾಯಧನ ನೀಡಲಾಗುವುದು.

ಆಸಕ್ತ ರೈತರು ಅರ್ಜಿಯೊಂದಿಗೆ ಪಹಣಿ, ಬೆಳೆ ದೃಢೀಕರಣ, ಆಧಾರ್ ಪ್ರತಿ, ಬ್ಯಾಂಕ್ ಪಾಸ್ ಬುಕ್, ಜಾತಿ ಪ್ರಮಾಣ ಪತ್ರ(ಪ.ಜಾತಿ ಮತ್ತು ಪ.ಪಂಗಡದ ರೈತರಿಗೆ), ಜಂಟಿ ಖಾತೆ ಇದ್ದಲ್ಲಿ ಒಪ್ಪಿಗೆ ಪ್ರಮಾಣ ಪತ್ರ, ಖಾತೆದಾರರು ಮರಣ ಹೊಂದಿದ್ದಲ್ಲಿ ಮರಣ ಪ್ರಮಾಣಪತ್ರ ಮತ್ತು ಇತರೆ ದಾಖಲಾತಿಗಳನ್ನು ಲಗತ್ತಿಸಿ ಜೂನ್ 25ರೊಳಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು(ಜಿ.ಪಂ.), ಗುಬ್ಬಿ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ತೋಟಗಾರಿಕೆ ಅಧಿಕಾರಿ ಚೇಳೂರು-6362409080, ಕಸಬ ಮತ್ತು ಸಿ.ಎಸ್.ಪುರ-7259243329, ಹಾಗಲವಾಡಿ-8700480581, ನಿಟ್ಟೂರು, ಕಡಬ-9535376687ನ್ನು ಸಂಪರ್ಕಿಸಬೇಕು.

# ಶಾಲಾ ಮಕ್ಕಳ ಸುರಕ್ಷತೆಯಲ್ಲಿ ನಿರ್ಲಕ್ಷ್ಯ ವಹಿಸಿದರೆ ಬಿಇಒ, ಮುಖ್ಯ ಶಿಕ್ಷಕರ ಅಮಾನತು

ಕೋಲಾರ

ಜಿಲ್ಲೆಯ ಸರ್ಕಾರಿ ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳ ಸುರಕ್ಷತೆಯ ವಿಷಯದಲ್ಲಿ ಯಾವುದೇ ರೀತಿಯ ಬೇಜವಾಬ್ದಾರಿತನ ಅಥವಾ ನಿರ್ಲಕ್ಷ್ಯವನ್ನು ಸಹಿಸುವುದಿಲ್ಲ. ಶಿಥಿಲಗೊಂಡಿರುವ ಕಟ್ಟಡಗಳ ಕುರಿತು ನಿರ್ಲಕ್ಷ್ಯ ವಹಿಸಿ ಮುಂದೆ ಯಾವುದೇ ಅನಾಹುತಗಳು ಸಂಭವಿಸಿದಲ್ಲಿ, ಸಂಬಂಧಪಟ್ಟ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಶಾಲೆಯ ಮುಖ್ಯ ಶಿಕ್ಷಕರನ್ನು ನೇರವಾಗಿ ಹೊಣೆಗಾರರನ್ನಾಗಿ ಮಾಡಿ ತಕ್ಷಣವೇ ಅಮಾನತುಗೊಳಿಸಲಾಗುವುದು ಎಂದು ಕೋಲಾರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ. ಪ್ರವೀಣ್ ಪಿ. ಬಾಗೇವಾಡಿ ಅವರು ಎಚ್ಚರಿಕೆ ನೀಡಿದ್ದಾರೆ.



ಇತ್ತೀಚೆಗೆ ಕೋಲಾರದಲ್ಲಿ ಶಾಲೆಯೊಂದರ ಮೇಲ್ಛಾವಣಿ ಬಿದ್ದು ಶಿಕ್ಷಕರೊಬ್ಬರು ಗಾಯಗೊಂಡ ಹಿನ್ನೆಲೆಯಲ್ಲಿ, ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಇಂದು ಅವರ ಅಧ್ಯಕ್ಷತೆಯಲ್ಲಿ ಜಿಲ್ಲೆಯ ಎಲ್ಲಾ ಬಿಇಒಗಳು ಹಾಗೂ ಸಿಡಿಪಿಒಗಳ ತುರ್ತು ಪರಿಶೀಲನಾ ಸಭೆ ನಡೆಯಿತು.

ಜಿಲ್ಲೆಯಾದ್ಯಂತ ಶಿಥಿಲಾವಸ್ಥೆ ತಲುಪಿರುವ ಮತ್ತು ದುರಸ್ತಿ ಕಾಣಬೇಕಾಗಿರುವ ಶಾಲಾ ಕೊಠಡಿಗಳು ಹಾಗೂ ಅಂಗನವಾಡಿ ಕೇಂದ್ರಗಳ ನಿಖರವಾದ ವರದಿಯನ್ನು ಮುಂಬರುವ ಮೂರು ದಿನಗಳ ಒಳಗೆ ಡಿಡಿಪಿಐ ಮುಖಾಂತರ ಕಡ್ಡಾಯವಾಗಿ ಸಲ್ಲಿಸಬೇಕು ಎಂದು ಸಿಇಒ ಗಡುವು ವಿಧಿಸಿದ್ದಾರೆ. ಅಪಾಯದ ಮುನ್ಸೂಚನೆ ಇರುವ ಕೊಠಡಿಗಳಿಂದ ಮಕ್ಕಳನ್ನು ತಕ್ಷಣವೇ ಬೇರೆ ಸುರಕ್ಷಿತ ಕಟ್ಟಡಗಳಿಗೆ ಸ್ಥಳಾಂತರಿಸಲು ಸೂಚಿಸಲಾಗಿದೆ. ತಾಲೂಕುವಾರು ಪರಿಶೀಲನೆಯಲ್ಲಿ ಬಂಗಾರಪೇಟೆಯ 63 ಕಟ್ಟಡಗಳು, ಕೆ.ಜಿ.ಎಫ್‌ನ 24 ಕೊಠಡಿಗಳು ಸೇರಿದಂತೆ ಕೋಲಾರ, ಮಾಲೂರು, ಶ್ರೀನಿವಾಸಪುರ ಹಾಗೂ ಮುಳಬಾಗಿಲು ತಾಲೂಕುಗಳ ಬಿಇಒಗಳು ತಮ್ಮ ವ್ಯಾಪ್ತಿಯ ಮೈನರ್ ಮತ್ತು ಮೇಜರ್ ರಿಪೇರಿ ಇರುವ ಕಟ್ಟಡಗಳ ಪಟ್ಟಿಯನ್ನು ಸಭೆಗೆ ಒದಗಿಸಿದರು.

ಕಟ್ಟಡಗಳ ದುರಸ್ತಿ ಕಾರ್ಯಕ್ಕಾಗಿ ಲಭ್ಯವಿರುವ ಲಿಂಕ್ ಡಾಕ್ಯುಮೆಂಟ್ ಅನುದಾನದ ವಿವರಗಳನ್ನು ಸಿಇಒ ಪರಿಶೀಲಿಸಿದರು. ಸಾಮಾನ್ಯ ಕಟ್ಟಡಗಳ ದುರಸ್ತಿಗೆ 143.49 ಲಕ್ಷ ರೂ., ಎಸ್.ಸಿ ಬಿಡುಗಡೆ ಅಡಿ 70.21 ಲಕ್ಷ ರೂ. ಹಾಗೂ ಎಸ್.ಟಿ ಬಿಡುಗಡೆ ಅಡಿ 28.08 ಲಕ್ಷ ರೂ. ಅನುದಾನ ಲಭ್ಯವಿದ್ದು, ಇವುಗಳನ್ನು ಬಳಸಿಕೊಂಡು ಪಿಆರ್‌ಇಡಿ ಅಧಿಕಾರಿಗಳು ತಕ್ಷಣವೇ ದುರಸ್ತಿ ಕಾರ್ಯಗಳನ್ನು ಆರಂಭಿಸಬೇಕೆಂದು ಆದೇಶಿಸಲಾಯಿತು.

ಅಲ್ಲದೆ ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ ಕಟ್ಟಡಗಳನ್ನು ಸಹ ಗುರುತಿಸಿ ಇದನ್ನು ರಪೇರಿ ಅಥವಾ ಹೊಸ ಕಟ್ಟಡಗಳನ್ನು ಕಟ್ಟಿಸಲು ಗ್ರಾಮಪಂಚಾಯಿತಿ ಸಹಕಾರ ಪಡೆಯಬೇಕೆಂದು ಮಹಿಳಾ ಮತ್ತು ಮಕ್ಕಳ ಇಲಾಖೆ ಸಿಡಿಪಿಒಗಳಿಗೆ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಸೂಚಿಸಿದರು.

ಜೊತೆಗೆ, ಪ್ರತಿ ಶಾಲೆಯಲ್ಲೂ ಜಲ ಜೀವನ್ ಮಿಷನ್ (ಎಎಒ) ಅಡಿಯಲ್ಲಿ ಕಡ್ಡಾಯವಾಗಿ ಶುದ್ಧ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಬೇಕು ಮತ್ತು ಬಾಲಕ-ಬಾಲಕಿಯರಿಗೆ ಪ್ರತ್ಯೇಕ ಸ್ವಚ್ಛ ಶೌಚಾಲಯಗಳ ವ್ಯವಸ್ಥೆ ಇರಬೇಕು ಎಂದು ತಾಕೀತು ಮಾಡಿದರು. ಶಾಲಾ ಆವರಣಗಳಲ್ಲಿ ಔಷಧೀಯ ಸಸ್ಯಗಳನ್ನೊಳಗೊಂಡ 'ಧನ್ವಂತರಿ ವನ' ಅಭಿವೃದ್ಧಿಪಡಿಸಲು ಆದ್ಯತೆ ನೀಡುವಂತೆ ತಿಳಿಸಲಾಯಿತು.

ಜಿಲ್ಲೆಯ ಕೆಲವು ಭಾಗಗಳಲ್ಲಿ, ವಿಶೇಷವಾಗಿ ಕೋಲಾರ ತಾಲೂಕಿನಲ್ಲಿ ಕಳೆದ ವರ್ಷಕ್ಕೆ ಹೋಲಿಸಿದರೆ 1ನೇ ತರಗತಿಯ ದಾಖಲಾತಿ ಪ್ರಮಾಣದಲ್ಲಿ ಸುಮಾರು 30% ರಷ್ಟು ಇಳಿಕೆಯಾಗಿರುವ ಬಗ್ಗೆ ಸಿಇಒ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಸರ್ಕಾರಿ ಶಾಲೆಗಳಲ್ಲಿ ಪ್ರಸ್ತುತ ಜಾರಿಗೆ ತರಲಾಗಿರುವ ದ್ವಿಭಾಷಾ ಬೋಧನೆಯ ಸೌಲಭ್ಯದ ಕುರಿತು ಕರಪತ್ರಗಳ ಮೂಲಕ ಸಾರ್ವಜನಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸಬೇಕು. ಶಿಕ್ಷಕರು ಮನೆ-ಮನೆಗೆ ಭೇಟಿ ನೀಡಿ ಪೋಷಕರನ್ನು ಮನವೊಲಿಸುವ ಮೂಲಕ ದಾಖಲಾತಿ ಪ್ರಮಾಣವನ್ನು ಹೆಚ್ಚಿಸಲು ಜನಾಂದೋಲನ ರೂಪದಲ್ಲಿ ಕೆಲಸ ಮಾಡಬೇಕು ಎಂದು ಆದೇಶಿಸಿದರು.

ಜಿಲ್ಲೆಯಲ್ಲಿ ಕೈಗಾರಿಕಾ ವಲಯಗಳು ಹೆಚ್ಚಾಗಿರುವುದರಿಂದ, ಮುಂಬರುವ ದಿನಗಳಲ್ಲಿ ಮೂರು ಗ್ರಾಮ ಪಂಚಾಯತಿಗಳಿಗೆ ಒಂದರಂತೆ 'ಸಿಎಸ್‌ಆರ್ ಮಾದರಿ ಶಾಲೆ'ಗಳನ್ನು ಅಭಿವೃದ್ಧಿಪಡಿಸಲು ಯೋಜನೆ ರೂಪಿಸಲಾಗುತ್ತಿದೆ. ದೊಡ್ಡ ದೊಡ್ಡ ಕಂಪನಿಗಳ ಸಹಯೋಗದೊಂದಿಗೆ ಶಾಲೆಗಳಿಗೆ ಅಗತ್ಯವಿರುವ ಅತ್ಯಾಧುನಿಕ ಸೌಲಭ್ಯಗಳನ್ನು ಒದಗಿಸಲು ಬಿಇಒಗಳು ತಮ್ಮ ವ್ಯಾಪ್ತಿಯ ಅಗತ್ಯತೆಗಳ ಪಟ್ಟಿಯನ್ನು ಸಿದ್ಧಪಡಿಸಿಕೊಳ್ಳುವಂತೆ ಸೂಚಿಸಲಾಯಿತು.

ಅಂತಿಮವಾಗಿ, ವರದಿಯಾಗಿರುವ ಎಲ್ಲಾ ನ್ಯೂನತೆಗಳನ್ನು ಶೀಘ್ರವಾಗಿ ಪರಿಹರಿಸಿ ಮುಂಬರುವ ಒಂದು ವಾರದ ಒಳಗೆ ಅನುಪಾಲನಾ ವರದಿ ಸಲ್ಲಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾಪಂಚಾಯತ್ ಉಪಕಾರ್ಯದರ್ಶಿ ಟಿ. ಕೆ. ರಮೇಶ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಅಲ್ಮಾಸ್, ಎಲ್ಲಾ ಬಿ ಈ ಓ ಗಳು, ಎಲ್ಲಾ ಮಕ್ಕಳ ಅಭಿವೃದ್ಧಿ ಯೋಜನಾ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮತಾಂತರಿಗಳ 'ಶುದ್ಧೀಕರಣ'ಕ್ಕೆ 350 ವರ್ಷ

ಬೆಂಗಳೂರು

ಛತ್ರಪತಿ ಶಿವಾಜಿ ಮಹಾರಾಜರು ಸೇನಾಪತಿ ನೇತಾಜಿ ಪಾಲ್ಕರ್ ಅವರನ್ನು ಪುನಃ ಹಿಂದೂ ಧರ್ಮಕ್ಕೆ ಸ್ವಾಗತಿಸಿದ ಐತಿಹಾಸಿಕ ಘಟನೆಯ 350ನೇ ವರ್ಷಾಚರಣೆಯ ಅಂಗವಾಗಿ ಜೂನ್ 19 ಅನ್ನು ದೇಶಾದ್ಯಂತ 'ರಾಷ್ಟ್ರೀಯ ಘರ್ ವಾಪ್ಸಿ ದಿನ'ವಾಗಿ ಆಚರಿಸಬೇಕು ಎಂದು ಹಿಂದೂ ಜನಜಾಗೃತಿ ಸಮಿತಿ ಕರೆ ನೀಡಿದೆ.



ಸಮಿತಿಯ ಪ್ರಕಟಣೆಯ ಪ್ರಕಾರ, ಹಿಂದವೀ ಸ್ವರಾಜ್ಯದ ಸಂಸ್ಥಾಪಕರಾದ ಛತ್ರಪತಿ ಶಿವಾಜಿ ಮಹಾರಾಜರು 19 ಜೂನ್ 1676ರಂದು ನೇತಾಜಿ ಪಾಲ್ಕರ್ ಅವರ 'ಶುದ್ಧೀಕರಣ' ನೆರವೇರಿಸಿ ಅವರನ್ನು ಮತ್ತೆ ಹಿಂದೂ ಧರ್ಮಕ್ಕೆ ಸ್ವೀಕರಿಸಿದ್ದರು. ಈ ಘಟನೆಯು ಧರ್ಮರಕ್ಷಣೆ ಮತ್ತು ಸಮಾಜದ ಒಗ್ಗಟ್ಟಿನ ದೃಷ್ಟಿಯಿಂದ ಮಹತ್ವದ್ದಾಗಿದೆ ಎಂದು ಸಮಿತಿ ತಿಳಿಸಿದೆ.

ಪ್ರಕಟಣೆಯಲ್ಲಿ ಉಲ್ಲೇಖಿಸಿರುವಂತೆ, ಸ್ವರಾಜ್ಯದ ಮೊದಲ ಸೇನಾಪತಿಯಾಗಿದ್ದ ನೇತಾಜಿ ಪಾಲ್ಕರ್ ಅವರನ್ನು ಮೊಘಲರು ಸೆರೆಹಿಡಿದು ಬಲವಂತವಾಗಿ ಇಸ್ಲಾಂ ಧರ್ಮಕ್ಕೆ ಮತಾಂತರಗೊಳಿಸಿದ್ದರು. ನಂತರ ಅವರು ಮೊಘಲರ ಹಿಡಿತದಿಂದ ತಪ್ಪಿಸಿಕೊಂಡು ರಾಯಗಢಕ್ಕೆ ಮರಳಿದಾಗ, ಛತ್ರಪತಿ ಶಿವಾಜಿ ಮಹಾರಾಜರು ಧರ್ಮಶಾಸ್ತ್ರದ ವಿಧಿವಿಧಾನಗಳ ಮೂಲಕ ಅವರನ್ನು ಪುನಃ ಹಿಂದೂ ಧರ್ಮಕ್ಕೆ ಸೇರಿಸಿಕೊಂಡರು. ಜೇಧೆ ಶಕಾವಳಿಯ ಪ್ರಕಾರ ಶಕೆ 1598ರ ಆಷಾಢ ಮಾಸದ ನಾಲ್ಕನೇ ದಿನವಾದ 19 ಜೂನ್ 1676ರಂದು ಈ ಘಟನೆ ನಡೆದಿತ್ತು ಎಂದು ಸಮಿತಿ ಹೇಳಿದೆ.

ಈ ಕುರಿತು ಮಾತನಾಡಿರುವ ಹಿಂದೂ ಜನಜಾಗೃತಿ ಸಮಿತಿಯ ರಾಷ್ಟ್ರೀಯ ವಕ್ತಾರ ಶ್ರೀ ರಮೇಶ್ ಶಿಂದೆ, ಇತಿಹಾಸದ ಈ ಘಟನೆಯು ಇಂದಿನ ಸಮಾಜಕ್ಕೂ ಮಾರ್ಗದರ್ಶಕವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ವಿವಿಧ ಕಾರಣಗಳಿಂದ ಧರ್ಮಾಂತರಗೊಂಡವರು ಅಥವಾ ಸಮಾಜದಿಂದ ದೂರವಾದವರು ಮರಳಿ ಬರಲು ಬಯಸಿದರೆ ಅವರಿಗೆ ಗೌರವಯುತ ಸ್ಥಾನ ಕಲ್ಪಿಸುವ ಮನೋಭಾವ ಸಮಾಜದಲ್ಲಿ ಬೆಳೆಯಬೇಕು ಎಂದು ಅವರು ಹೇಳಿದ್ದಾರೆ.

ಜೂನ್ 19ರಂದು ದೇಶದ ವಿವಿಧ ಭಾಗಗಳಲ್ಲಿ ಈ ಐತಿಹಾಸಿಕ ಘಟನೆಯನ್ನು ಸ್ಮರಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸಮಿತಿಯು ಎಲ್ಲಾ ಹಿಂದೂ ಸಂಘಟನೆಗಳು, ಧಾರ್ಮಿಕ ಮುಖಂಡರು ಮತ್ತು ಸಮಾಜದ ಮುಖಂಡರಿಗೆ ಕರೆ ನೀಡಿದೆ.

## 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ

ಕೋಲಾರ

ಆಯುಷ್ ಮಂತ್ರಾಲಯ, ನವ ದೆಹಲಿ, ಆಯುಷ್ ನಿರ್ದೇಶನಾಲಯ, ಬೆಂಗಳೂರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಆಯುಷ್ ಇಲಾಖೆ, ಕೋಲಾರ ಇವರುಗಳ ವತಿಯಿಂದ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಎಂಬ ಘೋಷವಾಕ್ಯದೊಂದಿಗೆ ಜೂನ್ 21 ರಂದು ಬೆಳಿಗ್ಗೆ 6.30 ಗಂಟೆಗೆ ಕೋಲಾರ ನಗರದಲ್ಲಿರುವ ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಆಚರಿಸಲಾಗುತ್ತಿದೆ. ಈ ಕಾರ್ಯಕ್ರಮದಲ್ಲಿ ನುರಿತ ಯೋಗಪಟುಗಳು ಮತ್ತು ವಿದ್ಯಾರ್ಥಿಗಳು ವಿವಿಧ ಯೋಗಾಸನಗಳನ್ನು ಮಾಡುತ್ತಿದ್ದು, ಸಾರ್ವಜನಿಕರು ಕೂಡ ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಯೋಗಾಸನಗಳ ಸದುಪಯೋಗವನ್ನು ಪಡೆದುಕೊಳ್ಳಬಹುದೆಂದು ಜಿಲ್ಲಾ ಆಯುಷ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಸ್ ಸೇವೆ ಮುಂದುವರಿಸಲು ಸಾರ್ವಜನಿಕರ ಆಗ್ರಹ

ದೊಡ್ಡಬಳ್ಳಾಪುರ

ದೊಡ್ಡಬಳ್ಳಾಪುರದಿಂದ ತಮಿಳುನಾಡಿನ ತಿರುವಣ್ಣಾಮಲೈಗೆ ಸಂಚರಿಸುತ್ತಿರುವ ಕೆಎಸ್ ಆರ್‌ಟಿಸಿ ಬಸ್ ಸೇವೆಯನ್ನು ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸದೆ ಮುಂದುವರಿಸಬೇಕು ಎಂದು ಸಾರ್ವಜನಿಕರು ಹಾಗೂ ಕನ್ನಡ ಜಾಗೃತಿ ವೇದಿಕೆಯ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ಈ ಕುರಿತು ಮಾತನಾಡಿದ ಕನ್ನಡ ಜಾಗೃತಿ ವೇದಿಕೆಯ ಜಿಲ್ಲಾ ಕಾರ್ಯದರ್ಶಿ ಸುಧಾಕರ್ ಎಚ್.ಎಸ್., ಪ್ರತಿದಿನ ಬೆಳಿಗ್ಗೆ 8.15ಕ್ಕೆ ದೊಡ್ಡಬಳ್ಳಾಪುರದಿಂದ ಹೊರಡುವ ಹಾಗೂ ರಾತ್ರಿ ಮರಳುವ ಈ ಬಸ್ ಸೇವೆ ಸುತ್ತಮುತ್ತಲಿನ ಗ್ರಾಮಗಳ ವಿದ್ಯಾರ್ಥಿಗಳು, ನೌಕರರು ಮತ್ತು ಸಾರ್ವಜನಿಕರಿಗೆ ಅತ್ಯಂತ ಉಪಯುಕ್ತವಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು ಮತ್ತು ಉದ್ಯೋಗಿಗಳು ಬೆಂಗಳೂರಿನ ಶಿಕ್ಷಣ ಸಂಸ್ಥೆಗಳು ಹಾಗೂ ಕೆಲಸದ ಸ್ಥಳಗಳಿಗೆ ಸಮಯಕ್ಕೆ ಸರಿಯಾಗಿ ತಲುಪಲು ಈ ಬಸ್ ಸೇವೆ ನೆರವಾಗುತ್ತಿದೆ. ಅಲ್ಲದೆ ತಮಿಳುನಾಡಿನ ತಿರುಕೋಯಿಲೂರು ಜಿಲ್ಲೆಯ ತಿರುವಣ್ಣಾಮಲೈಯಲ್ಲಿರುವ ಪ್ರಸಿದ್ಧ ಶ್ರೀ ಅರುಣಾಚಲೇಶ್ವರ ಸ್ವಾಮಿ ದೇವಸ್ಥಾನಕ್ಕೆ ತೆರಳುವ ಭಕ್ತರಿಗೂ ಈ ಬಸ್ ಪ್ರಮುಖ ಸಾರಿಗೆ ವ್ಯವಸ್ಥೆಯಾಗಿದೆ ಎಂದು ತಿಳಿಸಿದರು.

ಪ್ರತಿ ದಿನ ಸಾವಿರಾರು ಯಾತ್ರಾರ್ಥಿಗಳು ತಿರುವಣ್ಣಾಮಲೈಗೆ ಭೇಟಿ ನೀಡುತ್ತಿದ್ದು, ವಿಶೇಷವಾಗಿ ಹುಣ್ಣಿಮೆ ಹಾಗೂ ವಾರಾಂತ್ಯದ ದಿನಗಳಲ್ಲಿ ದೊಡ್ಡಬಳ್ಳಾಪುರ ಭಾಗದಿಂದ ನೂರಾರು ಭಕ್ತರು ಈ ಬಸ್ ಸೇವೆಯನ್ನು ಅವಲಂಬಿಸಿದ್ದಾರೆ. ಹೀಗಾಗಿ ಈ ಮಾರ್ಗದ ಬಸ್ ಸೇವೆ ಸಾರ್ವಜನಿಕರ ಅಗತ್ಯಕ್ಕೆ ಅನುಗುಣವಾಗಿ ಮುಂದುವರಿಯಬೇಕು ಎಂದು ಆಗ್ರಹಿಸಿದರು.

ಕನ್ನಡ ಜಾಗೃತಿ ವೇದಿಕೆಯ ಜಿಲ್ಲಾಧ್ಯಕ್ಷ ನಾಗರಾಜ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಈ ಬಸ್ ಸೇವೆಯನ್ನು ಸ್ಥಗಿತಗೊಳಿಸುವ ಸಾಧ್ಯತೆ ಇದೆ ಎಂಬ ಮಾಹಿತಿ ಕೇಳಿಬರುತ್ತಿದೆ.

# ಪಿಎಂ ವಿಕಸಿತ ಭಾರತ ರೋಜಗಾರ್ ಯೋಜನೆ ಅಡಿ 2,400 ಕೋಟಿ ರೂ. ಪ್ರೋತ್ಸಾಹಧನ

ಈ ರಾಷ್ಟ್ರವ್ಯಾಪಿ ಕಾರ್ಯಕ್ರಮದ ಅಂಗವಾಗಿ, ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ವ್ಯಾಪ್ತಿಗೆ ಒಳಪಡುವ ಇಪಿಎಫ್‌ಒ ಕೆ.ಆರ್. ಪುರಂ ಪ್ರಾದೇಶಿಕ ಕಚೇರಿಯು, ಕೋಲಾರ ಜಿಲ್ಲಾ ಕಚೇರಿಯ ಮೂಲಕ ಜೂನ್ 19 ರಂದು ಸಂಜೆ 4 ಗಂಟೆಗೆ ಕೋಲಾರದ ಡಿ.ಸಿ. ಕಚೇರಿ ಸಭಾಂಗಣದಲ್ಲಿ ವಿಶೇಷ ಜಾಗೃತಿ ಮತ್ತು ಸೌಲಭ್ಯ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ದೆಹಲಿಯಲ್ಲಿ ನಡೆಯಲಿರುವ ಪ್ರಧಾನಮಂತ್ರಿಯವರ ಮುಖ್ಯ ಕಾರ್ಯಕ್ರಮದ ನೇರ ಪ್ರಸಾರವನ್ನು ಈ ಸ್ಥಳೀಯ ಕಾರ್ಯಕ್ರಮದಲ್ಲಿ ಚಿತ್ತರಿಸಲಾಗುವುದು.

ಕೋಲಾರ

ದೇಶದಲ್ಲಿ ಉದ್ಯೋಗ ಸೃಷ್ಟಿಗೆ ವೇಗ ನೀಡುವ ಮತ್ತು ಔಪಚಾರಿಕ ಆರ್ಥಿಕತೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ದೊಡ್ಡ ಹೆಜ್ಜೆ ಇಟ್ಟಿದೆ. ಪ್ರಧಾನ ಮಂತ್ರಿ ವಿಕಸಿತ ಭಾರತ ರೋಜಗಾರ್ ಯೋಜನೆ (ಪಿಎಂ-ವಿ ಬಿ ಆರ್ ವೈ) ಅಡಿಯಲ್ಲಿ ಸುಮಾರು ರೂ.2,400 ಕೋಟಿ ಮೌಲ್ಯದ ಪ್ರೋತ್ಸಾಹಧನವನ್ನು ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಜೂನ್ 19, 2026 ರಂದು ವಿತರಿಸಲಿದ್ದಾರೆ.

ನವದೆಹಲಿಯ ವಿಜ್ಞಾನ ಭವನದಲ್ಲಿ ಸಂಜೆ 5 ಗಂಟೆಗೆ ನಡೆಯಲಿರುವ ವಿಶೇಷ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿಯವರು ಈ ಪ್ರೋತ್ಸಾಹಧನವನ್ನು ವಿತರಿಸಲಿದ್ದಾರೆ.

### ಕೋಲಾರದಲ್ಲಿ ಜಾಗೃತಿ ಮತ್ತು ಸೌಲಭ್ಯ ವಿತರಣಾ ಕಾರ್ಯಕ್ರಮ

ಈ ರಾಷ್ಟ್ರವ್ಯಾಪಿ ಕಾರ್ಯಕ್ರಮದ ಅಂಗವಾಗಿ, ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ವ್ಯಾಪ್ತಿಗೆ ಒಳಪಡುವ ಇಪಿಎಫ್‌ಒ ಕೆ.ಆರ್. ಪುರಂ ಪ್ರಾದೇಶಿಕ ಕಚೇರಿಯು, ಕೋಲಾರ ಜಿಲ್ಲಾ ಕಚೇರಿಯ ಮೂಲಕ ಜೂನ್ 19 ರಂದು ಸಂಜೆ 4 ಗಂಟೆಗೆ ಕೋಲಾರದ ಡಿ.ಸಿ. ಕಚೇರಿ ಸಭಾಂಗಣದಲ್ಲಿ ವಿಶೇಷ ಜಾಗೃತಿ ಮತ್ತು ಸೌಲಭ್ಯ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.



ದೆಹಲಿಯಲ್ಲಿ ನಡೆಯಲಿರುವ ಪ್ರಧಾನಮಂತ್ರಿಯವರ ಮುಖ್ಯ ಕಾರ್ಯಕ್ರಮದ ನೇರ ಪ್ರಸಾರವನ್ನು ಈ ಸ್ಥಳೀಯ ಕಾರ್ಯಕ್ರಮದಲ್ಲಿ ಬಿತ್ತರಿಸಲಾಗುವುದು. ಈ ಕಾರ್ಯಕ್ರಮಕ್ಕೆ ಸಂಸದರಾದ ಶ್ರೀ ಮಲ್ಲೇಶ್ ಬಾಬು ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಈ ಯೋಜನೆಯಡಿ ಮೊದಲ ಬಾರಿಗೆ ಉದ್ಯೋಗ ಮಾರುಕಟ್ಟೆಗೆ ಪ್ರವೇಶಿಸುವ ಉದ್ಯೋಗಿಗಳಿಗೆ ರೂ.15,000 ವರೆಗೆ ಪ್ರೋತ್ಸಾಹಧನ ಸಿಗಲಿದೆ.

ನಿರಂತರ ಉದ್ಯೋಗ ಸೃಷ್ಟಿಯನ್ನು ಉತ್ತೇಜಿಸಲು, ಅರ್ಹ ಉದ್ಯೋಗದಾತರಿಗೆ ಅವರು ಸೃಷ್ಟಿಸುವ ಪ್ರತಿ ಹೆಚ್ಚುವರಿ ಉದ್ಯೋಗಿಗೆ ತಿಂಗಳಿಗೆ ರೂ.3,000 ರವರೆಗೆ ಪ್ರೋತ್ಸಾಹಧನ ನೀಡಲಾಗುತ್ತದೆ. ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುವ ಉತ್ಪಾದನಾ ವಲಯದ ಉದ್ಯೋಗದಾತರು 4 ವರ್ಷಗಳ ಅವಧಿಗೆ ಈ ಪ್ರೋತ್ಸಾಹಧನ ಪಡೆಯಬಹುದು. ಇತರ ವಲಯಗಳ ಉದ್ಯೋಗದಾತರಿಗೆ 2 ವರ್ಷಗಳವರೆಗೆ ಈ ಸೌಲಭ್ಯ ಲಭ್ಯವಿರಲಿದೆ.

ಪಿಎಂ-ವಿ ಬಿ ಆರ್ ವೈ ಯೋಜನೆಯು ಈಗಾಗಲೇ ದೇಶಾದ್ಯಂತ ಸುಮಾರು 15 ಲಕ್ಷ ಫಲಾನುಭವಿಗಳಿಗೆ ಉದ್ಯೋಗಾವಕಾಶ ಒದಗಿಸಲು ನೆರವಾಗಿದೆ.

1 ಆಗಸ್ಟ್ 2025 ರಂದು ಜಾರಿಗೆ ಬಂದ ಈ ಬೃಹತ್ ಯೋಜನೆಗಾಗಿ ಕೇಂದ್ರ ಸರ್ಕಾರ ಒಟ್ಟು ರೂ.99,446 ಕೋಟಿ ವೆಚ್ಚವನ್ನು ನಿಗದಿಪಡಿಸಿದೆ.

ಎರಡು ವರ್ಷಗಳ ಅವಧಿಯಲ್ಲಿ ದೇಶದಲ್ಲಿ 3.5 ಕೋಟಿಗೂ ಹೆಚ್ಚು ಉದ್ಯೋಗಗಳ ಸೃಷ್ಟಿಗೆ ಪ್ರೋತ್ಸಾಹ ನೀಡುವ ಮಹತ್ವಾಕಾಂಕ್ಷೆಯ ಗುರಿಯನ್ನು ಇದು ಹೊಂದಿದೆ. ಇವುಗಳಲ್ಲಿ ಅಂದಾಜು 1.92 ಕೋಟಿ ಫಲಾನುಭವಿಗಳು ಮೊದಲ ಬಾರಿಗೆ ಉದ್ಯೋಗ ಕ್ಷೇತ್ರಕ್ಕೆ ಪ್ರವೇಶಿಸುವ ಯುವಕರಾಗಿರಲಿದ್ದಾರೆ ಎಂದು ನಿರೀಕ್ಷಿಸಲಾಗಿದೆ.

ಕೆ.ಆರ್. ಪುರಂ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತರಾದ (ಖಕಈಅ ಖ) ಶ್ರೀ ಮಾರ್ತಾಂಡ್ ಸಿಂಗ್ ಚಂದ್ರಾವಲ್ ಅವರು ಮಾತನಾಡಿ, "ಈ ಪಿಎಂ-ವಿ ಬಿ ಆರ್ ವೈ ಯೋಜನೆಯು 01/08/2025 ರಿಂದ ಜಾರಿಗೆ ಬಂದಿದ್ದು, 31/08/2029 ರವರೆಗೆ ಚಾಲ್ತಿಯಲ್ಲಿರಲಿದೆ" ಎಂದು ತಿಳಿಸಿದ್ದಾರೆ.

ಅರ್ಹ ಉದ್ಯೋಗದಾತರು ಮತ್ತು ಹೊಸದಾಗಿ ಉದ್ಯೋಗಕ್ಕೆ ಸೇರಿದವರು ಮುಂದೆ ಬಂದು ಈ ಯೋಜನೆಯ ಪ್ರಯೋಜನಗಳನ್ನು ಪಡೆದುಕೊಳ್ಳಬೇಕು ಹಾಗೂ ಕೋಲಾರದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಕೈಗಾರಿಕಾ ಸಂಸ್ಥೆಗಳ ಪ್ರತಿನಿಧಿಗಳು ಮತ್ತು ಉದ್ಯೋಗಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕಾಗಿ ಅವರು ಕೋರಿದ್ದಾರೆ.

# ನ್ಯಾನೋ ಗೊಬ್ಬರ ಬಳಕೆ ರೈತರಿಗೆ ವರದಾನ

ಬಂಗಾರಪೇಟೆ

ಕೃಷಿ ಕ್ಷೇತ್ರದಲ್ಲಿ ನ್ಯಾನೋ ಗೊಬ್ಬರ ಬಳಕೆಯು ರೈತರ ಗಮನ ಸೆಳೆಯುತ್ತಿದ್ದು, ಕಡಿಮೆ ವೆಚ್ಚದಲ್ಲಿ ಉತ್ತಮ ಇಳುವರಿ ಪಡೆಯಲು ನೆರವಾಗುವ ಪರಿಣಾಮಕಾರಿ ತಂತ್ರಜ್ಞಾನವಾಗಿ ಗುರುತಿಸಿಕೊಂಡಿದೆ. ಉತ್ಪಾದನೆ ಹೆಚ್ಚಿಸುವುದರ ಜೊತೆಗೆ ಮಣ್ಣಿನ ಫಲವತ್ತತೆಯನ್ನು ಕಾಪಾಡುವಲ್ಲಿ ನ್ಯಾನೋ ಗೊಬ್ಬರ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಕೃಷಿ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.




ಇತ್ತೀಚಿನ ವರ್ಷಗಳಲ್ಲಿ ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದ ಮಣ್ಣಿನ ಗುಣಮಟ್ಟ ಕುಸಿತ, ನೀರಿನ ಮಾಲಿನ್ಯ ಹಾಗೂ ಕೃಷಿ ವೆಚ್ಚ ಏರಿಕೆ ಮುಂತಾದ ಸಮಸ್ಯೆಗಳು ಹೆಚ್ಚಾಗಿವೆ. ಈ ಹಿನ್ನೆಲೆಯಲ್ಲಿ ನ್ಯಾನೋ ಗೊಬ್ಬರವು ರೈತರಿಗೆ ಪರ್ಯಾಯ ಆಯ್ಕೆಯಾಗಿ ಹೊರಹೊಮ್ಮಿದೆ.

ಅತಿ ಸೂಕ್ಷ್ಮ ಕಣಗಳ ರೂಪದಲ್ಲಿ ತಯಾರಾಗುವ ನ್ಯಾನೋ ಗೊಬ್ಬರವನ್ನು ಸಸ್ಯಗಳು ಸುಲಭವಾಗಿ ಹೀರಿಕೊಳ್ಳುವುದರಿಂದ ಗೊಬ್ಬರದ ಪರಿಣಾಮಕಾರಿತ್ವ ಹೆಚ್ಚುತ್ತದೆ. ಸಾಮಾನ್ಯ ಗೊಬ್ಬರಗಳ ಬಳಕೆಯಲ್ಲಿ ಬಹುಪಾಲು ಪೋಷಕಾಂಶಗಳು ಮಣ್ಣಿನಲ್ಲಿ ಉಳಿಯುವುದು ಅಥವಾ ನೀರಿನೊಂದಿಗೆ ಹರಿದು ಹೋಗುವುದು ಸಾಮಾನ್ಯ. ಆದರೆ ನ್ಯಾನೋ ಗೊಬ್ಬರದ ಬಳಕೆಯಿಂದ ಈ ನಷ್ಟ ಕಡಿಮೆಯಾಗುತ್ತಿದ್ದು, ಕಡಿಮೆ ಪ್ರಮಾಣದಲ್ಲೇ ಉತ್ತಮ ಫಲಿತಾಂಶ ದೊರೆಯುತ್ತಿದೆ ಎಂದು ತಿಳಿದುಬಂದಿದೆ.

ನ್ಯಾನೋ ಗೊಬ್ಬರ ಬಳಕೆಯಿಂದ ಮಣ್ಣಿನ ಮೇಲಿನ ರಾಸಾಯನಿಕ ಒತ್ತಡ ಕಡಿಮೆಯಾಗುವುದರಿಂದ ಭೂಮಿಯ ಸ್ವಾಭಾವಿಕ ಫಲವತ್ತತೆ ಉಳಿಯಲು ನೆರವಾಗುತ್ತದೆ. ಮಣ್ಣಿನಲ್ಲಿರುವ ಸೂಕ್ಷ್ಮಜೀವಿಗಳ ಚಟುವಟಿಕೆಗೆ ಹಾನಿಯಾಗದ ಕಾರಣ ಭೂಮಿಯ ಆರೋಗ್ಯ ಕಾಪಾಡಿಕೊಳ್ಳಲು ಸಹಕಾರಿಯಾಗಿದೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಪರಿಸರ ಸಂರಕ್ಷಣೆಯ ದೃಷ್ಟಿಯಿಂದಲೂ ನ್ಯಾನೋ ಗೊಬ್ಬರ ಮಹತ್ವ ಪಡೆದುಕೊಂಡಿದೆ. ಭೂಗತ ಜಲ ಹಾಗೂ ಜಲಮೂಲಗಳ ಮಾಲಿನ್ಯ ತಗ್ಗಿಸುವುದರ ಜೊತೆಗೆ ಹಸಿರುಮನೆ ಅನಿಲಗಳ ಹೊರಸೂಸುವಿಕೆಯನ್ನು ನಿಯಂತ್ರಿಸಲು ಸಹಕಾರಿಯಾಗುತ್ತದೆ. ಇದರ ಪರಿಣಾಮವಾಗಿ ಸುಸ್ಥಿರ ಕೃಷಿಗೆ ಉತ್ತೇಜನ ಸಿಗುತ್ತಿದೆ.

ಬೆಳೆಗಳಿಗೆ ಅಗತ್ಯವಾದ ಪೋಷಕಾಂಶಗಳು ಸರಿಯಾದ ಸಮಯದಲ್ಲಿ ದೊರೆಯುವುದರಿಂದ ಬೆಳವಣಿಗೆ ಉತ್ತಮವಾಗಿ, ಗುಣಮಟ್ಟದ ಉತ್ಪಾದನೆ ಸಾಧ್ಯವಾಗುತ್ತಿದೆ. ಇದರಿಂದ ರೈತರ ಆದಾಯ ಹೆಚ್ಚಳಕ್ಕೂ ಅವಕಾಶ ಸೃಷ್ಟಿಯಾಗಿದೆ.

ಈ ಕುರಿತು ಮಾತನಾಡಿದ ಬಂಗಾರಪೇಟೆಯ ಸಹಾಯಕ ಕೃಷಿ ಅಧಿಕಾರಿ ನಾರಾಯಣರೆಡ್ಡಿ, "ನ್ಯಾನೋ ಗೊಬ್ಬರವು ಕೃಷಿ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಯನ್ನು ತರುತ್ತಿದೆ. ಇದು ಗೊಬ್ಬರ ಬಳಕೆಯ ದಕ್ಷತೆಯನ್ನು ಹೆಚ್ಚಿಸುವುದರ ಜೊತೆಗೆ ಮಣ್ಣಿನ ಆರೋಗ್ಯವನ್ನು ಕಾಪಾಡಲು ಸಹಕಾರಿಯಾಗಿದೆ. ರೈತರು ಕೃಷಿ ಇಲಾಖೆಯ ಮಾರ್ಗದರ್ಶನದಂತೆ ನ್ಯಾನೋ ಗೊಬ್ಬರ ಬಳಸಿದರೆ ಉತ್ತಮ ಇಳುವರಿ ಹಾಗೂ ಹೆಚ್ಚಿನ ಲಾಭ ಪಡೆಯಬಹುದು" ಎಂದು ಹೇಳಿದರು.

ರಸಗೊಬ್ಬರ ವ್ಯಾಪಾರಿ ಪ್ರಶಾಂತ್ ಮಾತನಾಡಿ, "ಇತ್ತೀಚಿನ ದಿನಗಳಲ್ಲಿ ರೈತರಲ್ಲಿ ನ್ಯಾನೋ ಗೊಬ್ಬರದ ಬಗ್ಗೆ ಆಸಕ್ತಿ ಹೆಚ್ಚಾಗಿದೆ. ಕಡಿಮೆ ಪ್ರಮಾಣದಲ್ಲೇ ಉತ್ತಮ ಫಲಿತಾಂಶ ದೊರೆಯುತ್ತಿರುವುದರಿಂದ ರೈತರು ಇದನ್ನು ಹೆಚ್ಚಾಗಿ ಖರೀದಿಸುತ್ತಿದ್ದಾರೆ. ಸರಿಯಾದ ರೀತಿಯಲ್ಲಿ ಬಳಸಿದರೆ ಬೆಳೆಗಳ ಬೆಳವಣಿಗೆ ಮತ್ತು ಉತ್ಪಾದನೆ ಎರಡೂ ಹೆಚ್ಚಾಗುತ್ತವೆ" ಎಂದು ತಿಳಿಸಿದರು.

ಸರ್ಕಾರ ಹಾಗೂ ಕೃಷಿ ಇಲಾಖೆಗಳು ನ್ಯಾನೋ ಗೊಬ್ಬರ ಬಳಕೆಗೆ ಉತ್ತೇಜನ ನೀಡುತ್ತಿದ್ದು, ರೈತರಿಗೆ ತರಬೇತಿ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿವೆ. ವೈಜ್ಞಾನಿಕ ಸಲಹೆಗಳನ್ನು ಅನುಸರಿಸಿ ನ್ಯಾನೋ ಗೊಬ್ಬರ ಬಳಸುವ ಮೂಲಕ ರೈತರು ಹೆಚ್ಚಿನ ಲಾಭ ಪಡೆಯಬಹುದೆಂಬ ಅಭಿಪ್ರಾಯ ವ್ಯಕ್ತವಾಗಿದೆ.

# ನೇರ ಸಂದರ್ಶನ

ಕೋಲಾರ

ಕೋಲಾರ ಜಿಲ್ಲೆಯಲ್ಲಿ ಖಾಲಿಯಿರುವ 93 ಸ್ವಯಂ ಸೇವಾ ಗೃಹರಕ್ಷಕ/ಗೃಹರಕ್ಷಕಿಯರ ಹುದ್ದೆಗಳನ್ನು ಆಯ್ಕೆ ಮಾಡುವ ಸಲುವಾಗಿ ನೋಂದಣಿ ಕೈಗೊಳ್ಳಲಾಗಿದ್ದು, ಈ ಪ್ರಕ್ರಿಯೆಯ 88 ಅರ್ಜಿಗಳನ್ನು ಸಲ್ಲಿಸಿರುವ ಎಲ್ಲಾ ಅಭ್ಯರ್ಥಿಗಳಿಗೆ ಈ ಕಛೇರಿಯಿಂದ ಸಂದರ್ಶನ ಪತ್ರಗಳನ್ನು ರವಾನಿಸಲಾಗಿದೆ. ಅರ್ಜಿಗಳನ್ನು ಕಡಿಮೆ ಸಂಖ್ಯೆಯಲ್ಲಿ ಸ್ವೀಕೃತಗೊಂಡಿರುವುದರಿಂದ ಸಂದರ್ಶನದ ದಿನದಂದು ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಮೂಲ ದಾಖಲೆಗಳಾದ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಹಾಗೂ ಆಧಾರ್ ಕಾರ್ಡ್‌ನ್ನು ಜೂನ್ 22 ರಂದು ಬೆಳಿಗ್ಗೆ 8.00 ಗಂಟೆಗೆ ಪೊಲೀಸ್ ಕವಾಯತು ಮೈದಾನದಲ್ಲಿ ಅರ್ಜಿಯನ್ನು ಪಡೆಯಬಹುದು. ಅರ್ಜಿಯಲ್ಲಿ ಪೂರ್ಣ ವಿವರಗಳನ್ನು ಭರ್ತಿ ಮಾಡಿ ಎಸ್.ಎಸ್.ಎಲ್.ಸಿ, ಅಂಕಪಟ್ಟಿ, ಟಿ.ಸಿ, ಆಧಾರ್, ವೋಟರ್ ಐಡಿ, ಪಾನ್ ಕಾರ್ಡ್, ಬ್ಯಾಂಕ್ ಪಾಸ್‌ಪುಸ್ತಕ, ರೇಷನ್ ಕಾರ್ಡ್ ಜೆರಾಕ್ಸ್, 02 ಭಾವಚಿತ್ರಗಳನ್ನು ಲಗತ್ತಿಸಿ ಸಂದರ್ಶನದಲ್ಲಿ ನೀಡಬೇಕು.

ಯಾವುದೇ ಕಾರಣಕ್ಕೂ ಯಾವುದೇ ಮಧ್ಯವರ್ತಿಗಳನ್ನು ಸಂಪರ್ಕಿಸಬಾರದು. ಗೃಹರಕ್ಷಕರಾಗಿ ಸೇರಲು ಹಣಕಾಸಿನ ಬಗ್ಗೆ ಯಾರೇ ಕೇಳಿದರೂ ಹಾಗೂ ನೀಡಿದರೂ ಕಾನೂನು ರೀತ್ಯಾ ಶಿಕ್ಷೆಗೆ ಒಳಗಾಗುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಗೃಹರಕ್ಷಕದಳ ಸಹಾಯಕ ಬೋಧಕ ಶ್ರೀನಿವಾಸ ಹೆಚ್.ಸಿ ರವರ ಮೊ.ಸಂ.6361381858ಯನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಗೃಹರಕ್ಷಕದಳ ಸಮಾದೇಷ್ಟರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯಲ್ಲಿ ರಸಗೊಬ್ಬರಗಳ ಪೂರೈಕೆ ಹಾಗೂ ಸಮರ್ಪಕ ವಿತರಣೆಗೆ ಸಭೆ

ಕೋಲಾರ

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಗೆ ಅವಶ್ಯವಿರುವ ಎಲ್ಲಾ ರಸಗೊಬ್ಬರಗಳ ಪೂರೈಕೆ ಮತ್ತು ಸಮರ್ಪಕವಾಗಿ ವಿತರಿಸುವ ಕುರಿತು ಜಿಲ್ಲೆಯ ಎಲ್ಲಾ ರಸಗೊಬ್ಬರ ಮಾರಾಟಗಾರರು ಮತ್ತು ರಸಗೊಬ್ಬರ ಸರಬರಾಜು ಸಂಸ್ಥೆಗಳೊಂದಿಗೆ ಸಭೆಯನ್ನು ನಡೆಸಲಾಯಿತು.

ಈಗಾಗಲೇ ಮುಂಗಾರು ಹಂಗಾಮು ಪ್ರಾರಂಭವಾಗಿದ್ದು, ಶೇಂಗಾ, ತೊಗರಿ ಮತ್ತು ರಾಗಿ ಬೆಳೆಗಳ ಬಿತ್ತನೆ ಕಾರ್ಯ ಪ್ರಾರಂಭವಾಗಿರುತ್ತದೆ. ರಸಗೊಬ್ಬರ ಸರಬರಾಜು ಸಂಸ್ಥೆಗಳು ಜಿಲ್ಲೆಗೆ ಬೇಡಿಕೆ ಇರುವ ರಸಗೊಬ್ಬರಗಳಾದ ಯೂರಿಯ, ಡಿ.ಎ.ಪಿ ಮತ್ತು ಕಾಂಪ್ಲೆಕ್ಸ್ ರಸಗೊಬ್ಬರಗಳನ್ನು ಸಕಾಲದಲ್ಲಿ ಸರಬರಾಜು ಮಾಡುವಂತೆ ಹಾಗೂ ರಸಗೊಬ್ಬರ ಮಾರಾಟಗಾರರು ಜಿಲ್ಲೆಗೆ ಸರಬರಾಜಾಗುವ ರಸಗೊಬ್ಬರಗಳನ್ನು ಸಮರ್ಪಕವಾಗಿ ರೈತರಿಗೆ ವಿತರಿಸುವಂತೆ ಸೂಚಿಸಿದರು. ರಸಗೊಬ್ಬರ ಖರೀದಿಸುವ ರೈತರಿಗೆ ಕಡ್ಡಾಯವಾಗಿ ಖರೀದಿ ಬಿಲ್ಲುಗಳನ್ನು ನೀಡುವಂತೆ ಮತ್ತು ನಿಗಧಿಪಡಿಸಿದ ದರಗಳಿಗಿಂತ ಹೆಚ್ಚಿನ ದರಗಳಿಗೆ ಮಾರಾಟ ಮಾಡದಂತೆ ಸೂಚಿಸಲಾಯಿತು ಹಾಗೂ ರಸಗೊಬ್ಬರಗಳನ್ನು ಕಔಖ ಮಿಷನ್ ಮತ್ತು ಕೆ-ಕಿಸಾನ್ ತಂತ್ರಾಂಶದ ಮೂಲಕ ರೈತರ ಆಧಾರ್ ಸಂಖ್ಯೆಯನ್ನು ನಮೂದಿಸಿ ಮಾರಾಟ ಮಾಡುವಂತೆ ಮತ್ತು ರಸಗೊಬ್ಬರ ಮಾರಾಟಕ್ಕೆ ಸಂಬಂಧಿಸಿದಂತೆ ಖರೀದಿ ಇನ್‌ವಾಯ್ಸ್, ದಾಸ್ತಾನು ವಹಿ ಮತ್ತು ಮಾರಾಟದ ಬಿಲ್ಲುಗಳನ್ನು ಕಡ್ಡಾಯವಾಗಿ ಮಾರಾಟ ಮಳಿಗೆಯಲ್ಲಿ ನಿರ್ವಹಿಸುವಂತೆ ಸೂಚಿಸಲಾಯಿತು. ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೃಷಿ ಅಧಿಕಾರಿಗಳನ್ನು ರಸಗೊಬ್ಬರಗಳು ಹಾಗೂ ಕೀಟನಾಶಕಗಳನ್ನು ಸಮರ್ಪಕವಾಗಿ ವಿತರಿಸುವ ಕುರಿತು ಪರಿಶೀಲಿಸಲು ಪ್ರತಿ ಹೋಬಳಿಗೆ ನೋಡಲ್ ಅಧಿಕಾರಿಗಳನ್ನಾಗಿ ನಿಯೋಜಿಸಿದ್ದು, ರಸಗೊಬ್ಬರ ನಿಯಂತ್ರಣ ಆದೇಶ ಮತ್ತು ಕೀಟನಾಶಕ ಕಾಯ್ದೆಗಳನ್ನು ಉಲ್ಲಂಘಿಸಿ ಮಾರಾಟ ಮಾಡುವ ಮಾರಾಟಗಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಹಾಜರಿದ್ದ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸೂಚಿಸಲಾಯಿತು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್‌ವ್ಯತ್ಯಯ

ತುಮಕೂರು

ಬೆಸ್ಕಾಂ ಶಿರಾ ಗ್ರಾಮೀಣ ಉಪವಿಭಾಗ ವ್ಯಾಪ್ತಿಯಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಂಡಿರುವುದರಿಂದ ಜೂನ್ 21ರಂದು ಬೆಳಗಿಗೆ 10 ರಿಂದ ಸಂಜೆ 5 ಗಂಟೆಯವರೆಗೆ ಕಳ್ಳಂಬೆಳ್ಳ, ಭೂಪಸಂದ್ರ, ಚಿಕ್ಕನಹಳ್ಳಿ, ಹಾಲೇನಹಳ್ಳಿ, ದೊಡ್ಡಅಗ್ರಹಾರ, ಗೋಪಾಲದೇವರಹಳ್ಳಿ, ಚಿನ್ನೇನಹಳ್ಳಿ, ತಾಳಗುಂದ, ಸೀಬಿ, ತರೂರು, ಸೀಬಿ ಅಗ್ರಹಾರ, ಯಲದಬಾಗಿ ಪಂಚಾಯ್ತಿಯ ಎಲ್ಲಾ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

# ಫೋನ್-ಇನ್ ಕಾರ್ಯಕ್ರಮ

ಬೆಂಗಳೂರು

ಭಾರತ ಚುನಾವಣಾ ಆಯೋಗದ ನಿರ್ದೇಶನುಸಾರ ಅಪರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಆಯುಕ್ತರು, ಬೆಂಗಳೂರು ದಕ್ಷಿಣ ನಗರ ಪಾಲಿಕೆ ರವರ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಗೊಳಿಸುವುದು ಅವಶ್ಯವಿರುತ್ತದೆ.

ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ನಾಗರಿಕರ ಕುಂದುಕೊರತೆಗಳನ್ನು ನೇರವಾಗಿ ಆಲಿಸಿ ಪರಿಹರಿಸುವ ಉದ್ದೇಶದಿಂದ, ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಆಯುಕ್ತರು ಹಾಗೂ ಅಪರ ಜಿಲ್ಲಾ ಚುನಾವಣಾಧಿಕಾರಿ ಆದ ಶ್ರೀ ಕೆ.ಎನ್. ರಮೇಶ್ ರವರು ಇದೇ ಶನಿವಾರ "ಫೋನ್-ಇನ್ ಕಾರ್ಯಕ್ರಮ" ನಡೆಸಲಿದ್ದಾರೆ. ಫೋನ್-ಇನ್ ಕಾರ್ಯಕ್ರಮವು ಜೂನ್ 20, 2026 ಶನಿವಾರದಂದು ಮಧ್ಯಾಹ್ನ 4.00ರಿಂದ 5.00ರವರೆಗೆ ನಡೆಯಲಿದೆ. ಸಂಪರ್ಕ ಸಂಖ್ಯೆ 9480685704.

# ವಿದ್ಯುತ್ ಖಾಸಗೀಕರಣಕ್ಕೆ ವಿರೋಧ



ತುಮಕೂರು

ಸಾರ್ವಜನಿಕ ಉದ್ಯಮವಾದ ಕರ್ನಾಟಕ ವಿದ್ಯುತ್ ವಿತರಣಾ ಸಂಸ್ಥೆಯಾದ ಕೆಪಿಟಿಸಿಎಲ್ ಮತ್ತು ಬೆಸ್ಕಾಂ, ಎಸ್ಕಾಂಗೆ ಸಂಬಂಧಿಸಿದ ವಿದ್ಯುತ್ ವಿತರಣಾ ಪರವಾನಗಿಯನ್ನು ಟಾಟಾ ಪವರ್ ಕಂಪೆನಿಗೆ ನೀಡಬಾರದು ಎಂದು ಆಗ್ರಹಿಸಿ ನಗರದ ಕೋತಿತೋಪಿನಲ್ಲಿರುವ ಬೆಸ್ಕಾಂ ಕಚೇರಿ ಮುಂಭಾಗ ಅಧಿಕಾರಿಗಳು ಮತ್ತು ನೌಕರರು ಪ್ರತಿಭಟನೆ ನಡೆಸಿದರು.

ಬೆಸ್ಕಾಂ ಕಚೇರಿ ಮುಂಭಾಗ ಅಧೀಕ್ಷಕ ಇಂಜಿನಿಯರ್ ನರಸಿಂಹಮೂರ್ತಿ ಹಾಗೂ ಕೆಪಿಟಿಸಿಎಲ್ ಅಧೀಕ್ಷಕ ಇಂಜಿನಿಯರ್ ಶಿವಕುಮಾರ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಜಿಲ್ಲೆಯ ವಿವಿಧ ತಾಲ್ಲೂಕುಗಳ ಬೆಸ್ಕಾಂ ಅಧಿಕಾರಿಗಳು ಮತ್ತು ಸಿಬ್ಬಂದಿ ಜಮಾಯಿಸಿ ಕೆಪಿಟಿಸಿಎಲ್ ಮತ್ತು ಬೆಸ್ಕಾಂ ಸೇರಿದಂತೆ ಎಲ್ಲಾ ಎಸ್ಕಾಂಗಳನ್ನು ಉಳಿಸಿ-ನಮ್ಮ ಹಕ್ಕನ್ನು ರಕ್ಷಿಸಿ ಎಂಬ ಕರಪತ್ರಗಳನ್ನು ಹಿಡಿದು ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಅಧೀಕ್ಷಕ ಇಂಜಿನಿಯರ್ ನರಸಿಂಹಮೂರ್ತಿ ಮಾತನಾಡಿ, ಸರ್ಕಾರಿ ಸ್ವಾಮ್ಯದ ಬೆಸ್ಕಾಂ ಇಲಾಖೆ ಗ್ರಾಹಕರಿಗೆ ಉತ್ತಮ ಸೇವೆ ನೀಡುತ್ತಾ ಬಂದಿದೆ. ಆದರೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣ ಮಾಡಲು ಹೊರಟಿರುವುದು ಆತಂಕ ಮೂಡಿಸಿದೆ. ಖಾಸಗಿ ಕಂಪೆನಿಯಾದ ಟಾಟಾ ಪವರ್ ಕಂಪೆನಿಗೆ ವಿದ್ಯುತ್ ವಿತರಣಾ ಪರವಾನಗಿ ನೀಡಿದರೆ ಗ್ರಾಹಕರು, ರೈತರಿಗೆ ತುಂಬಾ ತೊಂದರೆಯಾಗಲಿದೆ. ಜತೆಗೆ ನೌಕರರ ಸೇವಾ ಭದ್ರತೆಗೂ ಧಕ್ಕೆ ಉಂಟಾಗಲಿದೆ ಎಂದರು.

ವಿದ್ಯುತ್ ಕ್ಷೇತ್ರ ಖಾಸಗೀಕರಣದಿಂದ ಹಲವಾರು ಸಮಸ್ಯೆಗಳು ಉಂಟಾಗುವ ಸಾಧ್ಯತೆ ಇದೆ. ಇದು ರೈತ ವಿರೋಧಿ ಹಾಗೂ ಜನ ವಿರೋಧಿಯಾಗಿದ್ದು, ಸರ್ಕಾರ ಕೂಡಲೇ ಈ ಚಿಂತನೆಯನ್ನು ಕೈ ಬಿಡಬೇಕು ಎಂದು ಅವರು ಆಗ್ರಹಿಸಿದರು.

ರಾಜ್ಯದಲ್ಲಿ ವಿದ್ಯುತ್ ವಿತರಣಾ ಪರವಾನಗಿಯನ್ನು ಟಾಟಾ ಕಂಪೆನಿಗೆ ನೀಡುತ್ತಿರುವುದನ್ನು ಬೆಸ್ಕಾಂ ನೌಕರರ ಒಕ್ಕೂಟ, ರೈತರು, ಗ್ರಾಹಕರು ಹಾಗೂ ಗುತ್ತಿಗೆದಾರರು ಎಲ್ಲರೂ ಸೇರಿ ವಿರೋಧ ಮಾಡಬೇಕು. ಖಾಸಗೀಕರಣದಿಂದ ಉಂಟಾಗುವ ಸಮಸ್ಯೆಗಳ ಬಗ್ಗೆ ಗ್ರಾಹಕರಿಗೆ ಮನದಟ್ಟು ಮಾಡಬೇಕು ಎಂದರು.

ಸರ್ಕಾರದಿಂದ ಸಬ್ಸಿಡಿ ಬಂದರಷ್ಟೇ ಖಾಸಗಿ ಕಂಪೆನಿಗಳು ರೈತರಿಗೆ ವಿದ್ಯುತ್ ಸಂಪರ್ಕ ನೀಡುತ್ತವೆ. ಇಲ್ಲದಿದ್ದರೆ ವಿದ್ಯುತ್ ಸಂಪರ್ಕವನ್ನೇ ಕಡಿತ ಮಾಡುತ್ತವೆ. ಇದರಿಂದ ರೈತರು ಹಾಗೂ ಗ್ರಾಹಕರಿಗೆ ತುಂಬಾ ತೊಂದರೆಯಾಗುತ್ತದೆ. ಜತೆಗೆ ನಮ್ಮ ಅಧಿಕಾರಿಗಳು, ನೌಕರರ ಹುದ್ದೆಗಳಿಗೆ ಕತ್ತರಿ ಬೀಳುತ್ತದೆ. ಆದ್ದರಿಂದ ಗ್ರಾಹಕರು, ರೈತರು, ಸಂಘ ಸಂಸ್ಥೆಗಳು ಎಲ್ಲರೂ ಜತೆಗೂಡಿ ಹೋರಾಟ ನಡೆಸುವ ಮೂಲಕ ವಿದ್ಯುತ್ ಕ್ಷೇತ್ರ ಖಾಸಗೀಕರಣಕ್ಕೆ ಅವಕಾಶ ನೀಡಬಾರದು ಎಂದರು.

ಕೆಪಿಟಿಎಲ್ ಅಧೀಕ್ಷಕ ಇಂಜಿನಿಯರ್ ಶಿವಕುಮಾರ್ ಮಾತನಾಡಿ, ವಿದ್ಯುತ್ ಕಂಪನಿ ಖಾಸಗೀಕರಣಗೊಂಡರೆ ಉದ್ಯೋಗ ಭದ್ರತೆ ಇಲ್ಲದಂತಾಗಿ ನೌಕರರು ಹಾಗೂ ಅವರ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಲಿವೆ. ಖಾಸಗಿ ಕಂಪೆನಿಗಳು ಹೊರಗುತ್ತಿಗೆ ಆಧಾರದಲ್ಲಿ ಕೆಲಸ ನೀಡಿ, ಕೆಲಸಕ್ಕೆ ತಕ್ಕಷ್ಟು ಮಾತ್ರ ಸಂಬಳ ನೀಡುವುದರಿಂದ ನೌಕರರು ಹಲವಾರು ಸಮಸ್ಯೆಗಳಿಗೆ ಗುರಿಯಾಗುತ್ತಾರೆ ಎಂದರು.

ಪ್ರತಿಭಟನೆ ಬಳಿಕ ಬೆಸ್ಕಾಂ ಮತ್ತು ಕೆಪಿಟಿಸಿಎಲ್ ನೌಕರರು ಎಂದಿನಂತೆ ಕರ್ತವ್ಯಕ್ಕೆ ಹಾಜರಾದರು.

ಪ್ರತಿಭಟನೆಯಲ್ಲಿ ಬೆಸ್ಕಾಂನ ಅಧಿಕಾರಿಗಳಾದ ಪ್ರಕಾಶ್.ಎಂ.ವಿ., ಪ್ರಶಾಂತ್ ಕೂಡ್ಲಿಗಿ, ಜಗದೀಶ್.ಜಿ., ಸೋಮಶೇಖರಗೌಡ, ಪುರುಷೋತ್ತಮ್, ಹೆಚ್.ತಿಮ್ಮಪ್ಪ, ಎಂ.ಹೆಚ್. ವೆಂಕಟರಮಣಯ್ಯ ಸೇರಿದಂತೆ ಕೆಪಿಟಿಸಿಎಲ್ ಮತ್ತು ಬೆಸ್ಕಾಂ ಅಧಿಕಾರಿಗಳು, ಲೈನ್‌ಮನ್‌ಗಳು ಸೇರಿದಂತೆ ನೂರಾರು ಮಂದಿ ನೌಕರರು ಪಾಲ್ಗೊಂಡಿದ್ದರು.

# ಪೊಲೀಸ್ ಠಾಣೆಯಲ್ಲಿ ಅಂತರ್ಜಾತಿಯ ವಿವಾಹ

ವಿಜಯಪುರ



ಅಂತರ್ಜಾತಿಯ ಕಾರಣದಿಂದಾಗಿ, ಪರಸ್ಪರ ಪ್ರೀತಿಸುತ್ತಿದ್ದ ಯುವಕ, ಯುವತಿಯ ಮದುವೆಗೆ ಪೋಷಕರು ಒಪ್ಪಿಗೆ ನೀಡದ ಕಾರಣ, ಕರ್ನಾಟಕ ರಾಜ್ಯ ಡಾ.ಬಿ.ಆರ್.ಅಂಬೇಡ್ಕರ್ ರಕ್ಷಣಾ ಸಮಿತಿಯ ಮುಂದಾಳತ್ವದಲ್ಲಿ, ಪೊಲೀಸ್ ಠಾಣೆಯಲ್ಲಿ ಸರಳವಾಗಿ ವಿವಾಹ ಮಾಡಿಸಿದ್ದಾರೆ.

ಕಳೆದ 10 ವರ್ಷಗಳಿಂದ ಪರಸ್ಪರ ಪ್ರೀತಿಸುತ್ತಿದ್ದ ವಿಜಯಪುರ ಪಟ್ಟಣದ ಶಾಂತಿನಗರ ನಿವಾಸಿ ಸಂಜಯ್ ಕುಮಾರ್ ಹಾಗೂ ರಾಜೀವ್ ನಗರದ ಪರಿಶಿಷ್ಟ ಜಾತಿಯ ಸುಮಿತ್ರ ಎಂಬವವರ ಮದುವೆಗೆ ಜಾತಿಯ ಕಾರಣವನ್ನು ಹೇಳಿ ಪೋಷಕರು ನಿರಾಕರಿಸಿದ್ದರು. ಈ ಹಿನ್ನೆಲೆಯಲ್ಲಿ, ಇಬ್ಬರೂ ಕರ್ನಾಟಕ ರಾಜ್ಯ ಡಾ.ಬಿ.ಆರ್. ಅಂಬೇಡ್ಕರ್ ರಕ್ಷಣಾ ಸಮಿತಿಯವರ ನೆರವಿನಿಂದ ಪೊಲೀಸ್ ಠಾಣೆಯ ಮೆಟ್ಟಿಲು ಹತ್ತಿದ್ದರು. ಇಬ್ಬರೂ ಪ್ರಾಪ್ತರಾಗಿರುವ ಕಾರಣ, ಪೊಲೀಸರು, ಪೋಷಕರನ್ನು ಕರೆಯಿಸಿಕೊಂಡು ಸಮಾಲೋಚನೆ ನಡೆಸಿ, ಎರಡೂ ಕಡೆಯವರನ್ನು ಒಪ್ಪಿಸಿ, ವಿಜಯಪುರ ಪೊಲೀಸ್ ಠಾಣೆಯಲ್ಲೆ ಇಬ್ಬರಿಗ ಸರಳವಾಗಿ ಮದುವೆ ಮಾಡಿಸಿದ್ದಾರೆ.

ಪೊಲೀಸ್ ಇನ್ ಸ್ಪೆಕ್ಟರ್ ಲಕ್ಷ್ಮೀನಾರಾಯಣ ಮಾತನಾಡಿ, ಯುವಕ ಮತ್ತು ಯುವತಿ ಪರಸ್ಪರ ಪ್ರೀತಿಸಿ, ಮದುವೆ ಆಗುವುದು ತಪ್ಪಲ್ಲ. ಆದರೆ, ಜೀವನ ಪರ್ಯಂತರ, ಒಬ್ಬರಿಗೊಬ್ಬರು ಕಷ್ಟ ಸುಖಗಳಲ್ಲಿ ಭಾಗಿಯಾಗುವ ಮೂಲಕ ಅನ್ಯೋನ್ಯವಾದ ದಾಂಪತ್ಯವನ್ನು ನಡೆಸುವಂತೆ ಮಾರ್ಗದರ್ಶನ ಮಾಡಿದರು.

ಸಬ್ ಇನ್ ಸ್ಪೆಕ್ಟರ್ ಸುನೀಲ್ ಕುಮಾರ್, ಕರ್ನಾಟಕ ರಾಜ್ಯ ಡಾ.ಬಿ.ಆರ್.ಅಂಬೇಡ್ಕರ್ ರಕ್ಷಣಾ ಸಮಿತಿಯ ರಾಜ್ಯಾಧ್ಯಕ್ಷ ಸಿ.ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿ ರಾಘವ, ವಿ.ರಾಮಚಂದ್ರಪ್ಪ, ಸೈಪುಲ್ಲಾ, ಸೇರಿದಂತೆ ಮುಖಂಡರು

# ಹಳೆಯ ವಿದ್ಯಾರ್ಥಿ ಸಂಘದಿಂದ ಪ್ರತಿಭಾ ಪುರಸ್ಕಾರ



ದೊಡ್ಡಬಳ್ಳಾಪುರ

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಪರೀಕ್ಷೆಗಳಲ್ಲಿ ಉತ್ತಮ ಯಾರ್ಂಕ್‌ಗಳನ್ನು ಗಳಿಸಿ ಕಾಲೇಜಿಗೆ ಕೀರ್ತಿ ತಂದ ಹಿನ್ನೆಲೆ, ಹಳೆಯ ವಿದ್ಯಾರ್ಥಿ ಸಂಘದ ವತಿಯಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಯೋಜಿಸಿ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸ್ನಾತಕೋತ್ತರ ಪರೀಕ್ಷೆಯಲ್ಲಿ ಎಂ.ಎ. ಇತಿಹಾಸ ವಿಭಾಗದ ವಿದ್ಯಾರ್ಥಿಗಳಾದ ಅರುಣ್ ಕುಮಾರ್ ಕೆ.ಎಂ. ತೃತೀಯ ಯಾರ್ಂಕ್, ಸೌಮ್ಯ ಬಿ. ನಾಲ್ಕನೇ ಯಾರ್ಂಕ್ ಹಾಗೂ ಲಕ್ಷ್ಮಿ ಆರ್.ಜಿ. ಐದನೇ ಯಾರ್ಂಕ್ ಪಡೆದರೆ, ಎಂ.ಎ. ರಾಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿ ನಾಗಭೂಷಣ ನಾಲ್ಕನೇ ಯಾರ್ಂಕ್ ಗಳಿಸಿ ಸಾಧನೆ ಮಾಡಿದ್ದಾರೆ.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಎಸ್.ಎಂ. ಹರೀಶ್ ಗೌಡ, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಮೂಲಸೌಕರ್ಯಗಳ ಕೊರತೆ, ಸಾರಿಗೆ ಸಮಸ್ಯೆ ಹಾಗೂ ಆರ್ಥಿಕ ಸವಾಲುಗಳನ್ನು ಮೀರಿ ಸರ್ಕಾರಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿ ಉನ್ನತ ಸಾಧನೆ ಮಾಡಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಸರ್ಕಾರಿ ಕಾಲೇಜುಗಳು ಖಾಸಗಿ ಕಾಲೇಜುಗಳಿಗಿಂತ ಯಾವುದೇ ರೀತಿಯಲ್ಲಿ ಕಡಿಮೆ ಇಲ್ಲ ಎಂಬುದನ್ನು ಈ ವಿದ್ಯಾರ್ಥಿಗಳು ತಮ್ಮ ಸಾಧನೆಯ ಮೂಲಕ ಸಾಬೀತುಪಡಿಸಿದ್ದಾರೆ. ವಿದ್ಯಾರ್ಥಿಗಳು ಮುಂದಿನ ದಿನಗಳಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿ ಸಮಾಜ ಹಾಗೂ ಸರ್ಕಾರದ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಶುಭ ಹಾರೈಸಿದರು.

ಹಳೆಯ ವಿದ್ಯಾರ್ಥಿ ಸಂಘದ ಅಧ್ಯಕ್ಷ ಪ್ರವೀಣ್ ಕುಮಾರ್ ಮಾತನಾಡಿ, ಸಂಘವು ಹಲವು ವರ್ಷಗಳಿಂದ ಕಾಲೇಜಿನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಂಡು ಬರುತ್ತಿದೆ. ವಿದ್ಯಾರ್ಥಿಗಳು ಈ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಸಮಾಜಕ್ಕೆ ಹಾಗೂ ತಾವು ವ್ಯಾಸಂಗ ಮಾಡಿದ ಕಾಲೇಜಿಗೆ ಉತ್ತಮ ಹೆಸರು ತರಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಹರೀಶ್ ಗೌಡ ಅವರು ಆರ್ಥಿಕ ಸಹಾಯಧನ ನೀಡಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲೆ ಡೊರೀನ್ ಸ್ನೇಹಲತಾ ಕೋಟ್ಯಾನ್, ಅಧ್ಯಾಪಕ ಶ್ರೀನಿವಾಸ್, ಹಳೆಯ ವಿದ್ಯಾರ್ಥಿ ಸಂಘದ ಖಜಾಂಚಿ ಮಹೇಶ್, ಸಂಘಟನಾ ಕಾರ್ಯದರ್ಶಿ ಮಂಜುನಾಥ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕಾಮಸಮುದ್ರದಲ್ಲಿ ಬಡ ಕುಟುಂಬಗಳ ಜಾಗ ಕಬಳಿಕೆ ಯತ್ನ ಆರೋಪ




ಬಂಗಾರಪೇಟೆ

ತಾಲ್ಲೂಕಿನ ಕಾಮಸಮುದ್ರ ಗ್ರಾಮದ ರೈಲ್ವೆ ಗೇಟ್ ಸಮೀಪ ದಶಕಗಳಿಂದ ವಾಸಿಸುತ್ತಿರುವ ಬಡ ಕುಟುಂಬಗಳ ಜಾಗವನ್ನು ಕಬಳಿಸಲು ನಕಲಿ ದಾಖಲೆಗಳನ್ನು ಸೃಷ್ಟಿಸಲಾಗುತ್ತಿದೆ ಎಂದು ಆರೋಪಿಸಿ ಅಂಬೇಡ್ಕರ್ ಸೇವಾ ಸಮಿತಿಯ ಸದಸ್ಯರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಅಂಬೇಡ್ಕರ್ ಸೇವಾ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಡಾ. ಕೆ.ಎಂ. ಸಂದೇಶ್ ನೇತೃತ್ವದಲ್ಲಿ ಗುರುವಾರ ನಗರದ ಅಂಬೇಡ್ಕರ್ ಪ್ರತಿಮೆಯ ಎದುರು ಪ್ರತಿಭಟನೆ ನಡೆಸಿದ ಸಮಿತಿಯ ಸದಸ್ಯರು, ಸ್ಥಳೀಯ ನಿವಾಸಿಗಳ ಹಿತರಕ್ಷಣೆಗಾಗಿ ಜಿಲ್ಲಾಡಳಿತ ತಕ್ಷಣ ಮಧ್ಯಪ್ರವೇಶಿಸಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಡಾ. ಕೆ.ಎಂ. ಸಂದೇಶ್, ಕಾಮಸಮುದ್ರ ಗ್ರಾಮದ ಸರ್ವೆ ಸಂಖ್ಯೆ 26 ಹಾಗೂ 282ಕ್ಕೆ ಹೊಂದಿಕೊಂಡಿರುವ ಜಾಗದಲ್ಲಿ ಕಳೆದ 40 ವರ್ಷಗಳಿಂದ 80ರಿಂದ 100ಕ್ಕೂ ಹೆಚ್ಚು ಬಡ ಕುಟುಂಬಗಳು ಮನೆ ನಿರ್ಮಿಸಿಕೊಂಡು ವಾಸಿಸುತ್ತಿವೆ. ಇದೇ ಪ್ರದೇಶದಲ್ಲಿ ಕಳೆದ 22 ವರ್ಷಗಳಿಂದ ಜಿ.ಎಸ್.ಎಂ. ಶಾಲೆ ಕಾರ್ಯನಿರ್ವಹಿಸುತ್ತಿದ್ದು, ನೂರಾರು ಮಕ್ಕಳ ಶಿಕ್ಷಣಕ್ಕೆ ಆಸರೆಯಾಗಿದೆ. ಆದರೆ ಕೆಲವು ಅಧಿಕಾರಿಗಳು ಈ ಜಾಗವನ್ನು ಖಾಲಿ ಪ್ರದೇಶವೆಂದು ತೋರಿಸಿ, ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಹೊಸ ಸರ್ವೆ ಸಂಖ್ಯೆ 282ರ ಅಡಿಯಲ್ಲಿ ಪೋಡಿ ಮಾಡಲು ಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ಇತ್ತೀಚೆಗೆ ನಡೆದಿರುವ ಪೋಡಿ ಪ್ರಕ್ರಿಯೆ, ಸರ್ವೆ ಸ್ಕೆಚ್ ಹಾಗೂ ಮಹಜರುಗಳ ಕುರಿತು ಸಾರ್ವಜನಿಕರಲ್ಲಿ ಅನುಮಾನಗಳು ವ್ಯಕ್ತವಾಗಿವೆ. ದಶಕಗಳಿಂದ ವಾಸಿಸುತ್ತಿರುವ ನಿವಾಸಿಗಳಿಗೆ ಸಮರ್ಪಕ ನೋಟಿಸ್ ನೀಡದೇ ಹಾಗೂ ಅವರ ಆಕ್ಷೇಪಣೆಗಳನ್ನು ಪರಿಗಣಿಸದೇ ಏಕಪಕ್ಷೀಯವಾಗಿ ಕ್ರಮ ಕೈಗೊಳ್ಳಲಾಗಿದೆ ಎಂದು ದೂರಿದರು.

ವಿವಾದಿತ ಸರ್ವೆ ಸಂಖ್ಯೆ 26 ಮತ್ತು 282ರ ಜಮೀನಿಗೆ ಸಂಬಂಧಿಸಿದಂತೆ ಉನ್ನತ ಮಟ್ಟದ ಸ್ವತಂತ್ರ ತನಿಖಾ ತಂಡದ ಮೂಲಕ ಮರುಸರ್ವೆ ನಡೆಸಬೇಕು. ಪೀಡಿತ ಕುಟುಂಬಗಳಿಗೆ ಅಧಿಕೃತ ನೋಟಿಸ್ ನೀಡಿ ಅವರ ದಾಖಲೆಗಳು ಮತ್ತು ಆಕ್ಷೇಪಣೆಗಳನ್ನು ಪರಿಶೀಲಿಸಬೇಕು. ಕಳೆದ ಆರು ತಿಂಗಳಲ್ಲಿ ಸೃಷ್ಟಿಸಲಾದ ಪೋಡಿ ದಾಖಲೆಗಳು, ಸರ್ವೆ ಸ್ಕೆಚ್ ಹಾಗೂ ಮಹಜರುಗಳನ್ನು ರದ್ದುಗೊಳಿಸಬೇಕು. ಹಲವು ವರ್ಷಗಳಿಂದ ಅಸ್ತಿತ್ವದಲ್ಲಿರುವ ಜಿ.ಎಸ್.ಎಂ. ಶಾಲೆ ಹಾಗೂ ಮನೆಗಳನ್ನು ಅಧಿಕೃತವಾಗಿ ದಾಖಲಿಸಬೇಕು. ಮರುಸರ್ವೆ ಪೂರ್ಣಗೊಳ್ಳುವವರೆಗೆ ಯಾವುದೇ ಕುಟುಂಬವನ್ನು ಬಲವಂತವಾಗಿ ತೆರವುಗೊಳಿಸಬಾರದು ಎಂದು ಆಗ್ರಹಿಸಿದರು.

ನ್ಯಾಯಕ್ಕಾಗಿ ತಹಶೀಲ್ದಾರ್ ಕಚೇರಿಗೆ ನಿರಂತರವಾಗಿ ಅಲೆದರೂ ಯಾವುದೇ ಪ್ರಯೋಜನವಾಗಿಲ್ಲ. ಕೆಲ ಅಧಿಕಾರಿಗಳು ತಮ್ಮ ಸಂಬಂಧಿಕರ ಹೆಸರಿನಲ್ಲಿ ಜಮೀನು ಖರೀದಿಸಿದ್ದು, ನಿವಾಸಿಗಳನ್ನು ವಿನಾಕಾರಣ ಪೊಲೀಸ್ ಠಾಣೆಗೆ ಕರೆದೊಯ್ದು ಕೂರಿಸಲಾಗುತ್ತಿದೆ ಎಂದು ಆರೋಪಿಸಿದ ಅವರು, ಸುಳ್ಳು ದಾಖಲೆ ಸೃಷ್ಟಿಸಿದವರ ವಿರುದ್ಧ ಕಾನೂನು ಕ್ರಮ ಜರುಗಿಸಿ ಬಂಧಿಸಬೇಕು ಎಂದು ಒತ್ತಾಯಿಸಿದರು.

ಈ ವಿವಾದವು ಕೇವಲ ಭೂಮಿಗೆ ಸಂಬಂಧಿಸಿದ ವಿಷಯವಲ್ಲ, ಸುಮಾರು 100 ಕುಟುಂಬಗಳು ಹಾಗೂ ಶಾಲಾ ಮಕ್ಕಳ ಭವಿಷ್ಯಕ್ಕೆ ಸಂಬಂಧಿಸಿದ ಸಾರ್ವಜನಿಕ ಹಿತಾಸಕ್ತಿಯ ವಿಷಯವಾಗಿದೆ. ಸೂಕ್ತ ಕ್ರಮ ಕೈಗೊಳ್ಳದಿದ್ದಲ್ಲಿ ಅಂಬೇಡ್ಕರ್ ಸೇವಾ ಸಮಿತಿ ಹೋರಾಟವನ್ನು ತೀವ್ರಗೊಳಿಸುವುದಾಗಿ ಎಚ್ಚರಿಕೆ ನೀಡಿತು. ನಂತರ ಪ್ರತಿಭಟನಾಕಾರರು ಉಪ ತಹಶೀಲ್ದಾರ್ ಪ್ರಭಾಕರನ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಕುಪೇಂದ್ರ, ಅನಿಲ್ ಕುಮಾರ್, ಡ್ಯಾನಿಯಲ್ ಬಾಬು, ವೆಂಕಟೇಶಮ್ಮ, ಪ್ರಕಾಶ್ ರೆಡ್ಡಿ, ಪ್ರಸನ್ನ ರೆಡ್ಡಿ, ಭುವನೇಶ್ವರಿ, ನಾಗೇಶ್ ರೆಡ್ಡಿ, ರಮೇಶ್ ಸೇರಿದಂತೆ 80ಕ್ಕೂ ಹೆಚ್ಚು ಕುಟುಂಬಗಳ ಸದಸ್ಯರು ಭಾಗವಹಿಸಿದ್ದರು.

# ಅಪ್ರಾಪ್ತ ವಯಸ್ಕರಿಗೆ ಮದ್ಯ ಮಾರಾಟ ತಡೆಗೆ ಕಠಿಣ ಕ್ರಮ

ಕೆಜಿಎಫ್

ಅಪ್ರಾಪ್ತ ವಯಸ್ಕರಲ್ಲಿ ಮದ್ಯಪಾನ ಮತ್ತು ಮಾದಕ ವಸ್ತುಗಳ ದುರುಪಯೋಗವನ್ನು ತಡೆಗಟ್ಟುವ ಉದ್ದೇಶದಿಂದ ವಯೋಮಿತಿ ಪರಿಶೀಲನೆಯನ್ನು ಕಡ್ಡಾಯವಾಗಿ ಜಾರಿಗೊಳಿಸುವಂತೆ ಸರ್ಕಾರ ಹೊರಡಿಸಿರುವ ಸುತ್ತೋಲೆಯ ಅನ್ವಯ, ಕೆಜಿಎಫ್ ಜಿಲ್ಲಾ ಪೊಲೀಸ್ ವ್ಯಾಪ್ತಿಯಲ್ಲಿರುವ ಎಲ್ಲಾ ಮದ್ಯ ಮಾರಾಟ ಮತ್ತು ಪೂರೈಕೆ ಸಂಸ್ಥೆಗಳಿಗೆ ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಲಾಗಿದೆ.

ಈ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಮಾಹಿತಿ ನೀಡಿ, ಪಬ್‌ಗಳು, ಬ್ರೂವರಿಗಳು, ಬಾರ್‌ಗಳು, ಕ್ಲಬ್‌ಗಳು, ರೆಸ್ಟೋರೆಂಟ್‌ಗಳು, ಲೌಂಜ್‌ಗಳು ಸೇರಿದಂತೆ ಮದ್ಯ ಮಾರಾಟ ಅಥವಾ ಪೂರೈಕೆ ಮಾಡುವ ಎಲ್ಲಾ ಸಂಸ್ಥೆಗಳು ಗ್ರಾಹಕರ ವಯಸ್ಸನ್ನು ಪರಿಶೀಲಿಸಿದ ಬಳಿಕವೇ ಪ್ರವೇಶ ಮತ್ತು ಮದ್ಯ ಸೇವೆಗೆ ಅವಕಾಶ ನೀಡಬೇಕು ಎಂದು ಸೂಚಿಸಲಾಗಿದೆ ಎಂದರು.

ನಿರ್ದೇಶನಗಳ ಪ್ರಕಾರ, ಎಲ್ಲಾ ಮದ್ಯ ಪೂರೈಕೆ ಕೇಂದ್ರಗಳಲ್ಲಿ "ಗುರುತಿನ ಚೀಟಿ ಇಲ್ಲದೆ ಪ್ರವೇಶವಿಲ್ಲ" ಎಂಬ ನಿಯಮವನ್ನು ಕಡ್ಡಾಯವಾಗಿ ಜಾರಿಗೊಳಿಸಬೇಕು. ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಪಾಸ್‌ಪೋರ್ಟ್, ಚಾಲನಾ ಪರವಾನಗಿ ಅಥವಾ ಪ್ಯಾನ್ ಕಾರ್ಡ್ ಸೇರಿದಂತೆ ಸರ್ಕಾರದಿಂದ ಮಾನ್ಯತೆ ಪಡೆದ ಗುರುತಿನ ಚೀಟಿಗಳನ್ನು ಪರಿಶೀಲಿಸಿದ ನಂತರವೇ ಗ್ರಾಹಕರಿಗೆ ಪ್ರವೇಶ ನೀಡಬೇಕು.

21 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ ಯಾವುದೇ ಕಾರಣಕ್ಕೂ ಮದ್ಯ ಮಾರಾಟ ಅಥವಾ ಪೂರೈಕೆ ಮಾಡಬಾರದು ಎಂದು ಸ್ಪಷ್ಟ ಸೂಚನೆ ನೀಡಲಾಗಿದೆ. ನಿಯಮ ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಮದ್ಯ ಮಾರಾಟ ಪರವಾನಗಿ ಅಮಾನತು ಅಥವಾ ರದ್ದುಪಡಿಸುವುದು, ದಂಡ ವಿಧಿಸುವುದು ಹಾಗೂ ಮಾಲೀಕರು, ವ್ಯವಸ್ಥಾಪಕರು ಮತ್ತು ಪರವಾನಗಿದಾರರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತಹ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಲಾಗಿದೆ.

ಸಂಸ್ಥೆಗಳ ಆವರಣದಲ್ಲಿ ನಡೆಯುವ ಯಾವುದೇ ಉಲ್ಲಂಘನೆಗೆ ಮಾಲೀಕರು, ವ್ಯವಸ್ಥಾಪಕರು ಹಾಗೂ ಕಾರ್ಯಕ್ರಮ ಆಯೋಜಕರು ವೈಯಕ್ತಿಕವಾಗಿ ಜವಾಬ್ದಾರರಾಗಿರುತ್ತಾರೆ. ಜೊತೆಗೆ ಪ್ರವೇಶ ದ್ವಾರಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳು ಕಡ್ಡಾಯವಾಗಿ ಕಾರ್ಯನಿರ್ವಹಿಸಬೇಕು ಹಾಗೂ ದೃಶ್ಯಾವಳಿಗಳನ್ನು ಕನಿಷ್ಠ ಒಂದು ತಿಂಗಳವರೆಗೆ ಸಂರಕ್ಷಿಸಿಡಬೇಕು ಎಂದು ಸೂಚಿಸಲಾಗಿದೆ.

ನಿರ್ದೇಶನಗಳ ಅನುಷ್ಠಾನದ ಬಗ್ಗೆ ಪರಿಶೀಲನೆ ನಡೆಸಿ ವರದಿ ಸಲ್ಲಿಸುವಂತೆ ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಗಳ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ತಿಳಿಸಿದ್ದಾರೆ.

ಯುವಜನರ ಆರೋಗ್ಯ, ಸುರಕ್ಷತೆ ಮತ್ತು ಉಜ್ವಲ ಭವಿಷ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಅಪ್ರಾಪ್ತ ವಯಸ್ಕರಲ್ಲಿ ಮದ್ಯಪಾನ ತಡೆಗಟ್ಟುವ ಕಾರ್ಯಕ್ಕೆ ಪೋಷಕರು, ಶಿಕ್ಷಣ ಸಂಸ್ಥೆಗಳು, ಮದ್ಯ ಮಾರಾಟ ಹಾಗೂ ಪೂರೈಕೆ ಸಂಸ್ಥೆಗಳು ಮತ್ತು ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡುವಂತೆ ಜಿಲ್ಲಾ ಪೊಲೀಸ್ ಇಲಾಖೆ ಮನವಿ

# ಸಾಂಸ್ಕೃತಿಕ ಚರಿತ್ರೆಗೆ ಜಾನಪದವೇ ಮೂಲ: ಕಟ್ಟಾ ನರಸಿಂಹಮೂರ್ತಿ

ವೈ.ಎನ್.ಹೊಸಕೋಟೆ



ಸಾಂಸ್ಕೃತಿಕ ಚರಿತ್ರೆಯನ್ನು ಕಟ್ಟಿಕೊಡುವಲ್ಲಿ ಜಾನಪದವು ಪ್ರಮುಖ ಮೂಲವಾಗಿದ್ದು, ಜನರ ಜೀವನ ಪದ್ಧತಿ, ಆಚರಣೆಗಳು ಹಾಗೂ ಸಾಮಾಜಿಕ ವ್ಯವಸ್ಥೆಯನ್ನು ದಾಖಲಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕಟ್ಟಾ ನರಸಿಂಹಮೂರ್ತಿ ಹೇಳಿದರು.

ಹೋಬಳಿಯ ವದನಕಲ್ಲು ಗ್ರಾಮದ ಶ್ರೀ ತಿಪ್ಪೇರುದ್ರಸ್ವಾಮಿ ದೇವಾಲಯದ ರಂಗಮಂದಿರದಲ್ಲಿ ಭಾನುವಾರ ನಡೆದ ನಿವೃತ್ತ ಪ್ರಾದೇಶಿಕ ಸಾರಿಗೆ ಅಧಿಕಾರಿ ಬಿ. ತಿಪ್ಪೇಸ್ವಾಮಿ ಅವರ ಚೊಚ್ಚಲ ಕೃತಿ 'ಸಿರಿವೆತ್ತ ನಿಡುಗಲ್ಲು' ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇತಿಹಾಸವೆಂದರೆ ಕೇವಲ ರಾಜರು ಮತ್ತು ಮಹಾರಾಜರ ಚರಿತ್ರೆಯಲ್ಲ. ಅದು ಸಾಮಾನ್ಯ ಜನರ ಬದುಕು, ಸಂಸ್ಕೃತಿ ಮತ್ತು ಸಾಮಾಜಿಕ ನಡೆ-ನುಡಿಗಳ ದಾಖಲೆಯಾಗಿದೆ. ತಿಪ್ಪೇಸ್ವಾಮಿ ಅವರು ಜಾನಪದ ಆಕರಗಳು ಮತ್ತು ಸ್ಥಳೀಯ ಇತಿಹಾಸದ ಆಧಾರದ ಮೇಲೆ ನಿಡುಗಲ್ಲಿನ ಸಾಂಸ್ಕೃತಿಕ ಹಾಗೂ ಸಾಮಾಜಿಕ ಚಿತ್ರಣವನ್ನು ಕಟ್ಟಿಕೊಡುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕೃತಿಯಲ್ಲಿ ನಿಡುಗಲ್ಲಿನ ರಾಜದರ್ಬಾರು, ಅಂದಿನ ಸಾಮಾಜಿಕ ಸ್ಥಿತಿಗತಿಗಳು, ಆಡಳಿತ ವ್ಯವಸ್ಥೆ ಹಾಗೂ ಸಾಂಸ್ಕೃತಿಕ ವೈಶಿಷ್ಟ್ಯಗಳನ್ನು ಸಮಗ್ರವಾಗಿ ಚಿತ್ರಿಸಲಾಗಿದೆ. ಗ್ರಾಮೋತ್ಸವದ ಸಂದರ್ಭದಲ್ಲಿ ಸಾಹಸ ಮೆರೆದು ಹುತಾತ್ಮನಾದ ವೀರ ಗಂಡಯ್ಯನ ವೃತ್ತಾಂತದ ಸುತ್ತ ಹೆಣೆಯಲ್ಪಟ್ಟಿರುವ ಈ ಕೃತಿ ಐತಿಹಾಸಿಕ ಕಾದಂಬರಿಯಷ್ಟೇ ಮಹತ್ವ ಹೊಂದಿದ್ದು, ಓದುಗರನ್ನು ಹಿಡಿದಿಡುವ ಸಾಮರ್ಥ್ಯ ಹೊಂದಿದೆ ಎಂದು ತಿಳಿಸಿದರು.

ಸಾಹಿತಿ ಡಾ. ಹೆಚ್.ಕೆ. ನರಸಿಂಹಮೂರ್ತಿ ಮಾತನಾಡಿ, ಭಾರತೀಯ ಸಂಸ್ಕೃತಿ ಜನಪದ ಸಂಪ್ರದಾಯಗಳು ಮತ್ತು ಆಚರಣೆಗಳ ಮೇಲೆ ನೆಲೆಗೊಂಡಿದೆ. ಗ್ರಾಮೀಣ ಬದುಕಿನ ಸೊಗಡು, ಸಂಪ್ರದಾಯ ಮತ್ತು ಇತಿಹಾಸವನ್ನು ಪ್ರತಿಬಿಂಬಿಸುವಲ್ಲಿ 'ಸಿರಿವೆತ್ತ ನಿಡುಗಲ್ಲು' ಕೃತಿ ಯಶಸ್ವಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಕೃತಿಕಾರ ಬಿ. ತಿಪ್ಪೇಸ್ವಾಮಿ ಮಾತನಾಡಿ, ಬಾಲ್ಯದಿಂದಲೂ ಕಂಡು ಕೇಳಿದ ನಿಡುಗಲ್ಲು ಪ್ರದೇಶದ ಆಚರಣೆಗಳು, ಸಂಪ್ರದಾಯಗಳು ಮತ್ತು ಜಾನಪದ ಕಥೆಗಳು ಕೃತಿ ರಚನೆಗೆ ಪ್ರೇರಣೆಯಾಗಿವೆ ಎಂದರು. ರಂಗಸಮುದ್ರ ಗ್ರಾಮದ ಜಾತ್ರೆ, ನಿಡಗಲ್ ಪಾಳೇಗಾರ ಮುಮ್ಮಡಿ ಹೊಟ್ಟಣ್ಣ ನಾಯಕ ಹಾಗೂ ವೀರ ಗಂಡಯ್ಯನ ಕುರಿತ ಜಾನಪದ ಇತಿಹಾಸವನ್ನು ಆಧರಿಸಿ ಈ ಕೃತಿ ರಚಿಸಲಾಗಿದೆ ಎಂದು ಹೇಳಿದರು.

ಹಿರಿಯ ಶಿಕ್ಷಕ ಹ. ರಾಮಚಂದ್ರಪ್ಪ ಕೃತಿಯನ್ನು ಲೋಕಾರ್ಪಣೆ ಮಾಡಿ ಮಾತನಾಡಿ, ತೆಲುಗು ಪ್ರಾಬಲ್ಯದ ಪ್ರದೇಶದಲ್ಲಿ ಕನ್ನಡ ಕೃತಿ ಪ್ರಕಟಿಸಿರುವುದು ಕನ್ನಡ ಸಾಹಿತ್ಯ ಮತ್ತು ಸ್ಥಳೀಯ ಇತಿಹಾಸಕ್ಕೆ ಮಹತ್ವದ ಕೊಡುಗೆಯಾಗಿದೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಜಿಲ್ಲಾಧಿಕಾರಿ ಎಸ್. ಪಾಲಯ್ಯ ಅಧ್ಯಕ್ಷತೆ ವಹಿಸಿದ್ದರು. ಮಾಜಿ ಶಾಸಕ ಕೆ.ಎಂ. ತಿಮ್ಮರಾಯಪ್ಪ, ವಾಲ್ಮೀಕಿ ಮಹಾಸಭೆಯ ಜಿಲ್ಲಾಧ್ಯಕ್ಷ ಲೋಕೇಶ್ ಪಾಳೇಗಾರ್, ಸಾಹಿತಿಗಳಾದ ಸಣ್ಣನಾಗಪ್ಪ, ಹೊ.ಮ. ನಾಗರಾಜು, ಸಾರಿಗೆ ಇಲಾಖೆ ಅಧಿಕಾರಿ ಬಿ. ನಾಗರಾಜು ಸೇರಿದಂತೆ ಹಲವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ವಿವಿಧ ಸಂಸ್ಥಾನಗಳ ರಾಜವಂಶಸ್ಥರು, ಪಾಳೇಗಾರ್ ಕುಟುಂಬಗಳ ಪ್ರತಿನಿಧಿಗಳು ಹಾಗೂ ಗಣ್ಯರನ್ನು ಸನ್ಮಾನಿಸಲಾಯಿತು. ಇದೇ ವೇಳೆ ಬುದ್ಧ ಎಜುಕೇಶನ್ ಟ್ರಸ್ಟ್ ವತಿಯಿಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಅಂಗನವಾಡಿ ಮಕ್ಕಳಿಗೆ ಸಮವಸ್ತ್ರ ವಿತರಣೆ ಮಾಡಲಾಯಿತು.

ಇದಕ್ಕೂ ಮುನ್ನ ಶ್ರೀ ತಿಪ್ಪೇರುದ್ರಸ್ವಾಮಿ ಸನ್ನಿಧಿಯಿಂದ ವೇದಿಕೆವರೆಗೆ 'ಸಿರಿವೆತ್ತ ನಿಡುಗಲ್ಲು' ಕೃತಿಯ ಮೆರವಣಿಗೆ ನಡೆಯಿತು. ನಿಡುಗಲ್ಲಿನ ಮಹರ್ಷಿ ವಾಲ್ಮೀಕಿ ಆಶ್ರಮದ ಶ್ರೀ ಸಂಜಯಕುಮಾರ ಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ಕಾರ್ಯಕ್ರಮ ನೆರವೇರಿತು. ವಿವಿಧ ಕ್ಷೇತ್ರಗಳ ಗಣ್ಯರು, ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

20/06/2026

ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬೀದಿ ದೀಪಗಳ ಎಲ್ಇಡಿ ಪರಿವರ್ತನೆ ಕಾಮಗಾರಿ ಶೇ.86ರಷ್ಟು ಪೂರ್ಣ



ಬೆಂಗಳೂರು

ಉತ್ತರ ನಗರ ಪಾಲಿಕೆಯ ಆಯುಕ್ತರಾದ ಶ್ರೀ ಪೋಮ್ಮಲ ಸುನೀಲ್ ಕುಮಾರ್ ಅವರ ನಿರ್ದೇಶನದಂತೆ, ಪಾಲಿಕೆಯ ವ್ಯಾಪ್ತಿಯಲ್ಲಿ ಇಂಧನ ಉಳಿತಾಯ ಹಾಗೂ ಸಾರ್ವಜನಿಕ ಸುರಕ್ಷತೆಯನ್ನು ಹೆಚ್ಚಿಸುವ ಉದ್ದೇಶದಿಂದ ಸಾಂಪ್ರದಾಯಿಕ ಬೀದಿದೀಪಗಳನ್ನು ಇಂಧನ ದಕ್ಷತೆಯ ಎಲ್ಇಡಿ ಬೀದಿದೀಪಗಳಾಗಿ ಪರಿವರ್ತಿಸುವ ಕಾರ್ಯವೂ ವೇಗವಾಗಿ ನಡೆಯುತ್ತಿದ್ದು, ಈಗಾಗಲೇ ಶೇ.86ರಷ್ಟು ಪೂರ್ಣಗೊಂಡಿದೆ.

ಸರ್ಕಾರದ ಅನುಮೋದನೆಯೊಂದಿಗೆ ಸಾರ್ವಜನಿಕ–ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಕೈಗೊಳ್ಳಲಾಗುತ್ತಿರುವ ಈ ಯೋಜನೆಯಡಿ ಯಲಹಂಕ, ಬ್ಯಾಟರಾಯನಪುರ, ಪುಲಿಕೇಶಿನಗರ, ಹೆಬ್ಬಾಳ, ಸರ್ವಜ್ಞನಗರ, ದಾಸರಹಳ್ಳಿಯ 5 ವಾರ್ಡ್‌ಗಳು ಹಾಗೂ ರಾಜರಾಜೇಶ್ವರಿನಗರದ 3 ವಾರ್ಡ್‌ಗಳಲ್ಲಿ ಈಗಾಗಲೇ ಇಂಧನ ದಕ್ಷತೆಯ ಎಲ್ಇಡಿ ಬೀದಿ ದೀಪಗಳನ್ನು ಶೇ.86 ರಷ್ಟು ಪೂರ್ಣಗೊಂಡಿದ್ದು, ಬಾಕಿ ಉಳಿಕೆ ಎಲ್ಇಡಿ ಅಳವಡಿಕೆ ಕಾಮಗಾರಿ ಚಾಲ್ತಿಯಲಿರುತ್ತದೆ. ಹಾಗೂ ಇದಕ್ಕೆ ಸಂಬಂಧಿಸಿದಂತೆ ಅಅಒಖ ಸ್ವಿಚ್ ನಿಯಂತ್ರಣ ಪರಿಕರಗಳನ್ನು ಅಳವಡಿಸುವ ಕಾಮಗಾರಿ ಬಾಕಿ ಇರುತ್ತದೆ.

68,907 ಎಲ್ಇಡಿ ಬೀದಿದೀಪಗಳ ಅಳವಡಿಕೆ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು ಇರುವ 1,24,325 ಬೀದಿದೀಪಗಳ ಪೈಕಿ, 59,693 ಸಂಖ್ಯೆಯ ಹಾಲಿ ಎಲ್ಇಡಿ ಹಾಗೂ 64,632 ಸಂಖ್ಯೆಯ ಸಾಂಪ್ರದಾಯಿಕ ಬೀದಿದೀಪಗಳಿದ್ದು, ಇದರಲ್ಲಿ 14,576 ಸಂಖ್ಯೆಯ ಖಾಲಿ ಕಂಬಗಳನ್ನು ಒಳಗೊಂಡಂತೆ ಒಟ್ಟು 68,907 ಸಂಖ್ಯೆಯ ಬೀದಿದೀಪಗಳನ್ನು ಅಳವಡಿಸಲಾಗಿದ್ದು, ಉಳಿದ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಲಾಗುತ್ತಿದ್ದು, ಸ್ಮಾರ್ಟ್ ಮಾನಿಟರಿಂಗ್ ವ್ಯವಸ್ಥೆಯ ಭಾಗವಾಗಿ ಅಅಒಖ ಸ್ವಿಚ್‌ಗಳ ಅಳವಡಿಕೆ ಕಾರ್ಯವೂ ಪ್ರಗತಿಯಲ್ಲಿದೆ.

ನಗರ ಪಾಲಿಕೆಯ ಆಯುಕ್ತರವರ ನಿರ್ದೇಶನದಂತೆ ಸಾರ್ವಜನಿಕರಿಂದ ಸ್ವೀಕರಿಸಲ್ಪಟ್ಟ ದೂರುಗಳು ಹಾಗೂ ಸ್ಥಳ ಪರಿಶೀಲನೆ ಆಧರಿಸಿ ಕತ್ತಲಿನಿಂದ ಕೂಡಿರುವ ಪ್ರದೇಶಗಳಲ್ಲಿ ಹೆಚ್ಚುವರಿ ಬೀದಿದೀಪ ಕಂಬಗಳು, ಭೂಗತ ಮತ್ತು ಏರಿಯಲ್ ಬಂಚ್ಡ್ (ಂಃ) ಕೇಬಲ್‌ಗಳನ್ನು ಅಳವಡಿಸಿ ಬೀದಿದೀಪ ಮೂಲಸೌಕರ್ಯವನ್ನು ಮೇಲ್ದರ್ಜೆಗೇರಿಸುವ ಯೋಜನೆಯನ್ನೂ ಕೈಗೊಳ್ಳಲಾಗಿದೆ.

ಯಲಹಂಕ ಹಾಗೂ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಗಳಲ್ಲಿ ಸುಮಾರು 1,313 ಹೊಸ ಬೀದಿದೀಪ ಕಂಬಗಳು ಹಾಗೂ 63.63 ಕಿಲೋಮೀಟರ್ ಉದ್ದದ ಕೇಬಲ್ ಅಳವಡಿಕೆಗೆ ಯೋಜನೆ ರೂಪಿಸಲಾಗಿದ್ದು, ಇದಕ್ಕಾಗಿ ರೂ.550 ಲಕ್ಷಗಳ ಅಂದಾಜು ಮೊತ್ತದ ಕಾಮಗಾರಿಯನ್ನು ಪ್ರಸ್ತಾಪಿಸಲಾಗಿದೆ.

ಒಟ್ಟಾರೆಯಾಗಿ ಯಲಹಂಕ, ಬ್ಯಾಟರಾಯನಪುರ, ಹೆಬ್ಬಾಳ, ಪುಲಿಕೇಶಿನಗರ ಹಾಗೂ ಸರ್ವಜ್ಞನಗರ ಕ್ಷೇತ್ರಗಳಲ್ಲಿ ಸುಮಾರು 1,942 ಹೊಸ ಬೀದಿದೀಪ ಕಂಬಗಳು ಹಾಗೂ 92.50 ಕಿಲೋಮೀಟರ್ ವಿದ್ಯುತ್ ಕೇಬಲ್ ಅಳವಡಿಕೆಗೆ ಅಗತ್ಯ ಅನುದಾನ ಲಭ್ಯವಿದ್ದು, ಕಾಮಗಾರಿ ಕೈಗೊಳ್ಳಲು ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಪ್ರಸ್ತಾವನೆಯು ಅನುಮೋದನೆ ಹಂತದಲ್ಲಿದೆ.

# ದೇವಾಲಯದ ಹಣ ದುರುಪಯೋಗ ಆರೋಪ...?

ಕೋಲಾರ

ಶ್ರೀನಿವಾಸಪುರ ತಾಲೂಕಿನ ಗೌನಿಪಲ್ಲಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ಕೊರುಕೋನಪಲ್ಲಿ ಗ್ರಾಮದ ಗ್ರಾಮಸ್ಥರು, ಅರ್ಚಕ ಚನ್ನಕೇಶವಚಾರ್ ಅವರು ಬೆಂಗಳೂರಿನಿಂದ ಬಂದು ಗ್ರಾಮದ ಹಾಗೂ ಚನ್ನಕೇಶವಸ್ವಾಮಿ ದೇವಾಲಯದ ವಾತಾವರಣವನ್ನು ಹಾಳು ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಗ್ರಾಮಸ್ಥರ ಹೇಳಿಕೆಯ ಪ್ರಕಾರ, ತಹಸೀಲ್ದಾರ್ ಕಚೇರಿಯಿಂದ ವಿಧಾನಸಭೆಯ ಅಧಿವೇಶನ ಹಾಗೂ ಲೋಕಾಯುಕ್ತರಿಗೆ ಸಲ್ಲಿಸಿರುವ ವರದಿಯಲ್ಲಿ ಚನ್ನಕೇಶವಸ್ವಾಮಿ ದೇವಾಲಯದಲ್ಲಿ ಜಾನಕಿ ದೇವಿಗೆ ಸಂಬಂಧಿಸಿದ ಕಲ್ಲು ಇದೆ ಹಾಗೂ ಭಕ್ತರು ಅದನ್ನು ಜಾನಕಿ ದೇವರ ಹೆಸರಿನಿಂದ ಕರೆಯುತ್ತಾರೆ ಎಂದು ಉಲ್ಲೇಖಿಸಲಾಗಿದೆ. ಅಲ್ಲದೆ, ದೇವಾಲಯದಲ್ಲಿ ಚನ್ನಕೇಶವಚಾರ್ ಪೂಜೆ ಸಲ್ಲಿಸುತ್ತಿದ್ದಾರೆ ಎಂದು ತಿಳಿಸಲಾಗಿದೆ.

ಆದರೆ ಈ ಎಲ್ಲ ಮಾಹಿತಿಯೂ ಸತ್ಯಕ್ಕೆ ದೂರವಾಗಿದ್ದು, ಸುಳ್ಳು ಮಾಹಿತಿಯನ್ನು ನೀಡಲಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ದೇವಾಲಯದಲ್ಲಿ ಜಾನಕಿ ದೇವಿಗೆ ಸಂಬಂಧಿಸಿದ ಯಾವುದೇ ಕಲ್ಲು ಇಲ್ಲ. ಜಾನಕಿ ಎಂಬ ಹೆಸರನ್ನೇ ಗ್ರಾಮದಲ್ಲಿ ಯಾರೂ ಕೇಳಿಲ್ಲ. ದೇವಾಲಯದ ಹೆಸರಿನಲ್ಲಿ ಅಕ್ರಮ ನಡೆಸಿ ಹಣ ದುರುಪಯೋಗಪಡಿಸಿಕೊಳ್ಳುವ ಉದ್ದೇಶದಿಂದ ಈ ರೀತಿಯ ಯೋಜನೆ ರೂಪಿಸಲಾಗಿದೆ ಎಂದು ಅವರು ದೂರಿದ್ದಾರೆ. ಇದಕ್ಕೆ ಗ್ರಾಮದ ಕೆಲವರು ಸಹಕಾರ ನೀಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಚನ್ನಕೇಶವಚಾರ್ ಅವರು ಚನ್ನಕೇಶವಸ್ವಾಮಿ ದೇವಾಲಯದಲ್ಲಿ ಪೂಜೆ ಸಲ್ಲಿಸುತ್ತಿಲ್ಲ. ಭಕ್ತರು ಸಹ ದೇವಾಲಯಕ್ಕೆ ಬರುತ್ತಿಲ್ಲ.

ಈಗಾಗಲೇ ಲಕ್ಷಾಂತರ ರೂಪಾಯಿ ವೆಚ್ಚ ಮಾಡಲಾಗಿದೆ ಎಂದು ಹೇಳಲಾಗುತ್ತಿದ್ದು, ಸರ್ಕಾರದಿಂದ ದೊರೆಯುವ ಅನುದಾನ ಪಡೆಯುವ ಉದ್ದೇಶದಿಂದ ಜಾನಕಿ ದೇವಾಲಯದಲ್ಲಿ ವಾರಕ್ಕೊಮ್ಮೆ ಅಥವಾ ಹದಿನೈದು ದಿನಕ್ಕೊಮ್ಮೆ ಪೂಜೆ ನಡೆಸಲಾಗುತ್ತಿದೆ ಎಂದು ಗ್ರಾಮಸ್ಥರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಇದಲ್ಲದೆ, ತಮ್ಮ ತಂದೆಯವರ ನಿಧನದ ನಂತರ ಗ್ರಾಮ ಹಾಗೂ ಚನ್ನಕೇಶವಸ್ವಾಮಿ ದೇವಾಲಯಕ್ಕೆ ಸೇರಿದ ಜಾಗದಲ್ಲಿ ಅಕ್ರಮವಾಗಿ ಮನೆ ನಿರ್ಮಿಸಲು ಪ್ರಯತ್ನಿಸಿದಾಗ ಗ್ರಾಮಸ್ಥರು ಅದನ್ನು ತಡೆದಿದ್ದಾರೆ ಎಂದು ಹೇಳಿದ್ದಾರೆ. ಆ ಜಾಗವನ್ನು ತೆರವುಗೊಳಿಸಿ ದೇವಾಲಯಕ್ಕೆ ಮೀಸಲಿಡಬೇಕು ಎಂದು ಒತ್ತಾಯಿಸಿದ್ದಾರೆ.

ತಮ್ಮ ತಂದೆಯವರ ಮೇಲಿನ ಗೌರವ ಹಾಗೂ ಅಭಿಮಾನದಿಂದ ಇಷ್ಟು ದಿನ ಮೌನವಾಗಿದ್ದೇವೆ. ಆದರೆ ಗ್ರಾಮದಲ್ಲಿ ಯಾವುದೇ ಅಹಿತಕರ ಘಟನೆ ನಡೆದರೆ ಅದಕ್ಕೆ ಚನ್ನಕೇಶವಚಾರ್ ಹಾಗೂ ರಾಮಾಚಾರ್ ಹೊಣೆಗಾರರಾಗಿರುತ್ತಾರೆ ಎಂದು ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

ವಿಧಾನಸಭೆಯ ಅಧಿವೇಶನ ಹಾಗೂ ಲೋಕಾಯುಕ್ತರಿಗೆ ತಪ್ಪು ಮಾಹಿತಿ ನೀಡಿದ ಅಧಿಕಾರಿಗಳ ವಿರುದ್ಧ ಹಾಗೂ ದೇವಾಲಯದ ವಿಚಾರದಲ್ಲಿ ಅಕ್ರಮ ಎಸಗಿರುವ ಆರೋಪ ಎದುರಿಸುತ್ತಿರುವ ಚನ್ನಕೇಶವಚಾರ್ ಮತ್ತು ರಾಮಾಚಾರ್ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಕೊರುಕೋನಪಲ್ಲಿ ಗ್ರಾಮಸ್ಥರು ಆಗ್ರಹಿಸಿದ್ದಾರೆ.

# ಕೆ.ಹೆಚ್.ಮುನಿಯಪ್ಪರಿಗೆ ಡಿಸಿಎಂ ಸ್ಥಾನ ನೀಡಲು ಒತ್ತಾಯ

ತುಮಕೂರು

ರಾಜ್ಯದಲ್ಲಿ ಹೆಚ್ಚು ಜನಸಂಖ್ಯೆ ಇರುವ ಮಾದಿಗ ಸಮುದಾಯದ ಮುಖಂಡರಾದ ಕೆ.ಹೆಚ್.ಮುನಿಯಪ್ಪ ಅವರನ್ನು ಉಪಮುಖ್ಯಮಂತ್ರಿಯಾಗಿ ನೇಮಿಸಿ,ಸಮಾಜ ಕಲ್ಯಾಣ ಇಲಾಖೆಯ ಮಂತ್ರಿಯನ್ನಾಗಿ ಮಾಡುವಂತೆ ಒಳಮೀಸಲಾತಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಮಾರಸಂದ್ರ ಮುನಿಯಪ್ಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಪಕ್ಷದ ಹೈಕಮಾಂಡನ್ನು ಒತ್ತಾಯಿಸಿದ್ದಾರೆ.




ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಅವರು,ರಾಜ್ಯದಲ್ಲಿ ಮಾದಿಗ ಸಮುದಾಯ, ಹೊಲೆಯ ಸಮುದಾಯಕ್ಕಿಂತ ಹೆಚ್ಚಿನ ಜನಸಂಖ್ಯೆಯನ್ನು ಹೊಂದಿದೆ.ಹೀಗಿದ್ದು, ಡಿ.ಕೆ.ಶಿವಕುಮಾರ ಸಚಿವ ಸಂಪುಟದಲ್ಲಿ ಹೊಲೆಯರಿಗೆ ಡಿ.ಸಿ.ಎಂ. ಮಾಡಿದ ಎರಡು ಸಚಿವ ಸ್ಥಾನ ನೀಡಿ,ಗೃಹ ಮತ್ತು ಕಂದಾಯದಂತಹ ಪ್ರಭಾವಿ ಖಾತೆಗಳನ್ನು ನೀಡಲಾಗಿದೆ.ಆದರೆ ಆರು ಬಾರಿ ಚುನಾವಣೆಯಲ್ಲಿ ಗೆಲುವು ಸಾಧಿಸಿರುವ ಹಿರಿಯರಾದ ಕೆ.ಹೆಚ್.ಮುನಿಯಪ್ಪ ಅವರನ್ನು ಮಾತ್ರ ಸಚಿವರನ್ನಾಗಿಸಿ, ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ನೀಡಿ ಅವಮಾನ ಮಾಡಲಾಗಿದೆ. ಹಾಗಾಗಿ ಕೆ.ಹೆಚ್.ಮುನಿಯಪ್ಪ ಅವರಿಗೆ ನೀಡಿರುವ ಖಾತೆಯನ್ನು ಬದಲಾಯಿಸಿ, ಅವರ ಹಿರಿತನದ ಆಧಾರದಲ್ಲಿ ಸಮಾಜ ಕಲ್ಯಾಣ ಇಲಾಖೆ ನೀಡಬೇಕು. ಹಾಗು ಅವರನ್ನು ಉಪಮುಖ್ಯಮಂತ್ರಿ ಮಾಡಬೇಕೆಂಬುದು ನಮ್ಮಗಳ ಆಗ್ರಹವಾಗಿದೆ ಎಂದರು.

ರಾಜ್ಯದಲ್ಲಿರುವ ಕಾಂಗ್ರೆಸ್ ಸರಕಾರ ಒಳಮೀಸಲಾತಿಯಲ್ಲಿ ಮಾದಿಗರಿಗೆ ತೀವ್ರ ಅನ್ಯಾಯ ಮಾಡಿದೆ.35 ವರ್ಷಗಳ ಸುಧೀರ್ಘ ಹೋರಾಟವನ್ನು ಕಡೆಗಣಿಸಿದೆ.ಪಕ್ಷದ ಪ್ರಾಣಾಳಿಕೆಯಲ್ಲಿ ಒಳಮೀಸಲಾತಿ ಜಾರಿ ಅಂಶವಿದ್ದರೂ ಸುಪ್ರಿಂಕೋರ್ಟಿನ ಆದೇಶ ಬರುವವರೆಗು ಒಳಮೀಸಲಾತಿ ವಿಚಾರವನ್ನು ನಿರ್ಲಕ್ಷ ಮಾಡುತ್ತಲೇ ಬಂದಿತ್ತು. ಅಲ್ಲದೆ ಸರಕಾರದ ಮುಂದೆ ನ್ಯಾ.ಎ.ಜೆ. ಸದಾಶಿವ ಆಯೋಗ,ಜೆ.ಸಿ.ಮಾಧುಸ್ವಾಮಿ ಉಪಸಮಿತಿಯ ವರದಿ ಇದ್ದರೂ ಅವುಗಳನ್ನು ಕೈಬಿಟ್ಟು, ನ್ಯಾ.ನಾಗಮೋಹನದಾಸ್ ಅವರ ಸಮಿತಿ ರಚಿಸಿ, ಅವರ ಶಿಫಾರಸ್ಸುಗಳನ್ನು ಕೈಬಿಟ್ಟು, ಮನಬಂದಂತೆ ಮೀಸಲಾತಿ ಹಂಚಿಕೆ ಮಾಡಿ ಮಾದಿಗರನ್ನು ವಂಚಿಸಲಾಗಿದೆ.

ಹೊಸ ಒಳಮೀಸಲಾತಿ ನೀತಿಯಲ್ಲಿಯೂ 3 ಕ್ಕಿಂತ ಕಡಿಮೆ ಹುದ್ದೆಗಳಿದ್ದಾಗ ಒಳಮೀಸಲಾತಿ ಅನ್ವಯಿಸು ವುದಿಲ್ಲ ಎಂಬ ನಿಯಮ ರೂಪಿಸಿ, ಒಳಮೀಸಲಾತಿ ಇದ್ದೂ ಇಲ್ಲದಂತೆ ಮಾಡಲಾಗಿದೆ.ಸರಕಾರ ನ್ಯಾ.ನಾಗಮೋಹನ ದಾಸ್ ವರದಿ ಅನ್ವಯ ಒಳಮೀಸಲಾತಿ ಹಂಚಿಕೆ ಮಾಡಬೇಕು.ಅಲೆಮಾರಿ ಮತ್ತು ಅರೆ ಅಲೆಮಾರಿಗಳಿಗೆ ಶೇ1ರ ಪ್ರತ್ಯೇಕ ಮೀಸಲಾತಿಯ ಜೊತೆಗೆ, ಪ್ರತ್ಯೇಕ ಅಲೆಮಾರಿ ಅಭಿವೃದ್ಧಿ ನಿಗಮ ಸ್ಥಾಪಿಸಿ, ಹೆಚ್ಚಿನ ಅನುದಾನ ನೀಡಬೇಕೆಂದು ಮಾರಸಂದ್ರ ಮುನಿಯಪ್ಪ ಸರಕಾರವನ್ನು ಒತ್ತಾಯಿಸಿದರು.

ಸರಕಾರಕ್ಕೆ ಈಗಾಗಲೇ ಮಾದಿಗ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಸಂಬಂಧ ಪಟ್ಟವರ ಗಮನಕ್ಕೆ ತಂದು, ನ್ಯಾಯ ಒದಗಿಸುವಂತೆ ಕೋರಲಾಗಿದೆ. ಸರಕಾರದ ಧೋರಣೆ ಹೀಗೆಯೇ ಮುಂದುವರೆದರೆ ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಗಳ ಜೊತೆಗೆ, ಮುಂಬರುವ ಚುನಾವಣೆಗಳಲ್ಲಿ ಮಾದಿಗರು ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಮಾರಸಂದ್ರ ಮುನಿಯಪ್ಪ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಒಳಮೀಸಲಾತಿ ಹೋರಾಟ ಸಮಿತಿ ಕಾರ್ಯಾಧ್ಯಕ್ಷರಾದ ಬಸವರಾಜ ಕೌತುಕ್, ಮಾದಿಗ ದಂಡೋರದ ಪಾವಗಡ ಶ್ರೀರಾಮ್, ದಸಂಸದ ರಾಜ್ಯಾಧ್ಯಕ್ಷ ಎಂ.ಗುರುಮೂರ್ತಿ, ಒಳಮೀಸಲಾತಿ ಹೋರಾಟ ಸಮಿತಿಯ ಡಾ.ವೈ.ಕೆ.ಬಾಲಕೃಷ್ಣಪ್ಪ, ಗಂಗಾಧರ್, ಅರೆ ಅಲೆಮಾರಿ ಸಂಘಟನೆಯ ಚಾವಡಿ ಲೋಕೇಶ್ ಸೇರಿದಂತೆ ರಾಜ್ಯ ಮತ್ತು ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# ಎಸ್ಐಆರ್ ಜಾಗೃತಿಗೆ ಪಾಲಿಕೆವಾರು ನೋಡಲ್

## ಅಧಿಕಾರಿಗಳ ನೇಮಕಕ್ಕೆ ಸೂಚನೆ

ಬೆಂಗಳೂರು

ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಕುರಿತ ಸ್ವೀಪ್ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಪಾಲಿಕೆವಾರು ನೋಡಲ್ ಅಧಿಕಾರಿಗಳನ್ನು ನೇಮಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ವರ್ಚುವಲ್ ಸಭೆಯಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ಕುರಿತು ಸಾರ್ವಜನಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸಲು ವಿವಿಧ ಸ್ವೀಪ್ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಜೂನ್ 30ರಿಂದ ಬೂತ್ ಮಟ್ಟದ ಅಧಿಕಾರಿಗಳು ಮನೆ–ಮನೆ ಭೇಟಿ ಆರಂಭಿಸಲಿದ್ದು, ಎಲ್ಲಾ ಬಿಎಲ್‌ಒಗಳು ಕಡ್ಡಾಯವಾಗಿ ಗುರುತಿನ ಚೀಟಿಯೊಂದಿಗೆ ಮತದಾರರನ್ನು ಭೇಟಿ ಮಾಡಬೇಕು ಎಂದು ಸೂಚಿಸಿದರು.

ಸಾಮಾಜಿಕ ಜಾಲತಾಣಗಳು, ವೆಬ್‌ತಾಣಗಳು, ಪಾಡ್‌ಕಾಸ್ಟ್‌ಗಳು ಹಾಗೂ ದೂರವಾಣಿ ಸಂವಾದ ಕಾರ್ಯಕ್ರಮಗಳ ಮೂಲಕ ಎಸ್ಐಆರ್ ಕುರಿತು ನಿಖರ ಮಾಹಿತಿ ತಲುಪಿಸಬೇಕು ಎಂದು ನಿರ್ದೇಶನ ನೀಡಿದರು. ಪ್ರತಿ ಪಾಲಿಕೆಯಲ್ಲಿ ನಡೆಯುವ ಸ್ವೀಪ್ ಚಟುವಟಿಕೆಗಳ ಮೇಲ್ವಿಚಾರಣೆಗೆ ನೋಡಲ್ ಅಧಿಕಾರಿಗಳನ್ನು ನೇಮಿಸಿ, ಪ್ರತಿದಿನದ ಪ್ರಗತಿ ವರದಿ ಸಲ್ಲಿಸಬೇಕು. ಜೊತೆಗೆ ಜಿಬಿಎ ಮಟ್ಟದಲ್ಲಿಯೂ ಒಬ್ಬ ನೋಡಲ್ ಅಧಿಕಾರಿಯನ್ನು ನೇಮಿಸಿ ಜೂನ್ 30ರವರೆಗೆ ನಿರಂತರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವಂತೆ ಸೂಚಿಸಲಾಯಿತು.

ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ವಸ್ತ್ರದ್ ಮಾತನಾಡಿ, ಮತದಾರ ನೋಂದಣಾಧಿಕಾರಿಗಳು, ಬಿಎಲ್‌ಒಗಳು ಸೇರಿದಂತೆ ಎಲ್ಲಾ ಸಿಬ್ಬಂದಿಗೆ ತರಬೇತಿ ನೀಡಲಾಗಿದ್ದು, ನಿಗದಿತ ವೇಳಾಪಟ್ಟಿಯಂತೆ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ ಎಂದು ತಿಳಿಸಿದರು.

ನಗರದ ವಿವಿಧ ಭಾಗಗಳಲ್ಲಿ ಜಾಗೃತಿ ರ್‍ಯಾಲಿ, ಮ್ಯಾರಥಾನ್, ಸೈಕ್ಲೋಥಾನ್, ತ್ರಿಚಕ್ರ ವಾಹನ ಜಾಥಾ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಶಾಲೆಗಳು, ಕಾಲೇಜುಗಳು, ವಿಶ್ವವಿದ್ಯಾಲಯಗಳು, ನರ್ಸಿಂಗ್ ಕಾಲೇಜುಗಳು ಹಾಗೂ ವಿವಿಧ ಸಂಘ–ಸಂಸ್ಥೆಗಳಲ್ಲಿ ಮತದಾರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವಂತೆ ಸೂಚಿಸಿದರು. ಹಿರಿಯ ನಾಗರಿಕರು, ದಿವ್ಯಾಂಗರು, ಮಹಿಳಾ ಮತದಾರರು, ಆದಿವಾಸಿ ಸಮುದಾಯಗಳು, ವಲಸೆ ಕಾರ್ಮಿಕರು, ನಿರಾಶ್ರಿತರು, ದುರ್ಬಲ ವರ್ಗಗಳು ಹಾಗೂ ಸೇವಾ ಮತದಾರರನ್ನು ತಲುಪುವ ಉದ್ದೇಶದಿಂದ ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಸ್ವೀಪ್ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಎಲ್ಲಾ ಛಾಯಾಚಿತ್ರಗಳು ಮತ್ತು ದೃಶ್ಯಾವಳಿಗಳನ್ನು ಸಂಬಂಧಿತ ಜಾಲತಾಣದಲ್ಲಿ ಅಪ್‌ಲೋಡ್ ಮಾಡಿ, ಮಾಹಿತಿಯನ್ನು ನಿರಂತರವಾಗಿ ನವೀಕರಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ನಗರದ ಜನಪ್ರತಿನಿಧಿಗಳು, ಹಿರಿಯ ಅಧಿಕಾರಿಗಳು, ಸಿನಿಮಾ ಕ್ಷೇತ್ರದ ಗಣ್ಯರು, ನ್ಯಾಯಾಧೀಶರು, ಕ್ರೀಡಾಪಟುಗಳು, ಮಾಧ್ಯಮ ಪ್ರತಿನಿಧಿಗಳು ಹಾಗೂ ಪ್ರಶಸ್ತಿ ಪುರಸ್ಕೃತರ ಪಟ್ಟಿಯನ್ನು ಸಿದ್ಧಪಡಿಸಿ, ಅವರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಮಹೇಶ್ವರ್ ರಾವ್ ಸೂಚಿಸಿದರು. ಸಭೆಯಲ್ಲಿ ವಿವಿಧ ನಗರ ಪಾಲಿಕೆಗಳ ಆಯುಕ್ತರು, ಅಪರ ಆಯುಕ್ತರು, ಮತದಾರ ನೋಂದಣಾಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿದ್ಯುತ್ ಖಾಸಗೀಕರಣಕ್ಕೆ ವಿರೋಧ; ಒಗ್ಗಟ್ಟಿನ ಹೋರಾಟಕ್ಕೆ ಕರೆ



ಕೋಲಾರ

ಬೆಸ್ಕಾಂ ಸೇರಿದಂತೆ ವಿವಿಧ ಎಸ್ಕಾಂಗಳಲ್ಲಿನ ವಿದ್ಯುತ್ ವಿತರಣಾಜಾಲ ಹಾಗೂ ನಿರ್ವಹಣೆಯನ್ನು ಟಾಟಾ ಪವರ್ ಕಂಪನಿಗೆ ವಹಿಸಲು ಮುಂದಾಗಿರುವ ಕ್ರಮವನ್ನು ವಿರೋಧಿಸಿ ಒಗ್ಗಟ್ಟಿನಿಂದ ಹೋರಾಡಲು ತೀರ್ಮಾನ ಕೈಗೊಳ್ಳಲಾಗಿದೆ.

ನಗರದ ಕೆಇಬಿ ಸಮುದಾಯ ಭವನದಲ್ಲಿ ಬುಧವಾರ ವಿದ್ಯುತ್ ಖಾಸಗೀಕರಣ ವಿರೋಧಿಸಿ ಜೆಡಿಎಸ್ ಮುಖಂಡ ಸಿಎಂಆರ್ ಶ್ರೀನಾಥ್ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ವಿವಿಧ ಸಂಘಟನೆಗಳ ಮುಖಂಡರ ತುರ್ತು ಸಮಾಲೋಚನೆ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ರೈತ ಸಂಘ, ದಲಿತ ಸಂಘಟನೆಗಳು, ಕನ್ನಡ ಪರ ಸಂಘಟನೆಗಳು, ಪ್ರಗತಿಪರ ಸಂಘಟನೆಗಳು, ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಪದಾಧಿಕಾರಿಗಳು, ಬೆಸ್ಕಾಂ ಅಧಿಕಾರಿಗಳು, ನೌಕರರು ಕೆಪಿಟಿಸಿಎಲ್ ನೌಕರರ ಸಂಘದವರು ಈ ಸಭೆಯಲ್ಲಿ ಪಾಲ್ಗೊಂಡಿದ್ದರು.

ಖಾಸಗೀಕರಣ ಮಾಡುವ ಪ್ರಸ್ತಾವವನ್ನು ಎಲ್ಲರೂ ತಿರಸ್ಕರಿಸಿದರು. ಆದಾಗ್ಯೂ ಖಾಸಗೀಕರಣದತ್ತ ಹೆಜ್ಜೆ ಇಟ್ಟರೆ ಹೋರಾಟ ಮಾಡಲು ಸರ್ವಾನುಮತದಿಂದ ತೀರ್ಮಾನ ಅಂಗೀಕರಿಸಲಾಯಿತು. ಪತ್ರ ಚಳವಳಿ ನಡೆಸಲು ಸಲಹೆಗಳು ಬಂದವು.

ಸಿಎಂಆರ್ ಶ್ರೀನಾಥ್ ಮಾತನಾಡಿ, ಕೋಲಾರ ಸೇರಿದಂತೆ 19 ಜಿಲ್ಲೆಗಳಲ್ಲಿ ಖಾಸಗೀಕರಣದ ಪ್ರಕ್ರಿಯೆ ನಡೆಯುತ್ತಿದೆ. ಬರೀ ಎಸ್ಕಾಂಗಳ ನೌಕರರು ಮಾತ್ರವಲ್ಲ; ಬಡವರ, ರೈತರು ಸಾಮಾನ್ಯ ಜನರಿಗೂ ಸಮಸ್ಯೆ ಉಂಟಾಗಲಿದೆ ಎಂದರು.

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗಕ್ಕೆ (ಕೆಇಆರ್‌ಸಿ) ಆಕ್ಷೇಪಣೆ ಸಲ್ಲಿಸಲು ಜೂನ್ 23ರವರೆಗೆ ಅವಕಾಶವಿದೆ. ನೌಕರರು, ಸಣ್ಣ ವ್ಯಾಪಾರಿಗಳು, ಸಣ್ಣ ಉದ್ಯಮದಾರರು ಸೇರಿದಂತೆ ಸಂಬಂಧಪಟ್ಟ ಎಲ್ಲಾ ಗ್ರಾಹಕರು ಆಕ್ಷೇಪಣೆ ಸಲ್ಲಿಸಬೇಕು. ಖಾಸಗೀಕರಣದ ಯತ್ನದಿಂದ ಸರ್ಕಾರ ಹಿಂದೆ ಸರಿಯಬೇಕು ಎಂದು ಹೇಳಿದರು.

ಪ್ರತಿ ಕ್ಷೇತ್ರದಲ್ಲಿ ಶಾಸಕರನ್ನು ಭೇಟಿಯಾಗಿ ಖಾಸಗೀಕರಣ ಮಾಡದಂತೆ ಮನವಿಪತ್ರ ಸಲ್ಲಿಸಬೇಕು. ಒಕ್ಕೊರಲಿನಿಂದ ಹೋರಾಟ ನಡೆಸಬೇಕು. ಖಾಸಗೀಕರಣವನ್ನು ಖಂಡಿಸಬೇಕು. ಇದು ಪ್ರಜ್ಞಾವಂತರ ಜವಾಬ್ದಾರಿ. ಎಸ್ಕಾಂಗಳ 84 ಸಾವಿರ ಉದ್ಯೋಗಿಗಳು ಹಾಗೂ 54 ಸಾವಿರ ಪಿಂಚಣಿದಾರರ ಬದುಕು ಇದರಲ್ಲಿ ಅಡಗಿದೆ. ಕೆಪಿಟಿಸಿಎಲ್, ಎಸ್ಕಾಂ ಸಂಸ್ಥೆ ಕನ್ನಡ ನಾಡಿನದ್ದು. ಉಗ್ರ ಹೋರಾಟದ ಮೂಲಕ ನಮ್ಮ ಸಂಸ್ಥೆ ಉಳಿಸಬೇಕು ಎಂದು ಕರೆ ನೀಡಿದರು.

ಸಾಹಿತಿ ಕೋಟಿಗಾನಹಳ್ಳಿ ರಾಮಯ್ಯ ಮಾತನಾಡಿ, ಪ್ರಭುತ್ವವು ಕಾರ್ಪೊರೇಟ್ ಸಂಸ್ಥೆಗಳ ದಳ್ಳಾಳಿಗಳಾದಾಗ ಈ ಸಮಸ್ಯೆ ಉದ್ಭವಿಸುತ್ತದೆ. ಕ್ರಿಯೆಗೆ ಪ್ರತಿಕ್ರಿಯೆ ಆದರೆ ಹೋರಾಟ ಯಶಸ್ವಿ ಆಗಲ್ಲ. ದೆಹಲಿಯಲ್ಲಿ ರೈತರು ನಡೆಸಿದ ಹೋರಾಟದಂತೆ ನಡೆಯಬೇಕು. ಮಾದರಿ ಹೋರಾಟ ರೂಪಿಸಬೇಕು ಎಂದು ಸಲಹೆ ನೀಡಿದರು.

ಸೂಪರಿಂಟೆಂಡೆಂಟ್ ಎಂಜಿನಿಯರ್ ದೇವಿ ರೆಡ್ಡಿ, ಬೆಸ್ಕಾಂ ಕಾರ್ಯಪಾಲಕ ಎಂಜಿನಿಯರ್, ಕೆಪಿಟಿಸಿಎಲ್ ನೌಕರರ ಒಕ್ಕೂಟದ ವೆಂಕಟೇಶ್, ಅಂಥೋಣಿ ದಾಸ್ ಹಾಗೂ ನೌಕರರು ಇದ್ದರು. ಸಭೆಯ ಬಳಿಕ ವಿವಿಧ ಸಂಘಟನೆಗಳ ಮುಖಂಡರು ನಗರದ ಡೂಂಲೈಟ್ ಸರ್ಕಲ್‌ನಲ್ಲಿ ಸಾಂಕೇತಿಕವಾಗಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

# ಬಿಡದಿ ಟೌನ್‌ಶಿಪ್ ಯೋಜನೆಗೆ ವಿರೋಧ ರಾಜಕೀಯ ಪ್ರೇರಿತ: ಶಾಸಕ ಬಾಲಕೃಷ್ಣ

ಬಿಡದಿ

"ಮುಖ್ಯಮಂತ್ರಿಯಾಗಿರುವ ಡಿ.ಕೆ.ಶಿವಕುಮಾರ್ ಅವರನ್ನು ರಾಜಕೀಯವಾಗಿ ಗುರಿಯಾಗಿಸಿಕೊಂಡು ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಬಿಡದಿ ಟೌನ್‌ಶಿಪ್ ಯೋಜನೆಗೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ರೈತರ ಹಿತದ ಬಗ್ಗೆ ನಿಜವಾದ ಕಾಳಜಿ ಇದ್ದಿದ್ದರೆ, ಹಿಂದಿನ ಸರ್ಕಾರಗಳ ಅವಧಿಯಲ್ಲೇ ಈ ಯೋಜನೆಯನ್ನು ಕೈಬಿಡಬಹುದಾಗಿತ್ತು" ಎಂದು ಮಾಗಡಿ ಶಾಸಕ ಬಾಲಕೃಷ್ಣ ಆರೋಪಿಸಿದರು.

ಬಿಡದಿಯ ಸಮೀಪ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗಲೂ ಭೂಸ್ವಾಧೀನ ಪ್ರಕ್ರಿಯೆ ನಡೆಯುತ್ತಿತ್ತು. ಆಗಲೂ ಕೆಲವು ರೈತರು ವಿರೋಧ ವ್ಯಕ್ತಪಡಿಸಿದ್ದರು. ಆದರೆ ಆ ಸಂದರ್ಭದಲ್ಲಿ ಎಚ್.ಡಿ. ಕುಮಾರಸ್ವಾಮಿ ಅಥವಾ ಆರ್. ಅಶೋಕ್ ಅವರು ರೈತರ ಪರವಾಗಿ ಹೋರಾಟ ನಡೆಸಲಿಲ್ಲ. ಈಗ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಆಗಿರುವುದನ್ನು ಸಹಿಸಿಕೊಳ್ಳಲಾಗದೆ ಈ ವಿಚಾರವನ್ನು ರಾಜಕೀಯವಾಗಿ ಬಳಸಿಕೊಳ್ಳಲಾಗುತ್ತಿದೆ" ಎಂದು ಹೇಳಿದರು.



ಬಿಜೆಪಿ ನಾಯಕರು ಬಿಡದಿಗೆ ಭೇಟಿ ನೀಡಿ ಟೌನ್‌ಶಿಪ್ ಯೋಜನೆ ವಿರುದ್ಧ ಹೋರಾಟ ನಡೆಸುತ್ತಿರುವ ಕುರಿತು ಪ್ರತಿಕ್ರಿಯಿಸಿದ ಅವರು, "ಯಡಿಯೂರಪ್ಪ ಸರ್ಕಾರದ ಅವಧಿಯಲ್ಲಿ ಸಾವಿರ ಎಕರೆ ಭೂಮಿ ಸ್ವಾಧೀನ ಪ್ರಕ್ರಿಯೆ ಆರಂಭವಾಗಿತ್ತು. ಆಗ ಸರ್ಕಾರ ಬಯಸಿದ್ದರೆ ಯೋಜನೆಯನ್ನು ಕೈಬಿಡಬಹುದಾಗಿತ್ತು. ರೈತರು ಇಷ್ಟು ವರ್ಷ ಹೋರಾಟ ನಡೆಸುವ ಪರಿಸ್ಥಿತಿಯೇ ಉಂಟಾಗುತ್ತಿರಲಿಲ್ಲ" ಎಂದರು.

"ಆ ಸಂದರ್ಭದಲ್ಲಿ ಯಡಿಯೂರಪ್ಪ ಹಾಗೂ ವಿಜಯೇಂದ್ರ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದೆವು. ರೈತರಿಗೆ ಉತ್ತಮ ಪರಿಹಾರ ಕೊಡಿಸುವ ಭರವಸೆ ನೀಡಲಾಗಿತ್ತು. ಕೈಗಾರಿಕಾ ಅಭಿವೃದ್ಧಿಗೆ ಸಹಕಾರ ನೀಡುವಂತೆ ಮನವಿ ಮಾಡಲಾಗಿತ್ತು. ಈಗ ಅದೇ ನಾಯಕರು ಯೋಜನೆ ವಿರುದ್ಧ ಹೋರಾಟ ನಡೆಸುತ್ತಿರುವುದು ಅವಕಾಶವಾದಿ ರಾಜಕಾರಣಕ್ಕೆ ಉದಾಹರಣೆ" ಎಂದು ಟೀಕಿಸಿದರು.

ಟೌನ್‌ಶಿಪ್ ಯೋಜನೆಯನ್ನು ಡಿ.ಕೆ. ಶಿವಕುಮಾರ್ ಆರಂಭಿಸಿಲ್ಲ ಎಂದು ಸ್ಪಷ್ಟಪಡಿಸಿದ ಅವರು, "ಈ ಯೋಜನೆಗೆ ಮೂಲ ಚಾಲನೆ ನೀಡಿದ್ದು ಎಚ್.ಡಿ. ಕುಮಾರಸ್ವಾಮಿ ಅವರೇ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ರೈತರು ರೆಡ್‌ಝೋನ್ ತೆರವುಗೊಳಿಸುವಂತೆ ಅಥವಾ ಸೂಕ್ತ ಪರಿಹಾರ ನೀಡುವಂತೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಪ್ರಕ್ರಿಯೆ ಮುಂದುವರಿಯಿತು" ಎಂದರು.

"ಯೋಜನೆಯ ವ್ಯಾಪ್ತಿಯಲ್ಲಿ ಈಗಾಗಲೇ ಸಾವಿರ ಎಕರೆಗೂ ಹೆಚ್ಚು ಭೂಮಿ ಸ್ವಾಧೀನಪಡಿಸಿಕೊಳ್ಳಲಾಗಿದೆ. ಆಗ ಪ್ರತಿ ಎಕರೆಗೆ ಸುಮಾರು 90 ಲಕ್ಷದಿಂದ 1 ಕೋಟಿ ರೂಪಾಯಿವರೆಗೆ ಪರಿಹಾರ ನೀಡಲಾಗಿತ್ತು ಎಂದರು.

# ಸಿಸಿ ರಸ್ತೆ ಕಾಮಗಾರಿ ಅವಾಂತರ: ಮನೆಗಳಿಗೆ ನುಗ್ಗಿದ ಮಳೆನೀರು, ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಗ್ರಾಮಸ್ಥರ ಆಕ್ರೋಶ

ಪಾವಗಡ

ಅಭಿವೃದ್ಧಿ ಕಾಮಗಾರಿಗಳು ಜನರ ಜೀವನವನ್ನು ಸುಗಮಗೊಳಿಸಬೇಕಾದರೆ, ಚನ್ನಸಾಗರದಹಟ್ಟಿ ಗ್ರಾಮದಲ್ಲಿ ನಡೆದ ಸಿಸಿ ರಸ್ತೆ ಕಾಮಗಾರಿ ಗ್ರಾಮಸ್ಥರ ಬದುಕಿಗೆ ಹೊಸ ಸಂಕಷ್ಟವನ್ನು ತಂದೊಡ್ಡಿದೆ. ಇತ್ತೀಚೆಗೆ ಸುರಿದ ಭಾರಿ ಮಳೆಯಿಂದ ಮಳೆನೀರು ಸರಾಗವಾಗಿ ಹರಿದು ಹೋಗದೆ ಹಲವು ಮನೆಗಳಿಗೆ ನುಗ್ಗಿ ಗೃಹೋಪಯೋಗಿ ವಸ್ತುಗಳು, ದವಸ–ಧಾನ್ಯಗಳು ಹಾನಿಗೊಳಗಾಗಿವೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ತಾಲ್ಲೂಕಿನ ಸಿ.ಕೆ.ಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚನ್ನಸಾಗರದಹಟ್ಟಿ ಗ್ರಾಮದಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ವೇಳೆ ಅಗತ್ಯ ತಾಂತ್ರಿಕ ಮಾನದಂಡಗಳನ್ನು ಪಾಲಿಸಿಲ್ಲ ಎಂಬ ಆರೋಪ ಕೇಳಿಬಂದಿದೆ. ರಸ್ತೆ ಮಟ್ಟವನ್ನು ಸಮರ್ಪಕವಾಗಿ ನಿರ್ಧರಿಸದೆ ನಿರ್ಮಿಸಿರುವ ಪರಿಣಾಮ ಮಳೆನೀರು ಮನೆಗಳತ್ತ ಹರಿದು ಬಂದು ನಿವಾಸಿಗಳಿಗೆ ತೊಂದರೆ ಉಂಟುಮಾಡುತ್ತಿದೆ ಎಂದು ಸ್ಥಳೀಯರು ದೂರಿದ್ದಾರೆ.



ಗ್ರಾಮಸ್ಥರ ಪ್ರಕಾರ, ರಸ್ತೆಯ ಎರಡೂ ಬದಿಗಳಲ್ಲಿ ಸಮರ್ಪಕ ಚರಂಡಿ ವ್ಯವಸ್ಥೆ ಹಾಗೂ ನೀರು ಹೊರಹಾಕುವ ಮಾರ್ಗಗಳನ್ನು ಕಲ್ಪಿಸದೇ ಕಾಮಗಾರಿ ನಡೆಸಲಾಗಿದೆ. ಇದರಿಂದ ಮಳೆನೀರು ರಸ್ತೆಯಲ್ಲೇ ಸಂಗ್ರಹವಾಗಿ ಮನೆಗಳೊಳಗೆ ನುಗ್ಗುತ್ತಿದೆ. ತಾಂತ್ರಿಕ ಲೋಪದೋಷಗಳಿಂದ ಕೂಡಿರುವ ಕಾಮಗಾರಿಯಲ್ಲಿ ಸಂಬಂಧಪಟ್ಟ ಅಭಿಯಂತರರ ನಿರ್ಲಕ್ಷ್ಯ ಸ್ಪಷ್ಟವಾಗಿ ಗೋಚರಿಸುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಮಕ್ಕಳು, ಮಹಿಳೆಯರು ಹಾಗೂ ವೃದ್ಧರು ರಾತ್ರಿಯಿಡೀ ಆತಂಕದಲ್ಲಿ ಕಾಲ ಕಳೆಯುವಂತಾಗಿದೆ. ಮನೆಗಳಲ್ಲಿ ನೀರು

> ಇಷ್ಟೆಲ್ಲ ಸಮಸ್ಯೆಗಳು ಎದುರಾದರೂ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸದಿರುವುದು ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ. ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಲ್ಯಾಂಡ್ ಆರ್ಮಿ ಸಂಸ್ಥೆಯ ಅಭಿಯಂತರರು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯ ಮೂಲವನ್ನು ಪರಿಶೀಲಿಸಿ, ಹಾನಿಗೊಳಗಾದ ಕುಟುಂಬಗಳಿಗೆ ಪರಿಹಾರ ಒದಗಿಸಬೇಕು.

ನುಗ್ಗಿರುವ ಕಾರಣ ಸಾಮಾನ್ಯ ಜೀವನ ಅಸ್ತವ್ಯಸ್ತಗೊಂಡಿದ್ದು, ಆರೋಗ್ಯ ಹಾಗೂ ಸುರಕ್ಷತೆ ಸಮಸ್ಯೆಗಳೂ ಎದುರಾಗುವ ಭೀತಿ ಮೂಡಿದೆ.

ಈ ಕುರಿತು ಹಲವು ಬಾರಿ ಗ್ರಾಮ ಪಂಚಾಯಿತಿ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ವಿಶೇಷವಾಗಿ ಸಿ.ಕೆ.ಪುರ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ ರಂಗಸ್ವಾಮಿ ಅವರಿಗೆ ಮನವಿ ಸಲ್ಲಿಸಿದರೂ ಸ್ಪಂದನೆ ದೊರೆತಿಲ್ಲ ಎಂದು ಆರೋಪಿಸಿದ್ದಾರೆ.

ಇಷ್ಟೆಲ್ಲ ಸಮಸ್ಯೆಗಳು ಎದುರಾದರೂ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸದಿರುವುದು ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ. ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಲ್ಯಾಂಡ್ ಆರ್ಮಿ ಸಂಸ್ಥೆಯ ಅಭಿಯಂತರರು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯ ಮೂಲವನ್ನು ಪರಿಶೀಲಿಸಿ, ಹಾನಿಗೊಳಗಾದ ಕುಟುಂಬಗಳಿಗೆ ಪರಿಹಾರ ಒದಗಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಮಳೆನೀರು ಮನೆಗಳಿಗೆ ನುಗ್ಗದಂತೆ ಶಾಶ್ವತ ಪರಿಹಾರ ಕ್ರಮಗಳನ್ನು ಕೈಗೊಂಡು ಗ್ರಾಮಸ್ಥರ ಸಂಕಷ್ಟಕ್ಕೆ ಅಂತ್ಯ ಹಾಡಬೇಕು ಎಂಬುದು ಸಾರ್ವಜನಿಕರ ಆಗ್ರಹವಾಗಿದೆ.

ಸುಮಾರು ಮೂರು ತಿಂಗಳ ಹಿಂದೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಗ್ರಾಮಕ್ಕೆ ಭೇಟಿ ನೀಡಿ ಜನಸಂಪರ್ಕ ಸಭೆ ನಡೆಸಿ ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿದ್ದರು. ಅಗತ್ಯ ಕ್ರಮ ಕೈಗೊಳ್ಳುವ ಭರವಸೆಯನ್ನೂ ನೀಡಿದ್ದರು. ಆದರೆ ಇದುವರೆಗೂ ಯಾವುದೇ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆತಿಲ್ಲ ಎಂದು ಗ್ರಾಮಸ್ಥರು ಬೇಸರ ವ್ಯಕ್ತಪಡಿಸಿದ್ದಾರೆ.

ಜಿಲ್ಲಾಧಿಕಾರಿಗಳ ಭೇಟಿ ಬಳಿಕವೂ ಗ್ರಾಮದಲ್ಲಿ ಯಾವುದೇ ಸುಧಾರಣೆ ಕಂಡುಬಂದಿಲ್ಲ. ಮಳೆನೀರು ಮನೆಗಳಿಗೆ ನುಗ್ಗುವ ಸಮಸ್ಯೆ ಸೇರಿದಂತೆ ಹಲವು ಮೂಲಭೂತ ಸಮಸ್ಯೆಗಳು ಹಾಗೆಯೇ ಮುಂದುವರಿದಿವೆ.

ಇದರಿಂದ ಆಡಳಿತದ ಕಾರ್ಯವೈಖರಿಯ ಕುರಿತು ಪ್ರಶ್ನೆಗಳು ಉದ್ಭವಿಸಿವೆ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಎಚ್ಚೆತ್ತುಕೊಂಡು ಗ್ರಾಮಸ್ಥರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy